ಸಂಪುಟ: 14 Volume | ಸಂಚಿಕೆ: 31 Issue | ಪುಟಗಳು 08 Pages | ಬುಧವಾರ 06 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಕರುಣೆ ಹೃದಯದ ಅಂತರಾಳದಿಂದ ಬರಬೇಕು. ಅದೇ ನಿಜವಾದ ಕರುಣೆ.

–ಮಹಾತ್ಮಾ ಗಾಂಧಿ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



ಸಚಿವ ಜಮೀರ್ ಅಹಮದ್ ಖಾನ್ ಅವರು ಕೇರಳದ ಮಲಪ್ಪುರಂನಲ್ಲಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಅಧ್ಯಕ್ಷರಾದ ಪಾಣಕ್ಕಾಡ್ ಸಾದಿಕ್ ಅಲಿ ಶಿಹಾಬ್ ತಂಗಲ್, ಪಿ ಕೆ ಕುನ್ಹಾಲಿಕುಟ್ಟಿ ಹಾಗೂ ಮುಸ್ಲಿಂ ಲೀಗ್ ಶಾಸಕರೊಂದಿಗೆ ಸಮಾಲೋಚನೆ ನಡೆಸಿದರು. ಮೌಲಾನಾ ಶಾಫಿ ಸಾದಿ, ನೌಫಲ್, ವಖ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಅನ್ವರ್ ಬಾಷಾ, ಮುಖಂಡರಾದ ದೀಪಕ್ ಚಿಂಚೋರೆ ಉಪಸ್ಥಿತರಿದ್ದರು.

## ಅವಧಿ ವಿಸ್ತರಣೆ, ಮೇ 8 ಕೊನೆ ದಿನ

**ಬೆಂಗಳೂರು:** ಕರ್ನಾಟಕ ರಾಜ್ಯದ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿ ಹೊರಡಿಸಲಾದ ಕರಡು ಪ್ರಕಟಣೆಗೆ ಸಾರ್ವಜನಿಕರು ಆಕ್ಷೇಪಣೆಯನ್ನು ಸಲ್ಲಿಸುವ ಅವಧಿಯನ್ನು ಸಾರ್ವಜನಿಕರ ಕೋರಿಕೆಯ ಮೇರೆಗೆ 2026ರ ಮೇ 08ರ ಸಂಜೆ 5:30ರವರೆಗೆ ವಿಸ್ತರಿಸಿದೆ ಎಂದು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಪ್ರಕಟಣೆ ತಿಳಿಸಿದೆ. ಸಾರ್ವಜನಿಕರು ಆನ್ ಲೈನ್ ಮೂಲಕ ಮುಂದಿನ ವಿಳಾಸಕ್ಕೆ ತಮ್ಮ ಮನವಿಗಳನ್ನು ಸಲ್ಲಿಸಬಹುದು.https://rdpr.karnataka.gov.in/rdc/public/ ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸುವವರು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ, 3ನೇ ಗೇಟ್, 2ನೇ ಮಹಡಿ, ಕೊಠಡಿ ಸಂಖ್ಯೆ: 222/೦, ಬಹುಮಹಡಿ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು–560001 ಇಲ್ಲಿಗೆ ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ರಾಜ್ಯದ 31 ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ, ಸ್ವೀಕರಿಸಿದ ಆಕ್ಷೇಪಣೆ/ಅಹವಾಲುಗಳ ಬಗ್ಗೆ ಅದಾಲತ್ ಈ ತಿಂಗಳ 12ರಿಂದ 15ರವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗೇಟ್–ನಂ–2, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಕೊಠಡಿ ಸಂ–ಖ್ಯೆ–229 ಬೆಂಗಳೂರು–560001 ಇಲ್ಲಿ ನಡೆಯುವುದು. ಅದಾಲತ್‌ನಲ್ಲಿ ಭಾಗವಹಿಸಲು ಇಚ್ಛಿಸುವವರು ತಮ್ಮ ಆಧಾರ್ ಅಥವಾ ಗುರುತಿನ ಚೀಟಿ ಅಥವಾ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರಬೇಕು ಎಂದು ಆಯೋಗ ತಿಳಿಸಿದೆ. ರಾಜ್ಯದ 31 ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ, ಸ್ವೀಕರಿಸಿದ ಆಕ್ಷೇಪಣೆ/ಅಹವಾಲುಗಳ ಬಗ್ಗೆ ಅದಾಲತ್ ಅನ್ನು ಈ ಕೆಳಕಂಡ ದಿನಾಂಕಗಳಂದು ಅದರ ಮುಂದೆ ಸೂಚಿಸಿರುವ ಜಿಲ್ಲೆಗಳ ಆಕ್ಷೇಪಣೆಗಳನ್ನು ತೆಗೆದುಕೊಳ್ಳಲಾಗುವುದು.

## ವಿವಾಹ: ನವ ವಸಂತಕ್ಕೆ ಕಾಲಿಟ್ಟ ಜೋಡಿ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಸಾಮೂಹಿಕ ವಿವಾಹ ಕಾರ್ಯಕ್ರಮಗಳಿಂದ ಬಡವರ ಆರ್ಥಿಕ ಹೊರೆ ತಗ್ಗುತ್ತದೆ ಎಂದು ಶಾಸಕ ಜೆ.ಎನ್. ಗಣೇಶ ಹೇಳಿದರು.

ತಾಲೂಕಿನ ದೇವಲಾಪುರ ಗ್ರಾಮದಲ್ಲಿ ಕಂಡಲೇರು ಗೋತ್ರದ ಶ್ರೀ ನೀಲಿಗಿರಿಮಾನ್ಯ ಮತ್ತು ಶ್ರೀ ನೀಲಿಗಿರಿಮಾನ್ಯ ಪಟ್ಟದ ದೇವರ ಕಾರ್ಯಕ್ರಮದ ಶ್ರೀ ನೀಲಿಗಿರೇಶ್ವರ ಪಟ್ಟದ ದೇವರು, ವಸಿಗೇರಪ್ಪ, ಮಲ್ಲೇಶ್ವರ, ಬೀರಲಿಂಗೇಶ್ವರ, ಹೀರಲಿಂಗೇಶ್ವರ, ನೀಲಿಗಿರೇಶ್ವರ ಸಿರವಾರ, ನೀಲಿಗಿರೇಶ್ವರ ಹುಲಕುರ್ತಿ, ಮಲೇಶ್ವರ ಹುಲಕುರ್ತಿ, ಮುರುಗಿಸಿದ್ದೇಶ್ವರ ಹುಲಕಿರ್ತಿ ದೇವರ ಪ್ರಯುಕ್ತ ಹಮ್ಮಿಕೊಂಡಿದ್ದ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ನೂತನ ವಧು–ವರರಿಗೆ ಆಶೀರ್ವಾದಿಸಿದ ನಂತರ ಮಾತನಾಡಿದರು.

ಪಟ್ಟದ ದೇವರ ಕಾರ್ಯಕ್ರಮದ ಸನ್ನಿಧಾನದಲ್ಲಿ ಮದುವೆಯಾದವರು ಗುರುಹಿರಿಯರನ್ನು ಗೌರವಿಸುವ



ಮೂಲಕ ಆದರ್ಶ ದಂಪತಿಗಳಾಗಿ ಬಾಳಬೇಕು' ಎಂದು ತಿಳಿಸಿದರು.

ಹರಿಗಿಡೋಣ ಅಭಿನವ ಸಿದ್ಧಲಿಂಗಸ್ವಾಮಿ, ಒಡೆಯರು ಶರಣಯ್ಯಸ್ವಾಮಿ, ರೋಹಿತ್ ಸ್ವಾಮಿ, ಗುರುಲಿಂಗಯ್ಯ ಸ್ವಾಮಿ, ಅಮಾಜಯ್ಯಸ್ವಾಮಿ, ವಿರುಪಾಕ್ಷಯ್ಯಸ್ವಾಮಿ, ಜಂಬಯ್ಯಸ್ವಾಮಿ ಅವರ ದಿವ್ಯ ಸಾನಿಧ್ಯದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಮತ್ತು ಉಚಿತ ಸಾಮೂಹಿಕ ವಿವಾಹಗಳು ನೆರವೇರಿದವು.

## ಹೋಂ ಸ್ಟೇಗಳಿಗೆ ನೋಂದಣಿ ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ವೇಗವಾಗಿ ವಿಸ್ತರಿಸುತ್ತಿರುವ ಹಿನ್ನಲೆಯಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಹೋಂ ಸ್ಟೇ ಘಟಕಗಳನ್ನು ನಿಯಂತ್ರಿಸಿ, ಪ್ರವಾಸಿಗರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ವಸತಿ ವ್ಯವಸ್ಥೆ ಒದಗಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆಯು ಕಡ್ಡಾಯ ನೋಂದಣಿ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದಿದೆ.

ಇತ್ತೀಚಿನ ದಿನಗಳಲ್ಲಿ ಬಾದಾಮಿ, ಪಟ್ಟದಕಲ್ಲು, ಐಹೊಳೆ, ಕೂಡಲಸಂಗಮ ಸೇರಿದಂತೆ ವಿವಿಧ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವುದರಿಂದ ಅನೇಕ ಕಡೆಗಳಲ್ಲಿ ಅನುಮತಿ ಇಲ್ಲದೇ ಹೋಂ ಸ್ಟೇಗಳು ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ. ಇಂತಹ ಅನಧಿಕೃತ ಘಟಕಗಳು ಪ್ರವಾಸಿಗರ ಸುರಕ್ಷತೆ, ಸ್ವಚ್ಛತೆ, ಸರ್ಕಾರದ ನಿಯಮಗಳು ಹಾಗೂ ಸಾರ್ವಜನಿಕ ಶಾಂತಿ, ಸುವ್ಯವಸ್ಥೆಗೆ ಧಕ್ಕೆಯನ್ನುಂಟು ಮಾಡುವ ಸಾಧ್ಯತೆ ಇದೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಹೋಂ ಸ್ಟೇ ಮಾಲಿಕರು ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ಮಾರ್ಗಸೂಚಿಗಳ ಪ್ರಕಾರ ಕಡ್ಡಾಯವಾಗಿ ನೋಂದಣಿ ಪಡೆದು, ಕಾನೂನು ಬದ್ಧವಾಗಿ ಕಾರ್ಯಾಚರಣೆ ಮಾಡಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಕಟ್ಟಡದ ಸುರಕ್ಷತೆ, ಸೌಲಭ್ಯಗಳು, ಅಗ್ನಿ ನಿಯಂತ್ರಣ ವ್ಯವಸ್ಥೆ, ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ, ಅತಿಥಿಗಳ ದಾಖಲೆ ಸಂಗ್ರಹಣೆ, ಪೊಲೀಸ್ ಪರಿಶೀಲನೆ ಸೇರಿದಂತೆ ಅನೇಕ ಅಂಶಗಳನ್ನು ಪರಿಶೀಲಿಸಲಾಗುತ್ತದೆ.

# ಮೇ 9ಕ್ಕೆ ನೂತನ ಸಿಎಂ ಪ್ರಮಾಣ

• ಮಲ್ಲಮ್ಮ ನುಡಿ ವಾರ್ತೆ ಕೋಲ್ಕತ್ತಾ


15 ವರ್ಷಗಳ ದೀದಿ ಆಡಳಿತ ಕೊನೆಗೊಳಿಸಿ ಅಧಿಕೃತವಾಗಿ ಮೇ 9ರಂದು ಪಶ್ಚಿಮ ಬಂಗಾಳದಲ್ಲಿ ಮೊದಲ ಬಿಜೆಪಿ ಸರ್ಕಾರದ ನೂತನ ಸಿಎಂ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಬಿಜೆಪಿ ಪಶ್ಚಿಮ ಬಂಗಾಳ ರಾಜ್ಯಾಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಅವರು ಈ ಕುರಿತು ಮಾಧ್ಯಮವೊಂದಕ್ಕೆ ಮಾಹಿತಿ ನೀಡಿದ್ದಾರೆ. ಮೇ 9ರಂದು ರವೀಂದ್ರನಾಥ ಠ್ಯಾಗೋರ್ ಅವರ ಜನ್ಮದಿನವಿದ್ದು, ಅಂದೇ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರ ರಚಿಸಲು ನಿರ್ಧರಿಸಿದೆ. ಪ್ರಮಾಣ ವಚನ ಸಮಾರಂಭಕ್ಕೆ ಎನ್‌ಡಿಎ ಆಡಳಿತವಿರುವ ಎಲ್ಲ ರಾಜ್ಯಗಳ ಸಿಎಂಗಳಿಗೆ ಆಹ್ವಾನಿಸಿದ್ದಾರೆ.

ಪಶ್ಚಿಮ ಬಂಗಾಳ ವಿಧಾನಸಭೆಯಲ್ಲಿ ಬಿಜೆಪಿಯು ಆಡಳಿತಾರೂಢ ತೃಣಮೂಲ ಕಾಂಗ್ರೆಸ್ ಅನ್ನು ಬದಿಗೊತ್ತಿ, ಮಮತಾ ಬ್ಯಾನರ್ಜಿಯವರ 15 ವರ್ಷಗಳ ಅಧಿಪತ್ಯವನ್ನು ಕೊನೆಗೊಳಿಸಿದೆ. ಈ ಮೂಲಕ ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯು ಮೊದಲ ಬಾರಿಗೆ ಸರ್ಕಾರ ರಚಿಸಲಿದೆ.

**ಬಂಗಾಳದ ಗೆಲುವು ಐತಿಹಾಸಿಕ ಎಂದ ಮೋದಿ:** ಅಭೂತಪೂರ್ವ ಗೆಲುವಿನ ಬಳಿಕ ಪ್ರತಿಕ್ರಿಯಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಪಶ್ಚಿಮ ಬಂಗಾಳದ ಗೆಲುವು ಐತಿಹಾಸಿಕ ಎಂದಿದ್ದರು. ಈ ಜನಾದೇಶವು ಜನರ ಬದಲಾವಣೆ ಮತ್ತು ಭಯದಿಂದ ಮುಕ್ತ ಭವಿಷ್ಯದ ಬಯಕೆಯನ್ನು ಪ್ರತಿಬಿಂಬಿಸುತ್ತದೆ. ಈ. ಫಲಿತಾಂಶದ ಹಿಂದೆ ಮಹಿಳಾ ಮತದಾರರು ನಿರ್ಣಾಯಕ ಶಕ್ತಿಯಿದೆ. ಜೊತೆಗೆ ರಾಜಕೀಯ ಹಿಂಸಾಚಾರವನ್ನು ಕೊನೆಗಾಣಿಸಲು ಜನರು ನಿರ್ಧರಿಸಿದ್ದಾರೆ ಎಂದಿದ್ದರು. 294 ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುವ ಪಶ್ಚಿಮ ಬಂಗಾಳದಲ್ಲಿ ಸರ್ಕಾರ ರಚಿಸಲು 148 ಬಹುಮತದ ಅವಶ್ಯಕತೆಯಿದೆ. ಈ ಪೈಕಿ 204 ಕ್ಷೇತ್ರಗಳಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ.







## ಚುನಾವಣೆಯಲ್ಲಿ ನಾನು ಸೋತಿಲ್ಲ, ರಾಜಿನಾಮೆ ಕೊಡಲ್ಲ: ಮಮತಾ ಬ್ಯಾನರ್ಜಿ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಚುನಾವಣಾ ಫಲಿತಾಂಶವನ್ನು ಕಾನೂನುಬದ್ಧ ಸೋಲು ಎಂದು ಒಪ್ಪಿಕೊಳ್ಳುವುದಿಲ್ಲ ಎಂದು ಹೇಳಿರುವ ಅವರು, ಹಿನ್ನಡೆಯ ಹೊರತಾಗಿಯೂ ತಮ್ಮ ರಾಜಕೀಯ ಹೋರಾಟವನ್ನು ಮುಂದುವರಿಸುವುದಾಗಿ ಹೇಳಿದ್ದಾರೆ.

ತೃಣಮೂಲ ಕಾಂಗ್ರೆಸ್ (ಟಿಎಂಸಿ) ಭಾರೀ ಸೋಲನ್ನು ಅನುಭವಿಸಿದ ನಂತರ ಕೋಲ್ಕತ್ತಾದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬ್ಯಾನರ್ಜಿ, ದೊಡ್ಡ ಪ್ರಮಾಣದ ರಿಗ್ಗಿಂಗ್, ಮತದಾರರ ಪಟ್ಟಿ ತಿರುಚಿರುವುದು ಮತ್ತು ವ್ಯಾಪಕ ಹಿಂಸಾಚಾರ ನಡೆದಿದೆ ಎಂದು ಆರೋಪಿಸಿದರು. ಬಿಜೆಪಿ "100 ಸ್ಥಾನಗಳನ್ನು ಕಳವು ಮಾಡಿದೆ, ಇದು ಪ್ರಜಾಪ್ರಭುತ್ವದ ಕೊಲೆ ಎಂದು ಅವರು ಆರೋಪಿಸಿದ್ದಾರೆ.

ತೀರ್ಪನ್ನು ತಿರಸ್ಕರಿಸಿರುವ ಮಮತಾ ಬ್ಯಾನರ್ಜಿ, ಪಕ್ಷ "ಬಿಜೆಪಿ ವಿರುದ್ಧ ಮಾತ್ರ ಹೋರಾಡುತ್ತಿಲ್ಲ, ಆದರೆ ಇಡೀ ವ್ಯವಸ್ಥೆಯ ವಿರುದ್ಧ ಹೋರಾಡುತ್ತಿದೆ" ಎಂದು ಹೇಳಿದರು ಮತ್ತು ಮತದಾನ ಮತ್ತು ಎಣಿಕೆಯ ಸಮಯದಲ್ಲಿ ಭಾರತದ ಚುನಾವಣಾ ಆಯೋಗ ಮತ್ತು ಕೇಂದ್ರ ಪಡೆಗಳನ್ನು ಒಳಗೊಂಡ ಪಕ್ಷಪಾತ ಮತ್ತು ಒಪ್ಪಂದದ ಆರೋಪಗಳನ್ನು ಪುನರುಚ್ಚರಿಸಿದರು.

ಟಿಎಂಸಿ 294 ಸದಸ್ಯರ ವಿಧಾನಸಭೆಯಲ್ಲಿ 80 ಸ್ಥಾನಗಳನ್ನು ಗೆದ್ದಿತು, ಆದರೆ ಬಿಜೆಪಿ 204 ಸ್ಥಾನಗಳ ಬಹುಮತವನ್ನು ಗಳಿಸಿತು. ಬ್ಯಾನರ್ಜಿ ತಮ್ಮ ಭವಾನಿಪುರ ಸ್ಥಾನವನ್ನು ಸಹ ಕಳೆದುಕೊಂಡರು, ಇದು ಗಮನಾರ್ಹ ವೈಯಕ್ತಿಕ ಮತ್ತು ರಾಜಕೀಯ ಹಿನ್ನಡೆಯಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆಯ ಸಮಯದಲ್ಲಿ ಸುಮಾರು 90 ಲಕ್ಷ ಹೆಸರುಗಳನ್ನು ಅಳಿಸಲಾಗಿದೆ ಎಂದು ಅವರು ಆರೋಪಿಸಿದರು ಮತ್ತು ಕೇಂದ್ರ ಪಡೆಗಳು ಟಿಎಂಸಿ ಏಜೆಂಟ್‌ಗಳು ಮತ್ತು ಅಭ್ಯರ್ಥಿಗಳನ್ನು ಬಹು ಜಿಲ್ಲೆಗಳಲ್ಲಿ ಗುರಿಯಾಗಿಸಿಕೊಂಡಿವೆ, ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದರು.



ಮುದಗಲ: ಪಟ್ಟಣ ಸಮೀಪದ ಬನ್ನಿಗೋಳ ಗ್ರಾಮದಲ್ಲಿ ಸಂಭವಿಸಿದ ಅಗ್ನಿ ದುರಂದಿಂದ ಎಂಟಕ್ಕಿಂತ ಹೆಚ್ಚು ಮೇವಿನ ಬಣವಿಗಳು ಸುಟ್ಟು ರೈತರ ಜಾನುವಾರುಗಳ ಆಹಾರಕ್ಕಾಗಿ ಬೇಕಾಗುವ ಮೇವು ಲಕ್ಷಾಂತರ ರೂಪಾಯಿ ನಷ್ಟವಾದ ಘಟನೆ ಮಂಗಳವಾರ ಜರುಗಿದೆ.

## ವಿದ್ಯಾರ್ಥಿಗಳಿಗೆ ಶೂನ್ಯ ನೆರಳು ದಿನ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ಬ್ರಿಲಿಯಂಟ್ ಅಕಾಡೆಮಿ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಶೂನ್ಯ ನೆರಳು ದಿನದ ಕಾರ್ಯಕ್ರಮವನ್ನು ಬ್ರಿಲಿಯಂಟ್ ಅಕಾಡೆಮಿಯ ಕಾರ್ಯದರ್ಶಿ ಆನಂದ ರಾಠೋಡ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಆನಂದ ರಾಠೋಡ ಅವರು ಶೂನ್ಯ ನೆರಳಿನ ದಿನದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳು ತಿಳಿಸುವ ಮಾಹಿತಿಯನ್ನು ವಿದ್ಯಾರ್ಥಿಗಳು ವಿವರವಾಗಿ ತಿಳಿದುಕೊಂಡು ಖಗೋಳ ವಿಜ್ಞಾನದಲ್ಲಿ ಆಸಕ್ತಿಯನ್ನು ಹೆಚ್ಚಿಸಿಕೊಳ್ಳಬೇಕೆಂದು ಕರೆನೀಡಿದರು. ಸದರಿ ಕಾರ್ಯಕ್ರಮದ



ತಮ್ಮ ವಿದ್ಯಾ ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಕೇಂದ್ರದ ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ವಿಜಯಕುಮಾರ ಕೆ, ವಿಜ್ಞಾನ ಶಿಕ್ಷಕರು, ಶಂಕ್ರಪ್ಪ ಸಕ್ರಿ ಪ್ರೌಢಶಾಲೆ, ಬಾಗಲಕೋಟೆ ರವರು ಮಾತನಾಡಿ ಶೂನ್ಯ ನೆರಳಿನ ದಿನದ ಸ್ವಾರಸ್ಯಕರ ಮಾಹಿತಿಗಳನ್ನು ವಿವರವಾಗಿ ತಿಳಿಸಿದರು. ಅದರಂತೆ, ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದಂತೆ ವಿವಿಧ ಆಕಾಶ ಕಾಯಗಳು, ನಕ್ಷತ್ರಪುಂಜಗಳ ಅಧ್ಯಯನದ ಬಗ್ಗೆ ಅರ್ಥೈಹಿಸಿದರು. ಕಾರ್ಯಕ್ರಮದಲ್ಲಿ ಒಟ್ಟು 64 ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಿದ್ದರು.


ಕಾರ್ಯಕ್ರಮದಲ್ಲಿ ಸೂರ್ಯನ ಚಲನೆಯನ್ನು ವಿಶೇಷ ಸೂರ್ಯ ಮಸೂರಗಳನ್ನು ಬಳಸಿಕೊಂಡು ನೋಡಲಾಯಿತು. ಮಧ್ಯಾಹ್ನ 12.24 ಘಂಟೆಗೆ ಸೂರ್ಯನ ಕಿರಣಗಳು ಲಂಬವಾಗಿ ಬೀಳುವ ಮೂಲಕ ಸಂಭವಿಸಿದ ಶೂನ್ಯ ನೆರಳನ್ನು ಪ್ರಾಯೋಗಿಕ ಚಟುವಟಿಕೆಯ ಮೂಲಕ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ತಿಳಿಸಿಕೊಡಲಾಯಿತು. ಕಾರ್ಯಕ್ರಮದಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ಕ್ಯೂರೇಟರ್ ಈರಣ್ಣ ಬುಳ್ಳಾ, ತಾಂತ್ರಿಕ ಸಹಾಯಕ ಆಸೀಫ ಬಾಗವಾನ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ ಜಯಂತಿ ಆಚರಣೆಯನ್ನು ಮೇ.10 ರಂದು ಬೆಳಿಗ್ಗೆ 10:00 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ ಎನ್, ನವದೆಹಲಿಯಲ್ಲಿನ



ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ-2 ಹಾಗೂ ಶಾಸಕರಾದ ಪ್ರಕಾಶ ಬಿ. ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಂಂಮಿತದ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್. ನಾಡಗೌಡ, ಸಂಸದರಾದ ರಮೇಶ ಜಗಜಿಣಗಿ ಹಾಗೂ ಸುಧಾ ಮೂರ್ತಿ, ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಬಿ.ಎಸ್.ಕವಲಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್. ಪೂಜಾರ, ಕೇಶವ ಪ್ರಸಾದ ಎಸ್, ಮಹಾನಗರ ಪಾಲಿಕೆಯ ಮಹಾಪೌರರಾದ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಗಂಗಾಧರ ಎಸ್ ಸಂಬಣ್ಣಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಅವರು ಭಾಗವಹಿಸಲಿದ್ದಾರೆ.

ಡಾ. ಶಾಂತಾ ಅಸ್ಟಿಗೆ ವಿಶೇಷ ಉಪನ್ಯಾಸ ನೀಡಲಿದ್ದು, ಸುನಂದಾ ಬತ್ತಾಸಿ ಹಾಗೂ ತಂಡದವರು ನೃತ್ಯರೂಪಕ ನಡೆಸಿಕೊಡಲಿದ್ದಾರೆ. ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಸಾರ್ವಜನಿಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಗಣ್ಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## ದೈವಿಕ ಗುಣದೊಂದಿಗೆ ಜೀವನ ಸಾರ್ಥಕ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಸಂಘ ದೋಷದಿಂದ ದೂರ ಇದ್ದು ಒಳ್ಳೆಯ ಸಂಘದೊಂದಿಗೆ ದೈವಿಕಗುಣದೊಂದಿಗೆ ಜೀವನ ಸಾರ್ಥಕ ಮಾಡಿಕೊಳ್ಳಬೇಕು ಎಂದು ಮೌಂಟ್ ಅಬು ಮಧುಬನ ನಿವಾಸಿ ರಾಜಯೋಗಿ ರಾಮಕೃಷ್ಣ ಅಣ್ಣ ತಿಳಿಸಿದರು.

ಅವರು ನಗರದ ಕೃಷ್ಣಟಾಕೀಸ್ ರಸ್ತೆಯಲ್ಲಿರುವ ಬ್ರಹ್ಮಾಕುಮಾರೀಸ್ ಸಂಸ್ಥೆಯ ಶಿವ ಪ್ರೇರಣಾ ಭವನದಲ್ಲಿ ಪ್ರಜಾಪಿತಾ ಬ್ರಹ್ಮಾಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ಹಾಗೂ ಭಗತ್ ಸಿಂಗ್ ಚಾರಿಟಬಲ್ ಟ್ರಸ್ಟ್ ಚಿಕ್ಕಬಳ್ಳಾಪುರ ಇವರ ಸಂಯುಕ್ತ ಆಶ್ರಯದಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಟಾಪರ್ ಆಗಿ ಹೊರಹೊಮ್ಮಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗೌರವ ಸಮರ್ಪಣೆ ನೆರವೇರಿಸಿ ಮಾತನಾಡಿ "ಸಜ್ಜನರ ಸಹವಾಸ ಹೆಜ್ಜೇನು ಸವಿದಂತೆ ಎನ್ನುವ ನಾಣ್ಣುಡಿಯಂತೆ" ಪ್ರತಿಯೊಬ್ಬ ವಿದ್ಯಾರ್ಥಿ ತಮ್ಮ ಏಕಾಗ್ರತೆಯಿಂದ ಕಲಿಕೆಯನ್ನು ಪ್ರಾರಂಭಿಸಬೇಕು ಸದ್ಗುಣಗಳೊಂದಿಗೆ ತಮ್ಮ ಜೀವನವನ್ನು ಪಾವನವನ್ನಾಗಿಸಿಕೊಳ್ಳಲು ನಿರ್ದಿಷ್ಟವಾದ



ಗುರಿಯೊಂದಿಗೆ ಮುನ್ನಡೆಬೇಕು ಎಂದು ಕಿವಿಮಾತು ಹೇಳಿದರು.

ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ ಬಿ ರೆಡ್ಡಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವ ಸಮರ್ಪಣೆ ಮಾಡಿ ಮಾತನಾಡಿದ ಅವರು "ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದುವ ಅಭ್ಯಾಸ ರೂಢಿಸಿಕೊಳ್ಳಬೇಕು" ಸಾಧನೆ ಎಂಬುದು ಸಾಧಕನ ಸ್ವತ್ತಾಗಿರಬೇಕು, ಅದು ನೆತ್ತಿಗೆ ಇರಬಾರದು ನಾವು ಶ್ರೇಷ್ಠರಾಗಿ ಇತರರನ್ನು ಶ್ರೇಷ್ಠರನ್ನಾಗಿ ಮಾಡೋದೇ ನಿಜವಾದ ಸಾಧಕನ ಕೆಲಸ ನಿಮ್ಮ ಪರಿಶ್ರಮದಿಂದ ಇಂದು ಉತ್ತಮ ಅಂಕ ಬಂದಿರಬಹುದು ಆದರೆ ಜೀವನದ ಅಂಕಗಳಲ್ಲೂ ಉತ್ತೀರ್ಣತೆ ಪಡೆಯಬೇಕು ಎಂದ ಅವರು ಸಾಧನೆ ಮಾತ್ರ ಶ್ರೇಷ್ಠ ಎಂದುಕೊಳ್ಳುವುದಲ್ಲ ಬದಲಿಗೆ ಅದು ಮುಂದಿನ ಹಂತಕ್ಕೆ ಭದ್ರ ಬುನಾದಿ ಆಗಬೇಕು ಅಂತಹ ಸಂಸ್ಕೃತಿ ಸಂಬಂಧವನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು ಎಂದರು.

ಇದೆ ವೇಳೆ ರಾಜ್ಯದಲ್ಲಿಯೇ ಎರಡನೇ ರಾಂಕ್ ಪಡೆದ ಮಂಚನಬೆಲೆ ಗ್ರಾಮೀಣ ಪ್ರತಿಭೆ ಪ್ರಣತಿರಾಜ್ ಸೇರಿದಂತೆ ಜಿಲ್ಲೆ ತಾಲೂಕು ಹಾಗೂ ಶಾಲಾ ಹಂತದಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಧನುಶ್ರೀ, ಅಗಲಗುರ್ಕಿ ಬಿಜಿಎಸ್ ಶಾಲೆಯ ಕುಶಲ ಕೆ. ಎಸ್. ಭಾರತಿ ಪ್ರೌಢಶಾಲೆಯ ಕೆ.ಎನ್.ವೀಣಾ, ಶೃತಿ.ಸಿ, ಪ್ರಜಾಪಿತ ಬ್ರಹ್ಮಾ ಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯದ ಸ್ಥಾನಿಕ ಸಂಚಾಲಕರಾದ ರಾಜಯೋಗಿನಿ ಬಿ.ಕೆ.ಲಲಿತ ಅಕ್ಕ, ಸಾರ್ವಜನಿಕ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪ ನಿರ್ದೇಶಕರ ಕಚೇರಿಯ ವಿಷಯ ಪರೀಕ್ಷಕ ಅಂಜಿನಪ್ಪ, ಹಿರಿಯ ಪತ್ರಕರ್ತ ಎಚ್.ವಿ.ಸೋಮಶೇಖರ್ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗೌರವ ಸಮರ್ಪಣೆ ಸನ್ಮಾನಿಸಿದರು.

**ಚುನಾವಣೆಯಲ್ಲಿ ನಾನು ಸೋತಿಲ್ಲ, ರಾಜೀನಾಮೆ ಕೊಡಲ್ಲ: ಮಮತಾ ಬ್ಯಾನರ್ಜಿ**

# ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

## ರಾಜಕಾರಣಕ್ಕೆ ನಿಸ್ವಾರ್ಥ ಸೇವಕರು ಬರಬೇಕು

ರಾಜಕಾರಣವು ಸಮಾಜದ ಸೇವೆಗೆ ಇರುವ ಮಹತ್ತರ ವೇದಿಕೆ. ಆದರೆ ಇಂದಿನ ಪರಿಸ್ಥಿತಿಯಲ್ಲಿ ರಾಜಕಾರಣದ ಅರ್ಥವೇ ಬದಲಾಗುತ್ತಿರುವುದು ಆತಂಕಕಾರಿಯಾಗಿದೆ. ಅಧಿಕಾರ, ಹಣ, ಪ್ರಭಾವ ಇವುಗಳಿಗಾಗಿ ರಾಜಕೀಯ ಪ್ರವೇಶಿಸುವವರ ಸಂಖ್ಯೆ ಹೆಚ್ಚುತ್ತಿರುವಾಗ, ನಿಸ್ವಾರ್ಥ ಸೇವಾಭಾವ ಹೊಂದಿದ ನಾಯಕರು ಕಡಿಮೆಯಾಗುತ್ತಿರುವುದು ಜನತೆಯ ನಿರಾಶೆಗೆ ಕಾರಣವಾಗಿದೆ.

ಒಂದು ಸಮಾಜದ ಪ್ರಗತಿ ಅದರ ನಾಯಕರ ಸಿದ್ಧಾಂತ, ನೈತಿಕತೆ ಮತ್ತು ಸೇವಾಭಾವದ ಮೇಲೆ ಅವಲಂಬಿತವಾಗಿದೆ. ರಾಜಕಾರಣ-ಕ್ಕೆ ಬರುವವರು ಜನರ ಸಂಕಷ್ಟಗಳನ್ನು ಅರ್ಥಮಾಡಿಕೊಂಡು, ಅವರ ಸಮಸ್ಯೆಗಳಿಗೆ ಸ್ಪಂದಿಸುವ ಮನಸ್ಸು ಹೊಂದಿರಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ಕೆಲವರು ರಾಜಕಾರಣವನ್ನು ಸ್ವಾರ್ಥ ಸಾಧನೆಯ ಸಾಧನವಾಗಿ ಬಳಸುತ್ತಿರುವುದು ನೋವಿನ ಸಂಗತಿ. ಇದರಿಂದ ಜನರ ವಿಶ್ವಾಸ ಕುಸಿಯುತ್ತಿದೆ.

ನಿಸ್ವಾರ್ಥ ಸೇವಕರು ರಾಜಕೀಯಕ್ಕೆ ಬಂದರೆ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ. ಗ್ರಾಮೀಣ ಪ್ರದೇಶಗಳ ಸಮಸ್ಯೆಗಳು, ರೈತರ ಸಂಕಷ್ಟಗಳು, ಯುವಕರ ನಿರುದ್ಯೋಗ ಇವುಗಳಿಗೆ ಪರಿಹಾರ ದೊರೆಯಬೇಕಾದರೆ, ಸೇವಾ ಮನೋಭಾವದ ನಾಯಕತ್ವ ಅಗತ್ಯ. ತಮ್ಮ ಸ್ವಾರ್ಥವನ್ನು ಬದಿಗಿಟ್ಟು ಜನಹಿತಕ್ಕಾಗಿ ಶ್ರಮಿಸುವವರು ಮಾತ್ರ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ.

ಯುವಕರು ವಿಶೇಷವಾಗಿ ರಾಜಕಾರಣದತ್ತ ಆಕರ್ಷಿತರಾಗಬೇಕು. ಆದರೆ ಅವರು ಹಣ ಅಥವಾ ಪ್ರಭಾವಕ್ಕಾಗಿ ಅಲ್ಲ, ದೇಶಸೇವೆ ಎಂಬ ಉದ್ದೇಶದಿಂದ ರಾಜಕೀಯ ಪ್ರವೇಶಿಸಬೇಕು. ನೈತಿಕ ಮೌಲ್ಯಗಳನ್ನು ಕಾಪಾಡಿಕೊಂಡು, ಪಾರದರ್ಶಕ ಆಡಳಿತ ನೀಡುವ ಬದ್ಧತೆ ಅವರಲ್ಲಿರಬೇಕು.

ಜನರೂ ಕೂಡ ಜಾಗೃತರಾಗಬೇಕು. ಹಣ ಅಥವಾ ಪ್ರಲೋಭನೆಗಳಿಗೆ ಒಳಗಾಗದೆ, ನಿಜವಾದ ಸೇವಕರನ್ನು ಆಯ್ಕೆ ಮಾಡುವುದು ಅವರ ಕರ್ತವ್ಯ. ಒಳ್ಳೆಯ ನಾಯಕರು ಆಯ್ಕೆಯಾದಾಗ ಮಾತ್ರ ಪ್ರಜಾಪ್ರಭುತ್ವದ ಸಾರ್ಥಕತೆ ಉಳಿಯುತ್ತದೆ.

ಅಂತಿಮವಾಗಿ, ರಾಜಕಾರಣವು ಅಧಿಕಾರದ ಆಟವಲ್ಲ- ಅದು ಜನಸೇವೆಯ ಪವಿತ್ರ ಕರ್ತವ್ಯ. ನಿಸ್ವಾರ್ಥ ಸೇವಕರು ರಾಜಕೀಯಕ್ಕೆ ಬಂದಾಗ ಮಾತ್ರ ದೇಶದ ಭವಿಷ್ಯ ಭದ್ರವಾಗುತ್ತದೆ.

## ಬೇಳೆಕಾಳು ಸಂಸ್ಕರಣಾ & ಪ್ಯಾಕೇಜಿಂಗ್ ಘಟಕ ಸ್ಥಾಪನೆಗಾಗಿ ಅರ್ಜಿ ಆಹ್ವಾನ

**ಕೊಪ್ಪಳ:** ಕೃಷಿ ಇಲಾಖೆಯಿಂದ 2026-27ನೇ ಸಾಲಿನ "ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ" ಕಾರ್ಯಕ್ರಮದಡಿ ಬೇಳೆಕಾಳು (ದಾಲ್ ಮಿಲ್) ಸಂಸ್ಕರಣಾ ಮತ್ತು ಪ್ಯಾಕೇಜಿಂಗ್ ಘಟಕ ಸ್ಥಾಪನೆಗಾಗಿ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಭಾರತ ಸರ್ಕಾರವು ಜಾರಿಗೊಳಿಸಿರುವ "ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ –Mission for Atmanirbharta in Pulses (MAP)" ಕಾರ್ಯಕ್ರಮದಡಿ ಕರ್ನಾಟಕ ರಾಜ್ಯಕ್ಕೆ ಒಟ್ಟು 30 ಬೇಳೆಕಾಳು ಸಂಸ್ಕರಣಾ ಮತ್ತು ಪ್ಯಾಕೇಜಿಂಗ್ ಘಟಕಗಳ ಗುರಿ ನೀಡಲಾಗಿರುತ್ತದೆ. ಈ ಯೋಜನೆಯಡಿ ಯೋಜನಾ ವೆಚ್ಚದ ಶೇ.33 ರಷ್ಟು ಅಥವಾ ಗರಿಷ್ಠ ರೂ. 25 ಲಕ್ಷಗಳ ಮಿತಿಯಲ್ಲಿ ಸಹಾಯಧನ ನೀಡಲಾಗುತ್ತದೆ. ಕೊಪ್ಪಳ ಜಿಲ್ಲೆಯು ತೊಗರಿ ಬೆಳೆಯಲ್ಲಿ ರಾಜ್ಯದ ಪ್ರಮುಖ ಜಿಲ್ಲೆಗಳಲ್ಲಿ ಒಂದಾಗಿರುವುದರಿಂದ, ಜಿಲ್ಲೆಯ ರೈತರಿಗೆ ಮತ್ತು ಉದ್ಯಮಿಗಳಿಗೆ ಇದು ಆದಾಯ ಹೆಚ್ಚಿಸಿಕೊಳ್ಳಲು, ಸ್ಥಳೀಯ ಉದ್ಯೋಗ ಸೃಷ್ಟಿಸಲು ಹಾಗೂ ಬೇಳೆಕಾಳುಗಳ ಮೌಲ್ಯವರ್ಧನೆಗೆ ಅತ್ಯುತ್ತಮ ಅವಕಾಶವಾಗಿದೆ.

ಕೊಪ್ಪಳ, ಗಂಗಾವತಿ, ಕುಷ್ಟಗಿ, ಯಲಬುರ್ಗಾ, ಕನಕಗಿರಿ, ಕಾರಟಗಿ ಮತ್ತು ಕುಕನೂರು ಒಳಗೊಂಡಂತೆ ಜಿಲ್ಲೆಯ ಎಲ್ಲಾ 7 ತಾಲೂಕುಗಳ ಆಸಕ್ತ ರೈತರು, ರೈತ ಉತ್ಪಾದಕ ಸಂಸ್ಥೆಗಳು (ಎಫ್.ಪಿ.ಓ), ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು (ಪಿಎಸಿಎಸ್), ಸ್ವಸಹಾಯ ಗುಂಪುಗಳು (ಎಸ್.ಹೆಚ್.ಜಿ) ಮತ್ತು ಯಾವುದೇ ನೋಂದಾಯಿತ ಸಂಸ್ಥೆಗಳು, ವೈಯಕ್ತಿಕ ಫಲಾನುಭವಿಗಳು (ರೈತರು, ಉದ್ಯಮಿಗಳು) ಅರ್ಜಿ ಸಲ್ಲಿಸಬಹುದು.

**ವೈಯಕ್ತಿಕ ಫಲಾನುಭವಿಗಳಿಗೆ ಅರ್ಹತೆಯ ಮಾನದಂಡ:** ವೈಯಕ್ತಿಕ ಫಲಾನುಭವಿಗಳು ಕನಿಷ್ಠ 21 ವರ್ಷ ವಯೋಮಿತಿ ಹೊಂದಿರಬೇಕು. ಪ್ರತಿ ಕುಟುಂಬದಿಂದ (ಪತಿ ಅಥವಾ ಪತ್ನಿ ಮತ್ತು ಅವಿವಾಹಿತ ಮಕ್ಕಳು) ಒಬ್ಬ ಅರ್ಹ ಫಲಾನುಭವಿಗೆ ಮಾತ್ರ ಸಹಾಯಧನಕ್ಕೆ ಅವಕಾಶವಿರುತ್ತದೆ. ಯೋಜನಾ ವೆಚ್ಚದ ಶೇ. 15ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರಬೇಕು.

**ಗುಂಪು-ಸಂಸ್ಥೆಗಳಿಗೆ ಮಾನದಂಡ:** ಅರ್ಹ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿಯಾಗಿರಬೇಕು ಹಾಗೂ ಕನಿಷ್ಠ 2 ವರ್ಷ ಕಾರ್ಯ ನಿರ್ವಹಿಸಿರಬೇಕು. ಯೋಜನಾ ವೆಚ್ಚದ ಶೇ. 15ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರಬೇಕು. ಪರಿಶಿಷ್ಟ ಜಾತಿ ಅಥವಾ ಪಂಗಡ ಮತ್ತು ಮಹಿಳಾ ಫಲಾನುಭವಿಗಳಿಗೆ ವಿಶೇಷ ಆದ್ಯತೆ ನೀಡಲಾಗುವುದು.

*ಘಟಕದ ತಾಂತ್ರಿಕ ಷರತ್ತುಗಳು:* ಘಟಕವು ಕನಿಷ್ಠ 300 ಕೆಜಿ ಅಥವಾ ಗಂಟೆಯ ಸಂಸ್ಕರಣಾ ಸಾಮರ್ಥ್ಯ ಹೊಂದಿರಬೇಕು. ಎಲ್ಲಾ ಯಂತ್ರೋಪಕರಣಗಳು ಬಿಐಎಸ್ (ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್) ಮಾನದಂಡಗಳಿಗೆ ಅನುಗುಣವಾಗಿರಬೇಕು. ಆಹಾರ ಭದ್ರತೆ ಎಫ್.ಎಸ್.ಎಸ್.ಎ.ಐ ಪ್ರಮಾಣಪತ್ರ ಮತ್ತು ಪರಿಸರ ಮಾನದಂಡಗಳ ಪಾಲನೆ ಕಡ್ಡಾಯವಾಗಿದೆ. ಫಲಾನುಭವಿಗಳು ಘಟಕ ಸ್ಥಾಪಿಸಿದ ದಿನಾಂಕದಿಂದ ಕನಿಷ್ಠ 3 ವರ್ಷಗಳವರೆಗೆ ಘಟಕವನ್ನು ನಿರ್ವಹಿಸಬೇಕು.

ಸರ್ಕಾರಿ ಆದೇಶದಂತೆ ಅರ್ಜಿ ಸಲ್ಲಿಕೆಗೆ ಕನಿಷ್ಠ 30 ದಿನಗಳ ಕಾಲಾವಧಿ ನೀಡಲಾಗುತ್ತದೆ. 2026-27ನೇ ಸಾಲಿನಲ್ಲಿಯೇ ಘಟಕಗಳ ಅನುಷ್ಠಾನವನ್ನು ಪೂರ್ಣಗೊಳಿಸಬೇಕಾಗಿರುವುದರಿಂದ ಆಸಕ್ತರು ಅಗತ್ಯ ದಾಖಲೆಗಳೊಂದಿಗೆ ಶೀಘ್ರವೇ ಅರ್ಜಿ ಸಲ್ಲಿಸಬೇಕು. ಈ ಬಗ್ಗೆ ಸಾಮಾನ್ಯ ಮಾಹಿತಿ ಮತ್ತು ಮಾರ್ಗದರ್ಶನಕ್ಕೆ ಜಂಟಿ ಕೃಷಿ ನಿರ್ದೇಶಕರು, ಕೊಪ್ಪಳ ಇವರನ್ನು ಸಂಪರ್ಕಿಸಬಹುದು. ಅರ್ಜಿ ಸ್ವೀಕರಣೆಗೆ ಸಂಬಂಧಿಸಿದಂತೆ ಆಯಾ ತಾಲೂಕುಗಳ ಸಹಾಯಕ ಕೃಷಿ ನಿರ್ದೇಶಕರು, ಪ್ರಾಥಮಿಕ ಮಾಹಿತಿಗೆ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳನ್ನು ಅಥವಾ ಕರ್ನಾಟಕ ಕೃಷಿ ಇಲಾಖೆ ಜಾಲತಾಣ: raitamitra.karnataka.gov.in ಹಾಗೂ ಕೊಪ್ಪಳ ಜಿಲ್ಲಾ ಜಾಲತಾಣ: koppal.nic.in & ಕೇಂದ್ರ ಸರ್ಕಾರ ಯೋಜನೆ: agriwelfare.gov.in ಅಥವಾ ಕಿಸಾನ್ ಕಾಲ್ ಸೆಂಟರ್ (ಉಚಿತ): 1800-180-1551 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೈಕ್ಷಣಿಕ ಪ್ರಗತಿಗೆ ನವೀನ ಕಾರ್ಯಕ್ರಮಗಳು ಅವಶ್ಯ

• ಮಲ್ಲಮ್ಮ ನುಡಿ ವಾರ್ತೆ ಬೀದರ

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಹಮ್ಮಿಕೊಳ್ಳುವ ಇಂತಹ ನವೀನ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಬಹಳ ಮುಖ್ಯವಾಗಿದೆ ಎಂದು ಬೆಂಗಳೂರು ಅಕ್ಕಪಡೆ ರಾಜ್ಯ ಮಟ್ಟದ ಸಲಹೆಗಾರರಾದ ಶೈನಿ ಪ್ರದೀಪ ಗುಂಟಿ ಹೇಳಿದರು.

ಅವರು ಇತ್ತೀಚೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೀದರ ಇವರ ಸಂಯುಕ್ತಾಶ್ರಯದಲ್ಲಿ "2025-26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಸರಕಾರಿ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಪ್ರಗತಿಗಾಗಿ ಬೀದರ ಮೈಲೂರಿನ ಸರಕಾರಿ ಬಾಲಕಿಯರ ಬಾಲಂದಿರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ ಎಲ್ಲಾ ಕಡೆ ಇಂತಹ ಕಾರ್ಯಕ್ರಮ ಆಗಬೇಕು. ಮಕ್ಕಳು ಶ್ರಮ ಪಟ್ಟು ಕಲಿತಾಗ ಮಾತ್ರ ಇಂತಹ ಸಾಧನೆ ಮಾಡಲು ಸಾಧ್ಯ. ನಾನು ಕೂಡ ತಂದೆ ಇಲ್ಲದೇ ಬೆಳೆದವಳು ಜೀವನದಲ್ಲಿ ತುಂಬಾ ಕಷ್ಟಪಟ್ಟು ಓದಿ ಇಂಜೀನಿಯರಿಂಗ್



ಮಾಡಿ ಪಿ.ಹೆಚ್.ಡಿ ಮಾಡುತ್ತಿದ್ದೇನೆ. ನೀವು ಕೂಡ ಎದೆಗುಂದದೆ ನಿಮ್ಮ ಜೀವನದಲ್ಲಿ ಸಾಧನೆ ಮಾಡಬೇಕು ನಿಮಗೆ ಯಾವಾಗಲು ನನ್ನ ಬೆಂಬಲ ಇರುತ್ತದೆಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ ಮಾತನಾಡಿ, ಎಸ್.ಎಸ್.ಎಲ್.ಸಿ ಪರೀಕ್ಷೆ ಜೀವನವನ್ನು ಬದಲಾಯಿಸುವ ಘಟ್ಟ ಆಗಿದೆ. ವಿದ್ಯಾರ್ಥಿಗಳ ಜೀವನದ ಸಾಧನೆಗೆ ಇದು ಮೊದಲನೇ ಮೆಟ್ಟಿಲಾಗಿದೆ. ತಾವುಗಳು ಕಷ್ಟಪಟ್ಟು ಓದಿದರೆ ಮಾತ್ರ ಮುಂದೆ ಹೋಗಲು ಸಾಧ್ಯ. ತಮಗೆ ಕೊರೆತೆಯಿರುವುದರಿಂದ ಇಲ್ಲಿಗೆ ಬಂದಿರುತ್ತೀರಿ. ನಿಮ್ಮ ಜೊತೆ ಯಾವಾಗಲು ನಾವು ಸದಾ ಇದ್ದೇವೆ ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶಾರದಾ ಎನ್. ಕಲ್ಮಲಕರ್ ಮತನಾಡಿ, ಈ ಒಂದು ಕಾರ್ಯಕ್ರಮ 9ನೇ ಮಕ್ಕಳಿಗೆ ಸ್ಪೂರ್ತಿ ನೀಡಲು ಹಮ್ಮಿಕೊಳ್ಳಲಾಗಿದೆ. ಇಂತಹ ಕಾರ್ಯಕ್ರಮ ಮೊದಲನೇ ಸಲ ಆಯೋಜಿಸಲಾಗಿದೆ. ಜೀವನದಲ್ಲಿ ಸಾಧನೆ ಮಾಡಬೇಕೆಂದರೆ ಪರಿಶ್ರಮ ತುಂಬಾ ಅಗತ್ಯ. ಪರಿಶ್ರಮ ಇಲ್ಲದೇ ಏನು ಮಾಡಲು ಸಾಧ್ಯವಿಲ್ಲ. ಎಸ್.ಎಸ್.ಎಲ್.ಸಿ ಮಕ್ಕಳಿಗೆ ಅವರ ಇಚ್ಛೆಗನುಗುಣವಾಗಿ ಮುಂದಿನ ಶೈಕ್ಷಣಿಕ ಅಥವಾ ಕೌಶಲ್ಯ ತರಬೇತಿಯನ್ನು ನೀಡಬೇಕಾಗಿರುತ್ತದೆ. ಅದೇ ರೀತಿ 10ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಹೋಮ್ ಗಾರ್ಡ ಹುದ್ದೆಯನ್ನು ನೀಡುವಂತೆ ಶ್ರೀಮತಿ. ಶೈನಿ, ರಾಜ್ಯ ಮಟ್ಟದ ಸಲಹೆಗಾರರು ಅಕ್ಕಪಡೆ ಬೆಂಗಳೂರು ಅವರಿಗೆ ಮನವಿ ಮಾಡಿಕೊಂಡರು. ಅದೇ ರೀತಿ ಬಾಲಕರ ಬಾಲಮಂದಿರದ ಶಿವಕುಮಾರ ತಂದೆ ಚಿದಾನಂದ್ ಇವನು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 80% ಅಂಕಗಳನ್ನು ಪಡೆದು ಉತ್ತೀರ್ಣನಾಗಿರುತ್ತಾನೆ. ಇವನ ಈ ಸಾಧನೆಗೆ ಮೆಚ್ಚಿ ಬೀದರನ ಪ್ರತಿಷ್ಠಿತ ಶಾಹೀನ ಶಿಕ್ಷಣ ಸಂಸ್ಥೆಯವರು ಸದರಿ ಬಾಲಕನಿಗೆ ಉಚಿತ ಶಿಕ್ಷಣ ಮತ್ತು ವಸತಿಯನ್ನು ನೀಡಿರುತ್ತಾ-ರೆಂದು ತಿಳಿಸಿದರು.

10ನೇ ಪರೀಕ್ಷೆಯಲ್ಲಿ ಉತ್ತೀರ್ಣರಾದ 06 ಮಕ್ಕಳಿಗೆ ತಲಾ ರೂ. 2500/- ಮೊತ್ತವನ್ನು ಬಹುಮಾನವಾಗಿ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬೀದರ ಸರಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕಿ ರೂಪ ಎಸ್. ಕೋಟೆ ಗೌಡರ್, ಸರಕಾರಿ ಬಾಲಕಿಯರ ಬಾಲಮಂದಿರದ ಅಧೀಕ್ಷಕಿ ಮಹಾನಂದಾ, ಸರಕಾರಿ ವೀಕ್ಷಣಾಲಯದ ಅಧೀಕ್ಷಕಿ ಸುನೀತಾ ರಾಠೋಡ ಸೇರಿದಂತೆ ಮಕ್ಕಳು, ಪಾಲಕರು/ಪೋಷಕರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆ ಗೌರಿಶಂಕರ ಪರತಾಪೂರೆ ನಿರ್ವಹಿಸಿದರು, ಪ್ರಶಾಂತ ಬಿರಾದಾರ ಸ್ವಾಗತವನ್ನು ಕೋರಿದರು. ರಘುನಾಥ ವಂದನಾರ್ಪಣೆಯೊಂದಿಗೆ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದರು.

## ಖ್ವಾಜಾಮೀನ್ ಸಾಹೇಬ್ ಉರುಸ್ ಸಂಭ್ರಮ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಸ್ಥಳೀಯ 2ನೇ ವಾರ್ಡಿನ ಲಕ್ಷ್ಮೀ ಟಾಕೀಸ್ ಬಳಿಯಲ್ಲಿರುವ ಹಜರತ್ ಸೈಯದ್ ಷಾ ಖ್ವಾಜಾ ಪಿರ್ ಮಹ್ಮದ್ ಹುಸೇನಿ(ಅಲ್ ಮಾರುಫ್) ದರ್ಗಾದಲ್ಲಿ ಖ್ವಾಜಾಮೀನ್ ಸಾಹೇಬ್ ಉರುಸ್ ಸಡಗರ ಸಂಭ್ರಮದ ಜೊತೆಗೆ ಶ್ರದ್ಧಾಭಕ್ತಿಯಿಂದ ಜರುಗಿತು.

ಇಲ್ಲಿನ ದರ್ಗಾದಲ್ಲಿ ಸೋಮವಾರ ಉರುಸ್ ವಿಜೃಂಭಣೆಯಿಂದ ಆಚರಿಸಲಾಯಿತು. ಉರುಸ್ ನಿಮಿತ್ಯ ದರ್ಗಾದಲ್ಲಿ ಹೂ, ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ಭಾನುವಾರಂದು ಗಂಧ ಶ್ರದ್ಧೆಯಿಂದ ನೆರವೇರಿತು. ಶಾಸಕ ಜೆ.ಎನ್.ಗಣೇಶ್ ಉರುಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪ್ರಾರ್ಥನೆ ಸಲ್ಲಿಸಿದ ನಂತರ ಮಾತನಾಡಿ, ಉರುಸು ಧಾರ್ಮಿಕ ಕಾರ್ಯಕ್ರಮಗಳಿಂದ ನಾಡಿನಲ್ಲಿ ಮಳೆ, ಬೆಳೆಗಳು ಉತ್ತಮವಾಗಿ ಆಗಿ ಅನ್ನದಾತರು ಸೇರಿದಂತೆ ಎಲ್ಲಾ ಸಮುದಾಯಗಳಿಗೂ ಒಳ್ಳೆಯದಾಗಲಿ ಹಾಗೂ



ಪ್ರತಿಯೊಬ್ಬರೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳುವುದರ ಮೂಲಕ ಮಾನಸಿಕ ಶಾಂತಿ, ನೆಮ್ಮದಿಯನ್ನು ಪಡೆಯಲು ಸಾಧ್ಯ ಎಂದರು. ಭಕ್ತರಿಗೆ ಅನ್ನ ಸಂತಾರ್ಪಣೆ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಧರ್ಮಗುರು ಸೈಯದ್ ಷಾ ಖಾಜಾ ಮೈನುದ್ದೀನ್ ಖಾದ್ರಿ, ದರ್ಗಾ ಕಮಿಟಿ ಅಧ್ಯಕ್ಷ ಹುಸೇನ್ ಬಾಷಾ, ಗೌರವಾಧ್ಯಕ್ಷ ನ್ಯಾಮತ್ ಸಾಬ್, ಅಂಜುಮನ್ ಕಮಿಟಿ ಅಧ್ಯಕ್ಷ ಅಬ್ದುಲ್ ಕರಿಮ್ ಲಡ್ಡು, ಕಾರ್ಯದರ್ಶಿ ಯು.ಜಹಿರುದ್ಧೀನ್, ಮುಖಂಡರಾದ ಹೊಸಕೋಟೆ ಜಗದೀಶ, ವಾಸೀಂ, ಅಕ್ಕಿ ಜಿಲಾನ್ ಸೇರಿದಂತೆ ಸರ್ವ ಸಮಾಜದ ಭಕ್ತರು ಪಾಲ್ಗೊಂಡಿದ್ದರು.

## ಮೂರು ರಾಜ್ಯದಲ್ಲಿ ಬಿಜೆಪಿ ಜಯ, ವಿಜಯೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ದೇಶದ ಮೂರು ರಾಜ್ಯದ ಚುನಾವಣೆಯಲ್ಲಿ ಬಿಜೆಪಿ ಬಹುಮತದೊಂದಿಗೆ ಗೆಲುವು ಸಾಧಿಸಿದ ಹಿನ್ನಲೆ ಕಂಪ್ಲಿ ತಾಲೂಕಿನ ಬಿಜೆಪಿ ಮುಖಂಡರು, ಕಾರ್ಯಕರ್ತರು ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಾಚರಣೆ ಸೋಮವಾರ ಮಾಡಿದರು.

ಬಿಜೆಪಿ ಗೆಲುವಿನ ಹಿನ್ನಲೆ ಕಂಪ್ಲಿ ಪಟ್ಟಣದ ಕೊಟ್ಟಾಲ್ ರಸ್ತೆಯಲ್ಲಿರುವ ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಅವರ ನಿವಾಸದ ತುಂಗಭದ್ರಾ ನಿಲಯದ ಬಿಜೆಪಿ ಪಾರ್ಟಿ ಕಛೇರಿಯಿಂದ ಬೈಕ್ ರ್‍ಯಾಲಿ ಆರಂಭಿಸಿ, ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ, ಅಂಬೇಡ್ಕರ್ ವೃತ್ತದಲ್ಲಿ ಸಮಾಹಿಸಿ, ವಿಜಯೋತ್ಸವ ಅದ್ಧೂ-ರಿಯಾಗಿ ಆಚರಿಸಿದರು. ನಂತರ ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನತಾ ಪಾರ್ಟಿಯ ಬಿಎಲ್ಎ1 ಜಿ.ಶ್ರೀನಿವಾಸ ಮಾತನಾಡಿ, ಪಶ್ಚಿಮ ಬಂಗಾಳ, ಪುದುಚೇರಿ, ಅಸ್ಸಾಂ ರಾಜ್ಯಗಳ ಚುನಾವಣಾ ಫಲಿತಾಂಶದಲ್ಲಿ ಬಿಜೆಪಿ ಪಕ್ಷವೂ ಗೆಲುವಿನ ನಗೆ ಬೀರಿದೆ. ವಿಶ್ವನಾಯಕನೆಂದೇ



ಪ್ರಸಿದ್ಧಿ ಪಡೆದಿರುವ ನರೇಂದ್ರ ಮೋದಿ ಅವರ ಜನಪರ ಅಭಿವೃದ್ಧಿ ಕಾರ್ಯ ಮತ್ತು ಯೋಜನೆಗಳನ್ನು ಮೆಚ್ಚಿ, ಮೂರು ರಾಜ್ಯದ ಮತಬಾಂಧವರು ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ರಾಜ್ಯಗಳ ಚುಕ್ಕಾಣಿಗೆ ಅನುವು ಮಾಡಿಕೊಟ್ಟಿದ್ದಾರೆ. ಇದರಿಂದ ವಿರೋಧ ಪಕ್ಷದವರು ಮೂಲೆ ಗುಂಪಾಗಿದ್ದಾರೆ. ಮುಂದಿನ ಚುನಾವಣೆಗಳಿಗೆ ದಿಕ್ಸೂಚಿಯಾಗಿದೆ ಎಂದರು. ಈ ಸಂದರ್ಭದಲ್ಲಿ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ, ಮುಖಂಡರಾದ ಡಾ.ವಿ.ಎಲ್.ಬಾಬು, ರಾಮಾಂಜಿನೇಯ್ಯ, ಶ್ರೀನಿವಾಸ, ಕೆ.ಭಾಸ್ಕರ್‌ರೆಡ್ಡಿ, ಯಣ್ಣಿ ವೆಂಕಟೇಶ, ಟಿ.ವಿ.ಸುದರ್ಶನರೆಡ್ಡಿ, ಪ್ರಶಾಂತ, ಕಾರ್ತಿಕ ಚೇತನ್, ಪಾಲಾಕ್ಷಿ ಸೇರಿದಂತೆ ಕಾರ್ಯಕರ್ತರು ಇದ್ದರು.

# ನರೇಗಾ ಕಾಮಗಾರಿಯಲ್ಲಿ ಎಲ್ಲಾ ಕೂಲಿಕಾರರು ಕೆಲಸಕ್ಕೆ ಹಾಜರಾಗಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕೂಲಿಕಾರರು ಫಾರಂ ನಂ.6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗುವಂತೆ ಜಿಲ್ಲಾ ಪಂಚಾಯತ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಕರೆ ನೀಡಿದರು.

ಕಲಕೇರಿ ಗ್ರಾಮ ಪಂಚಾಯತಿಯ ವತಿಯಿಂದ ಮಂಗಳವಾರ ಕಲಕೇರಿ ಗ್ರಾಮದ ಸಂತ ಷರೀಪರ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಕಾರ್ಯಕ್ರಮದಲ್ಲಿ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ ರೂ. 370 ಕೂಲಿ ನಿಗದಿಪಡಿಸಿದ್ದು, ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆದುಕೊಳ್ಳಬೇಕು. ಬಿಸಿಲಿನ



ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು ಕೆಲಸದ ಜೊತೆಗೆ ಆರೋಗ್ಯ ಕಡೆ ಕಾಳಜಿವಹಿಸಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ-6 ಸಲ್ಲಿಸಬೇಕು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕೆಂದರು.

ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀ-ಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ ಎಂದರು. ಜಾಬಕಾರ್ಡನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ-ಕೆವೈಸಿ ಹೊಂದಿದ ನಂತರವೇ ಎನ್ಎಂಆರ್ ಪ್ರಕಾರ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 & 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದು ಹೇಳಿದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಪ್ರತಿ ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕು. ಗ್ರಾಮೀಣ ಭಾಗದ ಕೂಲಿಕಾರರು ಕೂಲಿ ಅರಸಿ ಗುಳೆ ಹೋಗುವದನ್ನು ನಿಯಂತ್ರಿಸಿ ಸ್ಥಳೀಯವಾಗಿ ಉದ್ಯೋಗ ಒದಗಿಸಿ ಅವರಿಗೆ ಕೂಲಿ ಹಣ ಪಾವತಿಸಿ ಸ್ವಾವಂಬಿ ಜೀವನ ನಡೆಸಲು ಯೋಜನೆಯ ಸದುದ್ದೇಶವಾಗಿದೆ. ಎಲ್ಲಾ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ.ಗಳಲ್ಲಿ ನೊಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಗ್ರಾಮ ಪಂಚಾಯತಿ ಡಿಇಓ ಕುಮಾರ ಪರಗಿ, ಬೇರ್‌ಪೂಟ್ ಟೆಕ್ನಿಷಿಯನ್ ಮಾರುತಿ ವಾಲ್ಮೀಕಿ, ಗ್ರಾಮ ಕಾಯಕ ಮಿತ್ರ ರಾಧಾ, ಕಾಯಕ ಬಂಧುಗಳಾದ ನಾಗರಾಜ ಮಲಾಜಿ, ಮುತ್ತು ಲಮಾಣಿ, ಕುಮಾರ ಚವ್ಹಾಣ್, ರಾಮಣ್ಣ ಉಪ್ಪಾರ, ವಿರೇಶ ಹರಿಜನ, ಕೂಲಿಕಾರರು ಉಪಸ್ಥಿತರಿದ್ದರು.

## ಅಭಿವೃದ್ಧಿಗೆ ಮೂಲ ಕೊಂಡಿ ರಸ್ತೆ ಸಿಸಿ ರಸ್ತೆ ಕಾಮಗಾರಿಗಳಿಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಸ್ತೆ ಎನ್ನುವುದು ಕೇವಲ ಸಂಚಾರದ ಮಾರ್ಗವಲ್ಲ, ಅದು ಒಂದು ಪ್ರದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯ ಮೂಲ ಕೊಂಡಿಯಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ರಾಜಗೀರಾ ಗ್ರಾಮದಲ್ಲಿ ಸುಮಾರು ₹75 ಲಕ್ಷ ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮೀಣ ಅಭಿವೃದ್ಧಿಗೆ ಮೂಲಭೂತ ಸೌಕರ್ಯಗಳಾದ ರಸ್ತೆ ವ್ಯವಸ್ಥೆ ಅತ್ಯಂತ ಪ್ರಮುಖವಾಗಿದ್ದು, ಈ ಕಾಮಗಾರಿಯಿಂದ ಸ್ಥಳೀಯರಿಗೆ ಸಂಚಾರ ಸುಲಭವಾಗಲಿದೆ ಎಂದು ತಿಳಿಸಿದರು.

ಅಭಿವೃದ್ಧಿಯ ಪಥದಲ್ಲಿ ಮುಂದುವರಿಯುತ್ತಿರುವ ಬೀದರ್ ದಕ್ಷಿಣ ಕ್ಷೇತ್ರದಲ್ಲಿ ರಸ್ತೆ ಮೂಲಸೌಕರ್ಯಕ್ಕೆ ಮತ್ತೊಂದು ಮಹತ್ವದ ಹೆಜ್ಜೆ ಇಡಲಾಗಿದೆ. ವಿವಿಧ ಗ್ರಾಮಗಳಲ್ಲಿ ಲಕ್ಷಾಂತರ ರೂಪಾಯಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಹಂತಹಂತವಾಗಿ ಚಾಲನೆ ನೀಡಲಾಗುತ್ತಿದೆ ಎಂದರು.

ರಸ್ತೆ ಎನ್ನುವುದು ಕೇವಲ ಸಂಚಾರದ ಮಾರ್ಗವಲ್ಲ, ಅದು ಒಂದು ಪ್ರದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯ ಮೂಲ ಕೊಂಡಿಯಾಗಿದೆ. ಉತ್ತಮ ರಸ್ತೆ ವ್ಯವಸ್ಥೆಯಿಂದ ಜನರ ಜೀವನಮಟ್ಟ ಏರಿ-ಕೆಯಾಗುತ್ತದೆ ಎಂದು ಹೇಳಿದರು.



ಕಾಮಗಾರಿ ನಿಗದಿತ ಅವಧಿಯಲ್ಲಿ ಹಾಗೂ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿ , ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸುರೇಶ ಮಾಶೆಟ್ಟಿ, ವಿಜಯಕುಮಾರ ಪಾಟೀಲ ಗಾದಗಿ, ಸೂರ್ಯಕಾಂತ ಪಾಟೀಲ, ಹಣಮಂತರಾವ ಪಾಟೀಲ, ಡಾ.ವಿರೇಂದ್ರ ಪಾಟೀಲ, ಶಾಮರಾವ ಕುಲಕರ್ಣಿ, ಶಿವರಾಜ ಸ್ವಾಮಿ, ಗುರುನಾಥ ರಾಜಗೀರಾ, ಮಲ್ಲಿಕಾರ್ಜುನ ಪಾಟೀಲ, ಪರಮೇಶ ಪಾಟೀಲ, ಶಿವು ಪಾಟೀಲ, ಶೇಖರ ಕೋಳಾರ, ಸುಧಾಕಾರ ವರ್ಮಾ, ಅರವಿಂದ ಪಾಟೀಲ ಚಿಲ್ಲರ್ಗಿ, ಶಾಂತವೀರ ಪಾಟೀಲ, ಓಂಕಾರ ಪಾಟೀಲ, ಆಕಾಶ ಅಡ್ಡೆ, ಶಾಂತು ಕಮಲಾಪುರೆ, ಇರಪ್ಪಾ ಅಡ್ಡೆ, ಬಸವರಾಜ ಶೇರಿಕಾರ, ಸಂತೋಷ ಶೇರಿಕಾರ, ಯಲ್ಲಪ್ಪಾ ಬಸಂತಪುರ, ನಾಗರಾಜ ಖೌದೆ ಮತ್ತಿತರರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿಯಲ್ಲಿ 619 ಅಂಕ ದಿವ್ಯಾಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಕಠಿಣ ಪರಿಶ್ರಮ ಮತ್ತು ಸತತ ಅಧ್ಯಯನವಿದ್ದರೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೂ ಕೂಡ ರಾಜ್ಯಮಟ್ಟದಲ್ಲಿ ಅದ್ಭುತ ಸಾಧನೆ ಮಾಡಬಲ್ಲರು ಎಂಬುದನ್ನು ಔರಾದ ತಾಲೂಕಿನ ನಾಗೂರ(ಎಂ) ಗ್ರಾಮದ ದಿವ್ಯಾ ಮಲ್ಲಪ್ಪಗೌಡ ಸಾಬೀತುಪಡಿಸಿದ್ದಾರೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 619 ಅಂಕ ಗಳಿಸಿದ ದಿವ್ಯಾ ಅವರನ್ನು ಪತ್ರಕರ್ತ ರೇವಣಸಿದ್ಧ ವಲ್ಲೇಪುರೆ ದಂಪತಿ ಅವರು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಸನ್ಮಾನ ನೆರವೇರಿಸಿ ಮಾತನಾಡಿದ ಮುಖಂಡ ರೇವಣಸಿದ್ಧ ವಲ್ಲೇಪುರೆ ಅವರು, "ದಿವ್ಯಾ ಅಪ್ಪಟ ಗ್ರಾಮೀಣ ಪ್ರತಿಭೆ. ಕನ್ನಡ ಮಾಧ್ಯಮದಲ್ಲಿ ಓದಿದ ಈಕೆ, ಆರ್‌ಟಿಇ (ಉಚಿತ ಶಿಕ್ಷಣ) ಅಡಿಯಲ್ಲಿ ಪ್ರವೇಶ ಪಡೆದು ಅಭ್ಯಾಸ ಮಾಡಿದ್ದಾಳೆ. ಬಡ ಕುಟುಂಬದ ಹಿನ್ನೆಲೆಯಲ್ಲಿದ್ದರೂ ಸತತ ಅಧ್ಯಯನದ ಮೂಲಕ ಎಲ್ಲರೂ ಹುಬ್ಬೇರಿಸುವಂತಹ ಫಲಿತಾಂಶ ತಂದಿರುವುದು ಅಮೋಘ ಸಾಧನೆ" ಎಂದು ಶ್ಲಾಘಿಸಿದರು.

**ಅಪ್ರತಿಮ ಸಾಧನೆ**

ದಿವ್ಯಾ ಅವರು ಕನ್ನಡದಲ್ಲಿ 125ಕ್ಕೆ 125 ಅಂಕ ಗಳಿಸಿದ್ದು, ಹಿಂದಿ ಮತ್ತು ಸಮಾಜ ವಿಜ್ಞಾನದಲ್ಲಿ ತಲಾ 100 ಅಂಕಗಳನ್ನು ಪಡೆಯುವ ಮೂಲಕ



ಸಾಧನೆ ಮಾಡಿದ್ದಾರೆ. ಉಳಿದಂತೆ ಇಂಗ್ಲಿಷ್‌ನಲ್ಲಿ 99, ಗಣಿತದಲ್ಲಿ 99 ಹಾಗೂ ವಿಜ್ಞಾನ ವಿಷಯದಲ್ಲಿ 96 ಅಂಕಗಳನ್ನು ಗಳಿಸಿದ್ದಾರೆ. ಒಟ್ಟಾರೆಯಾಗಿ 619 ಅಂಕಗಳನ್ನು (ಶೇ. 99.04) ಪಡೆಯುವ ಮೂಲಕ ಶಾಲೆ ಹಾಗೂ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದಲ್ಲಿ ಗಮನ ಸೆಳೆದಿದ್ದಾರೆ.

**ಕೀರ್ತಿ ಹೆಚ್ಚಿಸಿದ ಪುತ್ರಿ**

ಪತ್ರಕರ್ತ ಮಲ್ಲಪ್ಪಗೌಡ ಅವರ ಪುತ್ರಿಯಾಗಿರುವ ದಿವ್ಯಾ, ತನ್ನ ಸಾಧನೆಯ ಮೂಲಕ ಪೋಷಕರಿಗೆ ಹಾಗೂ ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ. ಈ ಸಂದರ್ಭದಲ್ಲಿ ಎಂ.ಎಸ್. ಹಿರೇಮಠ, ಮಲ್ಲಪ್ಪ ಗೌಡ ದಂಪತಿ ಹಾಗೂ ರೇವಣಸಿದ್ಧ ದಂಪತಿ ಸೇರಿದಂತೆ ಗ್ರಾಮದ ಪ್ರಮುಖರು ಉಪಸ್ಥಿತರಿದ್ದು ವಿದ್ಯಾರ್ಥಿನಿಯ ಮುಂದಿನ ಉಜ್ವಲ ಭವಿಷ್ಯಕ್ಕೆ ಶುಭ ಹಾರೈಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)

# ಮೇ 10 ರಂದು ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ 05:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಮೇ 10 ರಂದು ಸಂಜೆ 07 ಗಂಟೆಗೆ ನಗರದಪಾರ್ವತಿ ನಗರ ಬಡಾವಣೆಯ ಬಸವ ಭವನದಲ್ಲಿ ಶಿವಶರಣೆಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮಜಯಂತಿ ಕಾರ್ಯಕ್ರಮ ಏರ್ಪಡಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸ ಚಿ ವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭೆ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್, ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರ ಮಹಾಮಂಡಳಿ ನಿಯಮಿತ(ಕಾವೇರಿ ಹ್ಯಾಂಡ್‌ಲೂಮ್ಸ್)ದ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್, ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ??ಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಡಾ.ಎಸ್.ಜೆ.ವಿ.ಮಹಿಪಾಲ್ ಸೇರಿದಂತೆ ಇತರರು ಭಾಗವಹಿಸುವರು.

ಬಳ್ಳಾರಿಯ ಇಂಡೋ ಅಮೆರಿಕನ್ ಪದವಿ ಕಾಲೇಜಿನ ಕನ್ನಡ ಉಪನ್ಯಾಸಕ ಬಸವರಾಜ ಅಮಾತಿ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಬಳ್ಳಾರಿಯ ಎನ್.ಬಸವರಾಜ್ ತಂಡ ಹೇಮರೆಡ್ಡಿ ಮಲ್ಲಮ್ಮ ಗೀತೆಗಳ ಗಾಯನ ಕಾರ್ಯಕ್ರಮ ಇರಲಿದೆ.

*ಮೆರವಣಿಗೆ:*

ಜಯಂತಿ ಅಂಗವಾಗಿ ಅಂದು ಸಂಜೆ 05 ಗಂಟೆಗೆ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ನಗರದ ಕನಕ ದುರ್ಗಮ್ಮ ದೇವಸ್ಥಾನದ ಆವರಣದಿಂದ ಆರಂಭಗೊಂಡು ವಾಲ್ಮೀಕಿ ವೃತ್ತ(ಎಸ್‌ಪಿ ವೃತ್ತ) ಮೂಲಕ ಬಸವ ಭವನದ ಸಭಾಂಗಣದವರೆಗೆ ನಡೆಯಲಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್ ಮಂಜುನಾಥ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಔರಾದ(ಬಾ): ಡಿಪ್ಲೋಮಾ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ.05–ಔರಾದ(ಬಾ) ಸರಕಾರಿ ಪಾಲಿಟೆಕ್ನಿಕ್‌ದಲ್ಲಿ 2026–27ನೇ ಸಾಲಿನ ಪ್ರಥಮ ವರ್ಷದ ಡಿಪಲೊಂಆ ಕೋರ್ಸುಗಳಿಗೆ ಪ್ರವೇಶ ಪ್ರಕ್ರಿಯೇ ಪ್ರಾರಂಭವಾಗಿರುತ್ತದೆ. ಕಾಲೇಜಿನಲ್ಲಿಯೇ ಮೆರಿಟವ ಮತ್ತು ರೋಷ್ಟರಗನುಗುವಾಗಿ ಅಫ್‌ಲೈನ್ ಪ್ರವೇಶ ಪಡೆಯಬಹುದಾಗಿದೆ. ಎಸ್‌ಎಸ್‌ಎಲ್‌ಸಿ ಯಲ್ಲಿ ಕನಿಷ್ಠ 35% ಅಂಕ ಪಡೆದು ತೇರ್ಗಡೆ ಹೊಂದಿರಬೇಕು.

ಕೋರ್ಸುಗಳ ವಿವರ: ಸಿವಿಲ್ ಇಂಜಿನೀಯರ್, ಅಲ್ಟರನೇಟ್ ಎನರ್ಜಿ ಟೆಕ್ನೋಲೋಜಿ, ಮೆಕ್ಯಾನಿಕಲ್ ಇಂಜಿನೀಯರ್, ಆಟೋಮೆಷನ್ ಅನದ ರೋಬೋಟಿಕ್ಸ್, ಕಮರ್ಷಿಯಲ್ ಪ್ರಾ??ಕ್ಟಿಸ್ ಕನ್ನಡ.

ವಿದ್ಯಾರ್ಥಿಗಳು ಸಂಸ್ಥೆಗೆ ಹಾಜರಾಗಿ ಸೂಕ್ತ ದಾಖಲಾತಿಗಳನ್ನು ಸಲ್ಲಿಸಿ ನಿಗದಿತ ಶುಲ್ಕವನ್ನು ನೀಡಿ ನೇರವಾಗಿಜ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9481207838, 9880224522 ಗೆ ಸಂಪರ್ಕಿಸಬಹುದಾಗಿದೆ ಎಂದು ಔರಾದ(ಬಾ) ಸರಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ.05 – ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಮಾತ್ರ ಅತಿಥಿ ಉಪನ್ಯಾಸಕರು ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಬೋಧನೆ ಮಾಡಲು ಇಚ್ಛಿಸುವ ಅಭ್ಯರ್ಥಿಗಳು ಗೌರವ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ವಿಷಯಗಳು: ಅನ್ವಯ ಕಲೆ, ಚಿತ್ರಕಲೆ, ಶಿಲ್ಪ ಕಲೆ, ಅಚ್ಚುಕಲೆ (ಗ್ರಾಫಿಕ್ಸ್), ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ, ಕಲಾ ಇತಿಹಾಸ, ಕನ್ನಡ, ಇಂಗ್ಲೀಷ, ಹಿಂದಿ, ಭಾರತ ಮತ್ತು ಭಾರತೀಯ ಸಂವಿಧಾನ ಹಾಗೂ ಸಂವಿಧಾನದ ಮೌಲ್ಯಗಳು, ಪರಿಸರ ಅಧ್ಯಯನ.

ಅರ್ಹರು ನಿಗದಿತ ನಮೂನೆಯಲ್ಲಿ ತಮ್ಮ ಸ್ವ–ವಿವರದೊಂದಿಗೆ ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 15–05–2026 ರೊಳಗಾಗಿ ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಮೈಸೂರು ವಿಳಾಸಕ್ಕೆ ಅಂಚೆ ಮೂಲಕ ಅಥವಾ ನೇರವಾಗಿ ಅರ್ಜಿ ಸಲ್ಲಿಸಬಹುದಾಗಿದೆ. ದಿನಾಂಕ: 19–05–2026 ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯಲ್ಲಿ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿ ದೂರವಾಣಿ ಸಂಖ್ಯೆ: 0821–2438931 ಗೆ ಸಂಪರ್ಕಿಶಬಹುದಾಗಿದೆ ಎಂದು ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಇಲಾಖೆಯಿಂದ ಕೊಯ್ಲೋತ್ತರ ಮೂಲ ಸೌಕರ್ಯಾಭಿವೃದ್ಧಿ, ಸಂಸ್ಕರಣಾ ಘಟಕ ಸ್ಥಾಪಿಸಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ.05 ಬೇಳೆಕಾಳುಗಳ ಉತ್ಪಾದನೆಯಲ್ಲಿ ದೇಶವನ್ನು ಸ್ವಾವಲಂಬಿಯನ್ನಾಗಿಸುವ ಉದ್ದೇಶದಿಂದ ಕೃಷಿ ಇಲಾಖೆಯು ಬೇಳೆ ಕಾಳುಗಳಲ್ಲಿ ಆತ್ಮನಿರ್ಭರತೆ ಮಿಷನ್ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಯಡಿ ಕೊಯ್ಲೋತ್ತರ ಮೂಲ ಸೌಕರ್ಯಾಭಿವೃದ್ಧಿ ಹಾಗೂ ಸಂಸ್ಕರಣಾ ಮತ್ತು ಪ್ಯಾಕೇಜಿಂಗ್ ಘಟಕಗಳನ್ನು ಸ್ಥಾಪಿಸಲು ಆಸಕ್ತ ರೈತರು ಹಾಗೂ ಸಂಘ ಸಂಸ್ಥೆಗಳಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ದ್ವಿದಳಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸಲು ಹಾಗೂ ರೈತರ ಆದಾಯ ಹೆಚ್ಚಿಸಲು ಗುರಿ ಹೊಂದಲಾಗಿದ್ದು, ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ 60:40 ಅನುಪಾತದ ಸಹಾಯಧನದಡಿ ಯೋಜನಾ ವೆಚ್ಚದ ಶೇ.33 ರಷ್ಟು (ರೂ. 25 ಲಕ್ಷಗಳ ಗರಿಷ್ಠ ಮಿತಿಯೊಂದಿಗೆ) ಸಹಾಯಧನ ನೀಡಲಾಗುವುದು. ಸದರಿ ಅಭಿಯಾನದಡಿ ಆರ್ಥಿಕ ನೆರವು ಪಡೆಯಲು ಬ್ಯಾಂಕ್ ಸಾಲ ಕಡ್ಡಾಯವಾಗಿದೆ ಹಾಗೂ ಫಲಾನುಭವಿಗಳು ಕನಿಷ್ಠ 21 ವರ್ಷ ವಯೋಮಿತಿ ಹೊಂದಿರಬೇಕು, ಹಾಗೂ ಯೋಜನಾ ವೆಚ್ಚದ ಶೇ. 15ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರುವುದು. ಕಟ್ಟಡ ಮತ್ತು ಗೋದಾಮು ನಿರ್ಮಾಣಕ್ಕೆ ಸಹಾಯಧನದ ಮೊತ್ತದಲ್ಲಿ ಬಳಸಿಕೊಳ್ಳಲು ಅವಕಾಶವಿದೆ. ರೈತ ಉತ್ಪಾದಕ ಸಂಸ್ಥೆಗಳು, ಕ್ಲಸ್ಟರ್ ಮಟ್ಟದ ಒಕ್ಕೂಟಗಳು, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು ಹಾಗೂ ವೈಯಕ್ತಿಕ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಾಗಿದ್ದಾರೆ. ಅರ್ಜಿ ಸಲ್ಲಿಸಲು ಮೇ.30 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಭೇಟಿ ನೀಡುವಂತೆ ಅವರು ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಜಿಲ್ಲೆಯ ಸರ್ಕಾರಿ ಶಾಲೆಗಳ ಭರ್ಜರಿ ಸಾಧನೆ – ರಾಜ್ಯ ಸರಾಸರಿಗಿಂತ ಶೇ. ೯.೯ ಹೆಚ್ಚು!



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ 05 : ಜಿಲ್ಲೆಯ ಸರ್ಕಾರಿ ಶಾಲೆಗಳು ಈ ಬಾರಿ ಅತ್ಯುತ್ತಮ ಫಲಿತಾಂಶ ದಾಖಲಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿವೆ. ಜಿಲ್ಲೆಯು ಒಟ್ಟಾರೆಯಾಗಿ ಶೇ. 85.94 ರಷ್ಟು ಫಲಿತಾಂಶವನ್ನು ಹೊಂದುವ ಮೂಲಕ ರಾಜ್ಯ ಸರಾಸರಿಗಿಂತ ಶೇ. 9.9 ರಷ್ಟು ಅಧಿಕ ಸಾಧನೆ ಮಾಡಿ, ರಾಜ್ಯದಲ್ಲೇ ಅತಿ ಹೆಚ್ಚು ಸುಧಾರಣೆ ಕಂಡ ಎರಡನೇ ಜಿಲ್ಲೆಯಾಗಿ ಕಲಬುರಗಿ ಹೊರಹೊಮ್ಮಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಂವರ್ ಸಿಂಗ್ ಮೀನಾ ತಿಳಿಸಿದ್ದಾರೆ.

ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಹೊಸ ಸಭಾಂಗಣದಲ್ಲಿ 2025–26ನೇ ಸಾಲಿನ ಜಿಲ್ಲಾವಾರು ಮತ್ತು ತಾಲೂಕುವಾರು ಪರೀಕ್ಷಾ ಫಲಿತಾಂಶದಲ್ಲಿ ಜಿಲ್ಲೆಯ ಸರಕಾರಿ ಶಾಲೆಗಳು ಫಲಿತಾಂಶದಲ್ಲಿ ಭಾರೀ ಏರಿಕೆ ಕುರಿತು ಎಲ್ಲಾ ಸರಕಾರಿ ಶಾಲೆಯ ಮುಖ್ಯೋಪಾಧ್ಯರಿಗೆ ಸನ್ಮಾನಿಸಿ ಮಾತನಾಡಿದ ಅವರು, 298 ಸರ್ಕಾರಿ ಪ್ರೌಢಶಾಲೆಗಳ ಪೈಕಿ ಜಿಲ್ಲೆಯ ಒಟ್ಟು 109 ಶಾಲೆಗಳು ಶೇ. 100 ರಷ್ಟು ಫಲಿತಾಂಶವನ್ನು ದಾಖಲಿಸಿದ್ದು, ಅದರಲ್ಲಿ 61 ಸರ್ಕಾರಿ ಶಾಲೆಗಳಾಗಿರುವುದು ವಿಶೇಷ ಸಾಧನೆ ಮಾಡಿದೆ ಎಂದರು. ಜಿಲ್ಲೆಯ ಶೈಕ್ಷಣಿಕ ಇತಿಹಾಸದಲ್ಲೇ ಹಿಂದೆಂದೂ ಕಾಣದಂತಹ ಅಭೂತಪೂರ್ವ ಬದಲಾವಣೆಯೊಂದು ನಡೆದಿದ್ದು, 2024–25ನೇ ಸಾಲಿನ ಪರೀಕ್ಷೆ–1ರಲ್ಲಿದ್ದ ಶೇ.42.43 ರಷ್ಟು ಫಲಿತಾಂಶವು 2025–26ನೇ ಸಾಲಿನಲ್ಲಿ ಬರೋಬ್ಬರಿ ಶೇ.85.06 ಕ್ಕೆ ಏರಿಕೆಯಾಗಿದೆ. ಒಟ್ಟು 37,352 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 31,770 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಆಡಳಿತಾತ್ಮಕ ಶೈಕ್ಷಣಿಕ ಸುಧಾರಣೆಗಳು ಯಶಸ್ವಿಯಾಗಿವೆ ಎಂದು ಹೇಳಿದರು.

ಕಳೆದ ವರ್ಷದ ಫಲಿತಾಂಶಕ್ಕೆ ಹೋಲಿಸಿದರೆ ಈ ವರ್ಷ ಶೈಕ್ಷಣಿಕ ಪ್ರಗತಿಯಲ್ಲಿ ಸುಮಾರು ಶೇ. 15 ರಷ್ಟು ಅಂತರವನ್ನು ಸರಿದೂಗಿಸಲಾಗಿದೆ. ರಾಜ್ಯ ಸರಾಸರಿಯ ಜೊತೆ ಹೋಲಿಸಿದರೆ ಜಿಲ್ಲೆಯ ಶಾಲಾ ಶಿಕ್ಷಣದ ಫಲಿತಾಂಶದಲ್ಲಿನ ವ್ಯತ್ಯಾಸವನ್ನು ಗಮನಾರ್ಹವಾಗಿ ತಗ್ಗಿಸಲಾಗಿದೆ. ಈ ಅಭಿವೃದ್ಧಿಯ ಹಿಂದೆ ಶಿಕ್ಷಕರ, ಅಧಿಕಾರಿಗಳ ಹಾಗೂ ವಿದ್ಯಾರ್ಥಿಗಳ ಶ್ರಮವಿದ್ದು, ಮುಂಬರುವ ದಿನಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು. ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಸಾದನೆ ಮಾಡಿದ ಸರಕಾರಿ ಶಾಲೆಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ ಶಿಕ್ಷಕರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕ ಬಸವರಾಜ ಶೆಟ್ಟಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕರಮ್ಮ ಡವಳಗಿ ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

# ವೃದ್ಧಾಶ್ರಮಗಳಲ್ಲಿ ಸೇವಾ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ದೀನ ದಲಿತರ ಹಾಗೂ ಬಡವರ ಬಂಧು, ಹೋರಾಟಗಾರ್ತಿ ಮತ್ತು ಜನಜಾಗೃತಿ ಅಧ್ಯಕ್ಷರಾದ ಕುಮಾರಿ ರಾಜೇಶ್ವರಿ ಮೋರೆ ಅವರ ಜನ್ಮದಿನ ಅಂಗವಾಗಿ ಕಲಬುರಗಿ ವಿವಿಧ ಸಂಘಟನೆಗಳ ಒಕ್ಕೂಟ ಹಾಗೂ ಶ್ರೀಕಾಂತ್ ರೆಡ್ಡಿ ಗೆಳೆಯರ ಬಳಗದ ವತಿಯಿಂದ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಈ ಅಂಗವಾಗಿ ಮಹಾದೇವಿ ವೃದ್ಧಾಶ್ರಮ, ಚಂಚೋಳಿ ಕ್ರಾಸ್ ಹಾಗೂ ನೆಮ್ಮದಿ ವೃದ್ಧಾಶ್ರಮಗಳಲ್ಲಿ ವೃದ್ಧರಿಗೆ ವಿಶೇಷ ಊಟದ ವ್ಯವಸ್ಥೆ ಮಾಡಲಾಗಿದ್ದು, ಹಣ್ಣು–ಹಂಪಲು ವಿತರಿಸಿ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಹೋರಾಟಗಾರ ಎಂ.ಎಸ್. ಪಾಟೀಲ್ ನರಿಬೋಳ, ರೈತ ಸಂಘದ ಜಿಲ್ಲಾಧ್ಯಕ್ಷ ನಾಗೇಂದ್ರ ತಂಬೆ, ಜೈ ಕರ್ನಾಟಕ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಸಾರವಾಡ, ಶ್ರೀರಾಮ್ ಸೇನಾ ಜಿಲ್ಲಾಧ್ಯಕ್ಷ ಲಕ್ಷ್ಮಿಕಾಂತ್ ಸಾದಿ, ರಾಮ್ ಸೇನೆ ಜಿಲ್ಲಾಧ್ಯಕ್ಷ ಗಂಡು ಪಾಟೀಲ್, ಹುಮನ್ ರೈಟ್ಸ್ ಕರ್ನಾಟಕದ ಜನರಲ್ ಅಧ್ಯಕ್ಷ ಚಂದ್ರಕಾಂತ್ ಪಾಟೀಲ್, ಉದ್ಯಮಿ ಲಕ್ಷ್ಮಣ ಬೋವಿ, ಭಾರತೀಯ ಯುವ ಸೈನ್ಯ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಚಿಂಚನಸೂರ, ಹಿಂದೂ ಮುಖಂಡ ಅಪ್ಪು ಗುಬ್ಯಾಡ, ಭಾರತೀಯ ಯುವ ಸೈನ್ಯ ಮಹಿಳಾ ಅಧ್ಯಕ್ಷೆ ಮಾಲಾಶ್ರೀ, ಮುಖಂಡೆ ಜಯಶ್ರೀ ಸೇರಿದಂತೆ ಅನೇಕ ಗಣ್ಯರು, ಹಾಗೂ ಬಸವಕಲ್ಯಾಣದ ವಿವಿಧ ಮುಖಂಡರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ಕುಮಾರಿ ರಾಜೇಶ್ವರಿ ಮೋರೆ ಅವರ ಜನ್ಮದಿನವನ್ನು ಸೇವಾ ಚಟುವಟಿಕೆಗಳ ಮೂಲಕ ಆಚರಿಸಿರುವುದು ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬಲಪಡಿಸುವ ಕಾರ್ಯವಾಗಿದೆ ಎಂದು ಉಪಸ್ಥಿತರು ಅಭಿಪ್ರಾಯಪಟ್ಟರು.

# ಕಸಾಪ ಬೆಳವಣಿಗೆಗೆ ಕನ್ನಡಿಗರು ಸಹಕರಿಸಬೇಕು



• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ಕನ್ನಡದ ಕಂಪು ನಾಡಿನ ಮನೆ ಮನಗಳಲ್ಲಿ ಪಸರಿಸಿ ಸಾಹಿತ್ಯವನ್ನು ಶ್ರೀಮಂತಗೊಳಿಸಿ, ಉತ್ತೇಜಿಸಲು ಕಟ್ಟಲಾಗಿರುವ ಸಮಸ್ತ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾಗಿದೆ. ಈ ಸಂಸ್ಥೆಯ ಬೆಳವಣಿಗೆಗೆ ಪ್ರತಿಯೊಬ್ಬ ಕನ್ನಡಿಗರು ಕೈಜೋಡಿಸಬೇಕು ಎಂದು ಸಹಾಯಕ ಪ್ರಾಧ್ಯಪಕ ಡಾ. ತಿಪ್ಪೇರುದ್ರ ಸಂಡೂರು ಕರೆ ನೀಡಿದರು.

ಅವರು ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಕಸಾಪ ತಾಲೂಕು ಘಟಕದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಯುವಕರು ಪರಿಷತ್ತಿನಲ್ಲಿ ಸದಸ್ಯತ್ವದ ನೊಂದಣಿ ಮಾಡಿಸಿ, ಕನ್ನಡದ ಅಭಿಮಾನವನ್ನು ಬೆಳಸಿಕೊಳ್ಳಬೇಕು, ಜೊತೆಗೆ ಸಾಹಿತ್ಯದ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಕನ್ನಡದ ಕವಿಗಳು, ಕೃತಿಗಳು, ವಿಚಾರಗಳನ್ನು ಅರಿಯಬೇಕು. ಇದರಿಂದ ಕನ್ನಡದ ಅಭಿಮಾನ ಬೆಳೆಯುತ್ತದೆ. ಕನ್ನಡ ಭಾಷೆ ಎಂದರೆ ಮೂರು ಅಕ್ಷರದ ಭಾಷೆ ಅಲ್ಲ, ಮುಕ್ಕೋಟಿ ದೇವತೆಗಳ ಮನಸ್ಸಿನ ಭಾವನೆಯೇ ಕನ್ನಡ ಭಾಷೆ. ಇಂತಹ ಕನ್ನಡ ಕಟ್ಟಿ ಬೆಳಸಲು ಕನ್ನಡದ ಮನಸ್ಸುಗಳು ಮುಂದಾಗಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಕಾಲೇಜಿನ ಪ್ರಾಂಶುಪಾಲೆ ಡಾ. ಶಾಂತಲಾ, ಅಧ್ಯಕ್ಷತೆ ವಹಿಸಿದ್ದ ಕಸಾಪ ಅಧ್ಯಕ್ಷ ನಾಗರಾಜ ಮಸೂತಿ ಹಾಗೂ ಪುರಸಭೆ ಅಧ್ಯಕ್ಷ ಟಿ.ಶೇಖಣ್ಣ ಮಾತನಾಡಿದರು.

ವೇದಿಕೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಶಿಕ್ಷಕ ಎನ್.ಬಸವರಾಜ ಮತ್ತು ಸಿಆರ್‌ಪಿ ಹೆಚ್. ಜಡೇಶ್ ಹಾಗೂ 10ನೇ ತರಗತಿಯಲ್ಲಿ ಕನ್ನಡ ಭಾಷೆಯಲ್ಲಿ 125ಕ್ಕೆ 125 ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಂಶೋಧಕ ಕೆ.ವೀರಭದ್ರಗೌಡ, ಚಿತ್ರಕಲಾ ಶಿಕ್ಷಕ ಮಣ್ಣೂರು ಬಸವರಾಜ, ವಿ.ಈರೇಶಪ್ಪ, ಉದಯಕುಮಾರ, ಕಸಾಪ ಸದಸ್ಯರು, ಕನ್ನಡದ ಅಭಿಮಾನಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ವರವಾದ ಪಟ್ಟದ್ದೇವರ ಶೈಕ್ಷಣಿಕ ಕ್ರಾಂತಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಬಸವಲಿಂಗ ಪಟ್ಟದ್ದೇವರ ಅವಿರತ ಶ್ರಮದ ಫಲವಾಗಿ ಗಡಿ ಭಾಗದಲ್ಲಿ ತಲೆಯೆತ್ತಿರುವ ಗುರುಕುಲ ಶಿಕ್ಷಣ ಸಂಸ್ಥೆಯು ಈ ಭಾಗದ ವಿದ್ಯಾರ್ಥಿಗಳ ಪಾಲಿಗೆ ವರವಾಗಿದೆ ಎಂದು ಶಾಸಕ ಪ್ರಭು ಚವ್ಹಾಣ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಎಸ್ಸೆಸ್ಸೆಲ್ಸಿ ಸಾಧಕ ವಿದ್ಯಾರ್ಥಿಗಳ ಕರಪತ್ರ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಗುರುಕುಲ ಶಾಲೆಯು ಗುಣಾತ್ಮಕ ಶಿಕ್ಷಣ ಮತ್ತು ಉತ್ತಮ ಸಂಸ್ಕಾರಕ್ಕೆ ಪ್ರಸಿದ್ಧಿ ಪಡೆದಿದೆ. ಹಾಗಾಗಿ ಈ ಶಾಲೆಯ ವಿದ್ಯಾರ್ಥಿ ಆನಂದ ಪಾಂಡುರಂಗ

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 624 ಅಂಕ ಪಡೆದು ರಾಜ್ಯಕ್ಕೆ ಎರಡನೇ ಸ್ಥಾನ ಪಡೆದು ನಮ್ಮ ಭಾಗದ ಕೀರ್ತಿಯನ್ನು ರಾಜ್ಯದಾದ್ಯಂತ ಪಸರಿಸಿದ್ದಾನೆ. ಜೊತೆಗೆ ಶಾಲೆಯ 130ಕ್ಕೂ ಅಧಿಕ ವಿದ್ಯಾರ್ಥಿಗಳು ಅಗ್ರ ಶ್ರೇಣಿಯಲ್ಲಿ ಪಾಸ್ ಆಗಿದ್ದಾರೆ ಎಂದು ತಿಳಿಸಿದರು. ನಮ್ಮ ಭಾಗದ ಏಳಿಗೆಗೆ ಶಿಕ್ಷಣವೇ ಮೂಲ ಎಂಬುದನ್ನು ಮನಗಂಡಿದ್ದ ಪಟ್ಟದ್ದೇವರು ಅನೇಕ ಕಷ್ಟ, ಕಾರ್ಪಣ್ಯಗಳನ್ನು ಎದುರಿಸಿ ಗುರುಕುಲ ಎಂಬ ಶ್ರೇಷ್ಠ ಕಲಿಕಾ ಕೇಂದ್ರವನ್ನು ನಿರ್ಮಿಸಿದ್ದಾರೆ. ಪೂಜ್ಯರ ಪರಿಶ್ರಮದ ಫಲವನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಗುರುಕುಲ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಪ್ರತಿವರ್ಷ ನೀಟ್, ಐಐಟಿ ಸೇರಿದಂತೆ ಇತರ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಮೋಘ ಸಾಧನೆಗೈದು ವೈದ್ಯರು, ಎಂಜಿನಿಯರ್ ಆಗುತ್ತಿರುವುದು ಹೆಮ್ಮೆಯ ವಿಷಯ ಎಂದು ಸಂತಸ ವ್ಯಕ್ತಪಡಿಸಿದರು.

ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನಿಧ್ಯ ವಹಿಸಿದ್ದರು.

ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದೇವರು ನೇತೃತ್ವ ವಹಿಸಿದ್ದರು.

ಪ್ರಮುಖರಾದ ಶಿವರಾಜ ಅಲ್ಮಾಜೆ, ಪ್ರವೀಣ ಕಾರಬಾರಿ, ರಾಮಶೆಟ್ಟಿ ಪನ್ನಾಳೆ, ಪೃಥ್ವಿ ಪವಾರ್, ನಾಗರಾಜ ಬಿರಾದಾರ, ಅರವಿಂದ ಮೇತ್ರೆ, ಶರಣಪ್ಪ ಪಾಟೀಲ, ಸಂಜು ರೆಡ್ಡಿ ಎಸ್ಸೆಸ್ಸೆಲ್ಸಿ ಸಂಯೋಜಕ ಪ್ರವೀಣ ಖಂಡಾಳೆ, ರಾಜಕುಮಾರ ಮೋರಗೆ ಸೇರಿದಂತೆ ಇತರರು ಇದ್ದರು.

# ಮೇ 6 ರಂದು ಸರ್ಕಾರಿ ಐಟಿಐನಲ್ಲಿ ಬೃಹತ್ ಕ್ಯಾಂಪಸ್ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

,ಮೇ.05:ಜಿಲ್ಲೆಯ ಯುವಜನತೆಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ನಗರದ ಎಂ.ಎಸ್.ಕೆ. ಮಿಲ್ ರಸ್ತೆಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಪುರುಷ) ವತಿಯಿಂದ ಮೇ 6ರಂದು ಬೆಳಿಗ್ಗೆ 9 ಗಂಟೆಗೆ ಬೃಹತ್ ನೇರ ಕ್ಯಾಂಪಸ್ ಸಂದರ್ಶನವನ್ನು ಆಯೋಜಿಸಲಾಗಿದೆ. ಬೆಂಗಳೂರಿನ ಜಿಗಣಿಯಲ್ಲಿರುವ ಖ್ಯಾತ ಸಂಸ್ಥೆಯಾದ 'ಮೆ॥ ಕಿರ್ಲೋಸ್ಕರ್ ಟೊಯೋಟಾ ಟೆಕ್ಸ್‌ಟೈಲ್ ಮಷಿನರಿ ಪ್ರೈವೇಟ್ ಲಿಮಿಟೆಡ್' ರವರು ಅಪ್ರೆಂಟಿಸ್‌ಶಿಪ್ (ಶಿಶುಕ್ಷು) ತರಬೇತಿಗಾಗಿ ಅರ್ಹ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದಾರೆ.

ಐಟಿಐ ಪೂರ್ಣಗೊಳಿಸಿದವರು ಅಥವಾ ಪ್ರಸ್ತುತ ಅಂತಿಮ ವರ್ಷದ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದು. ಅಗತ್ಯವಿರುವ ಫಿಟ್ಟರ್, ಟರ್ನರ್ ಮತ್ತು ವೆಲ್ಡರ್ ವೃತ್ತಿಗಳಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುತ್ತದೆ. ಅಭ್ಯರ್ಥಿಗಳಿಗೆ 18 ರಿಂದ 23ವರ್ಷದ ಒಳಗಿನ ವಯೋಮಿತಿ ನಿಗದಿಪಡಿಸಲಾಗಿದೆ. ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳು ಮತ್ತು ಜೆರಾಕ್ಸ್ ಪ್ರತಿಗಳನ್ನು ತಪ್ಪದೆ ತರಬೇಕು. ಅಭ್ಯರ್ಥಿಯ ಸ್ವವಿವರ ಪಟ್ಟಿ (ಬಯೋಡೇಟಾ), ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಐಟಿಐ (ITI) ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಆಧಾರ್ ಕಾರ್ಡ್ (ಗುರುತಿನ ಚೀಟಿ), ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು ತಗೆದು ಕೊಂಡು ಹಾಜರಾಗಲು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಸಂಸ್ಥೆಯ ಸೂಚನಾ ಫಲಕವನ್ನು ಪರಿಶೀಲಿಸಬಹುದು ಅಥವಾ ಮೊಬೈಲ್ ಸಂಖ್ಯೆ 9844778565 /9481539511 ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ಐಟಿಐ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹನೀಯರ ಮೂರ್ತಿ ಸ್ಥಾಪನೆ ವಿವಾದ: ಪರ್ಯಾಯವಾಗಿ ದೇವೇಗೌಡ, ವೈಜುನಾಥ ಪಾಟೀಲ್, ಲಾಲ್ ಬಹದ್ದೂರ್ ಶಾಸ್ತ್ರಿ ಮೂರ್ತಿಗೆ ಕೃಷ್ಣ ರೆಡ್ಡಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ ಮಹಾನಗರ ಪಾಲಿಕೆ ವತಿಯಿಂದ ನಗರದಲ್ಲಿನ ವಿವಿಧ ಸ್ಥಳಗಳಲ್ಲಿ ಮಹಾತ್ಮ ಗಾಂಧಿ, ಜವಾಹರಲಾಲ ನೇಹರು, ಇಂದಿರಾ ಗಾಂಧಿ ಹಾಗೂ ರಾಜೀವ ಗಾಂಧಿ ಅವರ ಮೂರ್ತಿಗಳನ್ನು ಸ್ಥಾಪಿಸಲು ಮುಂದಾಗಿರುವ ಕ್ರಮಕ್ಕೆ ಜಾತ್ಯಾತೀತ ಜನತಾದಳ ಪಕ್ಷದ ಮುಖಂಡರಾದ ಕೃಷ್ಣ ರೆಡ್ಡಿ ಸಿ. ರಮೇಶ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ನಗರದಲ್ಲಿ ಪತ್ರಿಕಾ ಘೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಮಹಾತ್ಮ ಗಾಂಧಿ ಅವರ ಮೂರ್ತಿ ಟೌನ್ ಹಾಲ್ ಎದುರುಗಡೆ ಇದ್ದು, ಹೊಸದಾಗಿ ವಿವಿಧ ಮಹನೀಯರ ಮೂರ್ತಿಗಳನ್ನು ಸ್ಥಾಪಿಸಲು ಲಕ್ಷಾಂತರ ರೂಪಾಯಿ ವೆಚ್ಚ ಮಾಡುವ ಬದಲು ಮಹಾನಗರ ಪಾಲಿಕೆಯ ದಿನಗೂಲಿ ಹಾಗೂ ಖಾಯಂ ಕಾರ್ಮಿಕರ ಬಾಕಿ ವೇತನ ಪಾವತಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು. ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಕೊಡುಗೆ ನೀಡಿದ ನಾಯಕರಾದ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ, 371(ಜೆ) ಜಾರಿಗಾಗಿ ಶ್ರಮಿಸಿದ ವೈಜನಾಥ ಪಾಟೀಲ್ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆಗೆ ಚಾಲನೆ ನೀಡಿದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಮೂರ್ತಿಗಳನ್ನು ಸ್ಥಾಪಿಸಿದರೆ ಅದು ಪ್ರದೇಶದ ಜನತೆಗೆ ಹೆಚ್ಚು ಅರ್ಥಪೂರ್ಣವಾಗಲಿದೆ ಎಂದು ಅಭಿಪ್ರಾಯಪಟ್ಟರು.

# ಕಾರವಾರ; ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಮೇ.05: ಕಾರವಾರ ಉಪವಿಭಾಗದ ವ್ಯಾಪ್ತಿಯಲ್ಲಿ ಎಚ್.ಟಿ ವಾಹಕ ಬದಲಾವಣೆ ಕಾಮಗಾರಿ ಇರುವುದರಿಂದ ಮೇ.6 ರಂದು ಬೆಳಗ್ಗೆ 9.30 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ತೆಲಂಗರೋಡ, ಸುಂಕೇರಿ ಫೀಡರಿನ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಹೆಸ್ಕಾಂ, ಕಾರವಾರ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ) ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ. 7 , ಮೇ. 11 ರಂದು ಚೌಡಪೂರ ಮತ್ತು ಶೋರಾಪುರ ವಿದ್ಯುತ್ ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.05– ಜೆಸ್ಕಾಂ ವ್ಯಾಪ್ತಿಯ ಚೌಡಾಪೂರ ಮತ್ತು ಶೋರಾಪುರ ಉಪ–ವಿಭಾಗಗಳ ವಿದ್ಯುತ್ ಗ್ರಾಹಕರ ಸಂವಾದ ಸಭೆಯನ್ನು ಆಯೋಜಿಸಲಾಗಿದೆ. ಚೌಡಾಪೂರ ಉಪ–ವಿಭಾಗ: ಮೇ 7 (ಗುರುವಾರ) ಬೆಳಿಗ್ಗೆ 10 ಗಂಟೆಗೆ ಚೌಡಾಪೂರ ಉಪ–ವಿಭಾಗದ ಕಛೇರಿಯಲ್ಲಿ ನಡೆಯಲಿದೆ. ಶೋರಾಪುರ ಉಪ–ವಿಭಾಗ: ಮೇ 11 (ಸೋಮವಾರ) ಬೆಳಿಗ್ಗೆ 11 ಗಂಟೆಗೆ ಶೋರಾಪುರ ಉಪ–ವಿಭಾಗದ ಕಛೇರಿಯಲ್ಲಿ ನಡೆಯಲಿದೆ. ಈ ಸಂವಾದ ಸಭೆಯು ಕಾರ್ಯ ಮತ್ತು ಪಾಲನೆ ವೃತ್ತ, ಜೆಸ್ಕಾಂ ಕಲಬುರಗಿ ಅಧೀಕ್ಷಕ ಅಭಿಯಂತರರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಥಪೂರ್ಣವಾಗಿ ಹೇಮರೆಡ್ಡಿ ಮಲ್ಲಮ್ಮರ ಜಯಂತಿ ಆಚರಣೆಗೆ ನಿರ್ಧಾರ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:5:ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ಮೇ 10 ರಂದು ಶ್ರೀ ಹೇಮರೆಡ್ಡಿ ಮಲ್ಲಮ್ಮ ಅವರ

ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ ಅವರ ಅಧ್ಯಕ್ಷತೆಯಲ್ಲಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸುವ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅಂದು ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಈ ಜಯಂತಿ ಆಯೋಜಿಸಲು, ಹೇಮರೆಡ್ಡಿ ಮಲ್ಲಮ್ಮ ಅವರ

ಭಾವಚಿತ್ರಕ್ಕೆಪೂಜೆಸಲ್ಲಿಸಿಪುಷ್ಪಾರ್ಚನೆಮಾಡಿ ಗೌರವ ಅರ್ಪಿಸಲು,ನಿರ್ಧರಿಸಲಾಯಿತು.

ಅದರಂತೆ ವೇದಿಕೆ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು, ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ ಅವರು, ಕಾರ್ಯಕ್ರಮದ ಸಂದರ್ಭದಲ್ಲಿ , ಸೂಕ್ತ ಪೋಲಿಸ್ ಬಂದೋಬಸ್ತ್,

ವೇದಿಕೆ ಸಿದ್ಧತೆ ನೋಡಿಕೊಳ್ಳಲು , ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ,ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆ ಮಾಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ತಾಲೂಕ ಮಟ್ಟದಲ್ಲಿ ಶಾಲಾ, ಕಾಲೇಜು, ಗ್ರಾಮ ಪಂಚಾಯತ್, ವಿವಿಧ ಕಚೇರಿ ಗಳಲ್ಲಿ ಈ ಜಯಂತಿ ಆಚರಣೆ, ಮುಖ್ಯ ಕಾರ್ಯಕ್ರಮಕ್ಕೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲುಸಂಬಂಧಿಸಿದಅಧಿಕಾರಿಗಳಿಗೆ ಅವರು ಸೂಚಿಸಿದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕರಿಗೆ ಸನ್ಮಾನಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜದ ಮೂಲಕ ಹಮ್ಮಿಕೊಳ್ಳಲಾಗುವ ಮೆರವಣಿಗೆ ಕಾರ್ಯಕ್ರಮದ ಬಗ್ಗೆ ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಲು ಸೂಚಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ ಸ್ವಾಗತಿಸಿದರು. ಸಾಮಾಜದ ಮುಖಂಡರಾದ ಅಮ್ಮಣಗೌಡ ಅನಸುಗುರ, ಮಲ್ಲಿಕಾರ್ಜುನ ತಳಕ್, ರುದ್ರಗೌಡ ಗುರುಸಿಣಿಗಿ, ಚೆನ್ನಾರೆಡ್ಡಿಗೌಡ ಪಾಟೀಲ್, ಮಲ್ಲಣಗೌಡರ, ಅಮರೇಶ್ ಬಿಲ್ಹಾರ್, ವಿಶ್ವನಾಥ ರೆಡ್ಡಿ ಅಬ್ಬೆತುಮಕೂರು, ಮಲ್ಲಿಕಾರ್ಜುನರೆಡ್ಡಿ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರ ಸಮಾರೋಪ ಸಮಾರಂಭ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ 5: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಬೀದರ ಹಾಗೂ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ 2026-27ನೇ ಸಾಲಿನ ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಇಂದು ಹೌಸಿಂಗ್ ಬೋರ್ಡ್ ಕಾಲೋನಿಯ ಜಿಲ್ಲಾ ಬಾಲ ಭವನದಲ್ಲಿ ನಡೆಯಿತು.

ಕಾರ್ಯಕ್ರಮಕ್ಕೆ ರಾಜ್ಯ ಬಾಲ ಭವನ ಸೊಸೈಟಿ ಉಪಾಧ್ಯಕ್ಷರಾದ ಅನಿಲಕುಮಾರ ಜಮಾದರ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಎಂ.ಎಸ್. ಶ್ರೀಧರ ಅವರು ಮಕ್ಕಳೊಂದಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅನಿಲಕುಮಾರ ಜಮಾದರ್ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರತಿವರ್ಷ ಬೇಸಿಗೆ ಶಿಬಿರಗಳನ್ನು ಆಯೋಜಿಸಲಾಗುತ್ತಿದ್ದು, ಗ್ರಾಮೀಣ ಭಾಗದ ಮಕ್ಕಳಿಗೆ ವಿಶೇಷವಾಗಿ ಉಪಯುಕ್ತವಾಗುತ್ತಿದೆ ಎಂದು ಹೇಳಿದರು. ಮಕ್ಕಳಲ್ಲಿನ ಪ್ರತಿಭೆ ಗುರುತಿಸಿ ಬೆಳೆಸುವ ಉದ್ದೇಶದಿಂದ ಈ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಸ್.ಎ. ಮುನಾಫ್ ಅವರು, ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಇಂತಹ ಶಿಬಿರಗಳು ಮಹತ್ವದ್ದಾಗಿದ್ದು, ಪಠ್ಯೇತರ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸಲಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಎಂ.ಎಸ್. ಶ್ರೀಧರ ಅವರು, 15 ದಿನಗಳ ಕಾಲ ನಡೆದ ಶಿಬಿರದಲ್ಲಿ ಚಿತ್ರಕಲೆ, ಕರಕುಶಲೆ, ಜೇಡಿಮಣ್ಣಿನ ಕಲೆ, ಕರಾಟೆ, ಯೋಗ-ಧ್ಯಾನ, ಸಮೂಹ ನೃತ್ಯ ಹಾಗೂ ನಾಟಕ ತರಬೇತಿಗಳನ್ನು ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರೆಗೆ ನೀಡಲಾಗಿದೆ ಎಂದು ತಿಳಿಸಿದರು.

ಶಿಬಿರದಲ್ಲಿ ಸುಮಾರು 120 ಮಕ್ಕಳು ಪಾಲ್ಗೊಂಡಿದ್ದು, ಪೋಷಕರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಮಹೇಶ್ ಧೂಪೆ, ಸುಧೇಶ್ ಕುಮಾರ್ ಮೋರೆ, ನೇಹಾ ಕಾಂಬಳೆ, ದೇವಿಂದರ್ ಮಾಳಗೆ ಮತ್ತು ರಾಜಕುಮಾರ್ ಅರುಣಾ ಸಾಗರ ಅವರು ತರಬೇತಿ ನೀಡಿದರು.

ಕಾರ್ಯಕ್ರಮವನ್ನು ಸಂಯೋಜಕರಾದ ಸೂರ್ಯಕಾಂತ ಮೋರೆ ಅವರು ನಿರೂಪಿಸಿದರು. ಸುವಿತ್ ಎಸ್. ಮೋರೆ ಅವರು ವಂದನಾರ್ಪಣೆ ಮಾಡಿದರು.

# ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಬಾಲಚಂದ್ರನ್ . ಎಸ್ ರವರ ಅಧ್ಯಕ್ಷತೆಯಲ್ಲಿ ತಾಲೂಕ ಪಂಚಾಯತಿ ಸಭಾಂಗಣ ಕೊಪ್ಪಳದಲ್ಲಿ ಜರುಗಿತು.

ಗೃಹಲಕ್ಷ್ಮಿ ಫಲಾನುಭವಿಗಳಿಗೆ ಜನೇವರಿ-2026ರವರೆಗೆ ಅನುದಾನ ಜಮೆಯಾಗಿರುವ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾಧಿಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು. ನಿಯಂತ್ರಣ ಫಲಕದಲ್ಲಿ ಮಾಹಿತಿಯು ಅಪಡೇಟ್ ಆಗಿರುವದಿಲ್ಲವೆಂದು ಸಭೆಗೆ ತಿಳಿಸಿದರು. ಐಟಿ, ಜಿಎಸ್‌ಟಿ ನೊಂದಣಿಯಾದ ಫಲಾನುಭವಿಗಳು ಸೌಲಭ್ಯ ಪಡೆಯಲು ಅನರ್ಹರಾಗಿರುತ್ತಾರೆ. ಒಮ್ಮೆ ನೊಂದಣಿಯಾದಲ್ಲಿ ಸೌಲಭ್ಯ ದೊರೆಯುವದಿಲ್ಲವೆಂದರು. ಇದು ರಾಜ್ಯಮಟ್ಟದ ಸಮಸ್ಯೆಯಾಗಿರುವದರಿಂದ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ಇರುವದರಿಂದ ಮತ್ತೋಮ್ಮೆ ಜಿಲ್ಲಾ ಮಟ್ಟದ ಸಭೆಯ ಮೂಲಕ ರಾಜ್ಯಮಟ್ಟದ ಸಭೆಯ ಗಮನಕ್ಕೆ ತರಲಾಗುವದು ಅಧ್ಯಕ್ಷರು ತಿಳಿಸಿದರು.

ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿ ಮುಂಡರಗಿ ಫಲಾನುಭವಿಯೊಬ್ಬರಿಗೆ ಸೂಕ್ತ ದಾಖಲೆಗಳು ಇಲ್ಲದ ಪ್ರಯುಕ್ತ ಇದುವರೆಗೆ ಅನುದಾನ ಬಂದಿರುವದಿಲ್ಲ. ಈ ಬಗ್ಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ವಿವರಿಸಿದರು. ಅವಶ್ಯ ದಾಖಲಾತಿಗಳನ್ನು ಸಲ್ಲಿಸಿದಲ್ಲಿ ಕ್ರಮವಹಿಸಲಾಗುವದು ಎಂದರು ಸಭೆಗೆ ಅಧಿಕಾರಿಗಳು ವಿವರಿಸಿದರು. ಅಧ್ಯಕ್ಷರು ಮಾತನಾಡಿ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿ ಮರಣ ಹೊಂದಿದಲ್ಲಿ ಅವರ ಖಾತೆಗೆ ಅನುದಾನ ಜಮೆಯಾಗುತ್ತದೆ ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆ-ಯರ ಮೂಲಕ ಫಲಾನುಭವಿ ಮರಣ ಹೊಂದಿದ ಬಗ್ಗೆ ಗ್ರಾಮ ಪಂಚಾಯತಿಗೆ ಮಾಹಿತಿಯನ್ನು ನೀಡಿ ವಿವರ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.



ಗೃಹಜ್ಯೋತಿ ಯೋಜನೆಯ ಫಲಾನುಭವಿ ವಿವರವನ್ನು ಗ್ರಾಮ ಪಂಚಾಯತಿವಾರು ಮಾಹಿತಿ ಸಲ್ಲಿಸುವಂತೆ ಅಧ್ಯಕ್ಷರು ಜೆಸ್ಕಾಂ ಇಲಾಖೆಯವರಿಗೆ ಸೂಚಿಸಿದರು. ಸದಸ್ಯರಾದ ದೇವರಾಜ ನಡುವಿನಮನಿ ಮಾತನಾಡಿ ಕೊಪ್ಪಳ ನಗರದ 26ನೇ ವಾರ್ಡಿನ ಹೇಮರಡ್ಡಿ ಮಲ್ಲಮ್ಮನ ಗುಡಿ ಜಂಗಲ್ ಕಟಿಂಗ್ ಮಾಡುವಂತೆ ತಿಳಿಸಿದರು. 11 ಕೆವಿ ಮಾರ್ಗ ಬದಲಾವಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಅಧಿಕಾರಿಗಳು ಬಾಡಿಗೆ ಮನೆಯಲ್ಲಿ ವಾಸಿಸುವ ಫಲಾನುಭವಿಗಳು ಬಾಡಿಗೆ ಮನೆ ಬಿಟ್ಟು ಹೋದಲ್ಲಿ ಡಿ-ಲಿಂಕ್ ಮೂಲಕ ಬದಲಾವಣೆ ಮಾಡಿಕೊಳ್ಳಲು ಅವಕಾಶವಿದೆ ಎಂದರು. ಈ ಹಿಂದೆ ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಯೋಜನೆಯನ್ನು ರದ್ದುಪಡಿಸಿ ಎಲ್‌ಟಿ-1 ಯೋಜನೆ ಮಾಡಲಾಗಿದೆ ಜೆಸ್ಕಾಂ ಅಧಿಕಾರಿಗಳು ತಿಳಿಸದರು. ಸದಸ್ಯರಾದ ಮಾನ್ವಿ ಪಾಶಾ ಮಾತನಾಡಿ ಮಳೆಗಾಲ ಪ್ರಾರಂಭವಾಗುತ್ತಿರುವದರಿಂದ ಮುಂಜಾಗ್ರತವಾಗಿ ವಿದ್ಯುತ್ ಮಾರ್ಗದಲ್ಲಿ ಜಂಗಲ್ ಕಟಿಂಗ್ ಹಾಗು ಇನ್ನಿತರ ದುರಸ್ಥಿ ಕಾರ್ಯನಿರ್ವಹಿಸಬೇಕೆಂದು ಜೆಸ್ಕಾಂ ಇಲಾಖೆಯವರಿಗೆ ತಿಳಿಸಿದರು.

ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿ ಪಡಿತರ ಧಾನ್ಯ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಮಾಧ್ಯಮದಲ್ಲಿ ಬರುವ ಮೊದಲು ಇಲಾಖಾಧಿಕಾರಿಗಳು ಈ ಕುರಿತು ನಿಗಾವಹಿಸಿ ಪಡಿತರ ಕಳ್ಳ ಸಾಗಾಣಿಕೆ ಆಗದಂತೆ ಕ್ರಮವಹಿಸುವಂತೆ ತಿಳಿಸಿದರು. ಪಡಿತರ ಫಲಾನುಭವಿಯು ಮಾರಾಟ ಮಾಡುವ ಬಗ್ಗೆ ಲಿಖಿತವಾಗಿ ಬಂದಲ್ಲಿ ಅವರ ಕಾರ್ಡುಗಳನ್ನು ಸ್ಥಗಿತಗೊಳಿಸಲಾಗುವದು ಮತ್ತು ತಾಲೂಕಿನ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಪರಿಶೀಲಿಸಿ ಅವಶ್ಯ ದಾಖಲೆಗಳನ್ನು ನಿರ್ವಹಿಸುವಂತೆ ಅಧಿಕಾರಿಗಳು ವಿವರಿಸಿದರು. ಮುಂದಿನ ಸಭೆಗೆ 07 ಗ್ಯಾಸ್ ಏಜೆನ್ಸಿ ಮಾಲಕರನ್ನು ಹಾಜರಿರುವಂತೆ ತಿಳಿಸಿದರು.

ಘಟಕ ವ್ಯವಸ್ಥಾಪಕರು ಮಾತನಾಡಿ ಕೊಪ್ಪಳದಿಂದ ಬೀದರ್ ಗೆ ಪ್ರಯಾಣಿಸಲು ಸ್ಲೀಪರ್ ಕೋಚ್ ವಾಹನವನ್ನು ಪ್ರಾರಂಭಿಸಲಾಗಿದೆಂದು ಸಭೆಗೆ ವಿವರಿಸಿದರು. ಸದಸ್ಯರಾದ ಜ್ಯೋತಿ ಗೊಂಡಬಾಳ ಮಾತನಾಡಿ ಬಸ್ ಗಳಲ್ಲಿ ಹೆಚ್ಚಿನ ಪ್ರಯಾಣಿಕರು ದ್ವಾರ ಬಾಗಿಲಿನಲ್ಲಿ ನಿಂತುಕೊಂಡು ಹೋಗುತ್ತಿರುವದರಿಂದ ಅನೇಕ ಅವಘಡಗಳು ಸಾಧ್ಯತೆ ಇರುವದರಿಂದ ವಾಹನ ಚಾಲಕ ಮತ್ತು ನಿರ್ವಾಹಕರಿಗೆ ನಿರ್ದೇಶನ ನೀಡುವಂತೆ ತಿಳಿಸಿದರು.

ಯುವ ನಿಧಿ ಸೌಲಭ್ಯ ಕುರಿತು ಇಲಾಖಾ ವತಿಯಿಂದ ಹೆಚ್ಚಿನ ಪ್ರಮಾಣದಲ್ಲಿ ಪ್ರಚಾರ ಕೈಗೊಂಡು ನಿರುದ್ಯೋಗ ಯುವಕರು ಯುವ ನಿಧಿ ಸೌಲಭ್ಯವನ್ನು ಹೆಚ್ಚಿನ ಪ್ರಮಾಣದಲ್ಲಿ ಪಡೆಯುವಂತೆ ಇಲಾಖಾಧಿಕಾರಿಗಳಿಗೆ ಸಭಾಧ್ಯಕ್ಷರು ನಿರ್ದೇಶನ ನೀಡಿದರು.

ಸಭೆಯಲ್ಲಿ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಅನುಷ್ಠಾನ ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ಜ್ಯೋತಿ ಗೊಂಡಬಾಳ, ಅನ್ವರ್ ಹುಸೇನ ಗಡಾದ, ಮಾನ್ವಿ ಪಾಶಾ, ಅನ್ನದಾನಯ್ಯಸ್ವಾಮಿ, ರಾಮಣ್ಣ ಚೌಡ್ಕಿ ಪಂಚ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಕಬ್ಬಿನ ಬಿಲ್ಲು ಪಾವತಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿಗೆ ಬೀಗ: ರೈತ ಸಂಘದ ಎಚ್ಚರಿಕೆ




• ಮಲ್ಲಮ್ಮ ನುಡಿ ವಾರ್ತೆ ಬೀದರ

ಮೇ 05:- ಜಿಲ್ಲೆಯ ರೈತರ ಕಬ್ಬಿನ ಸಂಪೂರ್ಣ ಬಿಲ್ಲು ಒಂದು ವಾರದೊಳಗಾಗಿ ಪಾವತಿಸದಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಬೀಗ ಜಡಿದು ಉಗ್ರ ಪ್ರತಿಭಟನೆ ನಡೆಸುವುದಾಗಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕ ಎಚ್ಚರಿಕೆ ನೀಡಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಏಪ್ರಿಲ್ ತಿಂಗಳ ಅಂತ್ಯದೊಳಗಾಗಿ (30-04-2026) ಎಲ್ಲಾ ಸಕ್ಕರೆ ಕಾರ್ಖಾನೆಗಳು ರೈತರ ಕಬ್ಬಿನ ಬಿಲ್ಲು ಪಾವತಿಸುವುದಾಗಿ ಜಿಲ್ಲಾಡಳಿತ ಭರವಸೆ ನೀಡಿದ್ದರೂ, ಗಡುವು ಕಳೆದ ಒಂದು ವಾರವಾದರೂ ಪಾವತಿ ಆಗಿಲ್ಲ ಎಂದು ಆರೋಪಿಸಲಾಗಿದೆ.

ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಇನ್ನೂ ಒಂದು ವಾರ ಗಡುವು ನೀಡಲಾಗುತ್ತಿದೆ. ಆ ಅವಧಿಯಲ್ಲಿ ಎಲ್ಲಾ ರೈತರ ಖಾತೆಗೆ ಬಾಕಿ ಹಣ ಜಮೆ ಮಾಡಿಸದಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಬೀಗ ಜಡಿದು ಹೋರಾಟ ಕೈಗೊಳ್ಳುವುದಾಗಿ ತಿಳಿಸಲಾಗಿದೆ. ಈ ಸಂದರ್ಭದಲ್ಲಿ ಸಿದ್ರಾಮಪ್ಪಾ ಆಣದೂರೆ (ಜಿಲ್ಲಾಧ್ಯಕ್ಷರು), ಚಂದ್ರಶೇಖರ ಜಮಖಂಡಿ (ರಾಜ್ಯ ಉಪಾಧ್ಯಕ್ಷರು), ಶ್ರೀಮಂತ ಬಿರಾದಾರ (ಜಿಲ್ಲಾ ಕಾರ್ಯಾಧ್ಯಕ್ಷರು), ದಯಾನಂದ ಸ್ವಾಮಿ ಸಿರ್ಸಿ (ಜಿಲ್ಲಾ ಪ್ರಧಾನ ಕಾರ್ಯದರ್ಶಿ), ಶೇಷರಾವ ಕಣಜಿ (ರಾಜ್ಯ ಪ್ರತಿನಿಧಿಗಳು), ಶೋಭಾವತಿ ಕಾರಭಾರಿ (ಮಹಿಳಾ ಘಟಕ ಜಿಲ್ಲಾಧ್ಯಕ್ಷರು), ಭಾಗ್ಯಶ್ರೀ ದೇಶಮುಖ (ಔರಾದ ತಾಲೂಕು ಮಹಿಳಾ ಅಧ್ಯಕ್ಷರು), ಮಹಾನಂದಾ ದೇಶಮುಖ (ಭಾಲ್ಕಿ ತಾಲೂಕು ಮಹಿಳಾ ಅಧ್ಯಕ್ಷರು), ಮಲ್ಲಿಕಾರ್ಜುನ ಬಿರಾದಾರ (ಭಾಲ್ಕಿ ತಾಲೂಕು ಕಾರ್ಯದರ್ಶಿ), ಬಾಬುರಾವ ಜೊಳದಾಬಕೆ (ಭಾಲ್ಕಿ ತಾಲುಕಾಧ್ಯಕ್ಷರು), ಸಿದ್ದಣ್ಣಾ ಭೂಶೆಟ್ಟಿ (ಜಿಲ್ಲಾ ಉಪಾಧ್ಯಕ್ಷರು), ಶಂಕರೆಪ್ಪಾ ಪಾರಾ (ಜಿಲ್ಲಾ ಉಪಾಧ್ಯಕ್ಷರು), ಪ್ರವೀಣ ಕುಲಕರ್ಣಿ (ಕಮಲನಗರ ತಾಲುಕಾಧ್ಯಕ್ಷರು), ರೇವಣಸಿದ್ದಪ್ಪ ಯರಬಾಗ (ಬಸವಕಲ್ಯಾಣ ಕಾರ್ಯದರ್ಶಿ), ಪ್ರಕಾಶ ಬಾವಗೆ (ಔರಾದ ತಾಲುಕಾಧ್ಯಕ್ಷರು), ಸುಭಾಷ ರಗಟೆ (ಬಸವಕಲ್ಯಾಣ ಅಧ್ಯಕ್ಷರು), ನಾಗಯ್ಯಾ ಸ್ವಾಮಿ (ಬೀದರ ತಾಲುಕಾಧ್ಯಕ್ಷರು), ಸುಮಂತ ಗ್ರಾಮಲೆ (ರೈತ ಮುಖಂಡರು), ಸತೀಶ ನನ್ನೂರೆ (ಹುಮನಾಬಾದ ಅಧ್ಯಕ್ಷರು), ವಿಠಲರಾವ ಪಾಟೀಲ (ಕಮಲನಗರ ಕಾರ್ಯದರ್ಶಿ), ರೈತ ಮುಖಂಡರಾದ ಶಿವಾನಂದ ಹುಡಗಿ, ಮಲ್ಲಿಕಾರ್ಜುನ ಚಕಿ, ಝುರಣಪ್ಪಾ ದೇಶಮುಖ, ರಾಜಕುಮಾರ ಪಾಟೀಲ, ಬಸಪ್ಪಾ ಆಲೂರೆ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕುಕನೂರ ಪಟ್ಟಣದ ಜ್ವಲಂತ ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಪಟ್ಟಣ ಪಂಚಾಯಿತಿಯ ಆಡಳಿತ ವೈಫಲ್ಯ, ಸ್ಮಶಾನ ಭೂಮಿಯ ತೀವ್ರ ಕೊರತೆ ಹಾಗೂ ಧೂಳು ಮುಕ್ತ ರಸ್ತೆ ನಿರ್ಮಾಣ ಸೇರಿದಂತೆ ಹಲವು ಮೂಲಭೂತ ಸಮಸ್ಯೆಗಳ ಕುರಿತು ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಇತ್ತೀಚೆಗೆ ಕೊಪ್ಪಳ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ವಿಸ್ತೃತ ಚರ್ಚೆ ನಡೆಸಿದರು.

ಸಭೆಯಲ್ಲಿ ಸಮಿತಿಯ ಮುಖಂಡರು ಪಟ್ಟಣವನ್ನು ಕಾಡುತ್ತಿರುವ ಪ್ರಮುಖ ಮೂರು ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗಳ ಗಮನ ಸೆಳೆದರು.

1. ಪಟ್ಟಣ ಪಂಚಾಯಿತಿಯ ಆಡಳಿತ ವೈಫಲ್ಯ: ಸಮಿತಿಯ ಸಂಚಾಲಕರಾದ ರವಿ ಜಕ್ಕಾ ಅವರು ಮಾತನಾಡಿ, ಪಟ್ಟಣ ಪಂಚಾಯಿತಿಯಲ್ಲಿ ಅಧಿಕಾರಿಗಳ ಗೈರುಹಾಜರಿ ಹಾಗೂ ನಿರ್ಲಕ್ಷ್ಯದಿಂದ ಸಾರ್ವಜನಿಕ ಸೇವೆಗಳು ಹಿನ್ನಡೆಯಾಗುತ್ತಿರುವುದನ್ನು ತಿಳಿಸಿದರು. ಅಧಿಕಾರಿಗಳು ವಾರದಲ್ಲಿ ಕೇವಲ ಮೂರು ದಿನ ಮಾತ್ರ ಲಭ್ಯವಿರುವುದರಿಂದ ಜನರ ಸಮಸ್ಯೆಗಳು ಬಗೆಹರಿಯದೆ ಉಳಿಯುತ್ತಿವೆ. ಅಲ್ಲದೆ, ಪೌರಕಾರ್ಮಿಕರನ್ನು ಕಚೇರಿ ಕೆಲಸಗಳಿಗೆ ಬಳಸುತ್ತಿರುವುದರಿಂದ ಸ್ವಚ್ಛತೆ ಸೇರಿದಂತೆ ಮೂಲಭೂತ ಸೇವೆಗಳು ಕೂಡ ಅಸ್ತವ್ಯಸ್ತವಾಗಿವೆ ಎಂದು ಅವರು ಆರೋಪಿಸಿದರು.

2. ಸ್ಮಶಾನ ಭೂಮಿಯ ತುರ್ತು ಅವಶ್ಯಕತೆ: ಸಮಿತಿಯ ಸದಸ್ಯರಾದ ಅಂದಪ್ಪ ಜವಳಿ ಅವರು ಪಟ್ಟಣದಲ್ಲಿ ಸ್ಮಶಾನ ಭೂಮಿಯ ಕೊರತೆ ಗಂಭೀರ ಸಮಸ್ಯೆಯಾಗಿರುವುದನ್ನು ವಿವರಿಸಿದರು. ರೈಲ್ವೆ ಕಾಮಗಾರಿಯಿಂದ ಹಳೆಯ ಸ್ಮಶಾನಗಳು ಬಳಕೆಗೆ ಅನರ್ಹವಾಗಿದ್ದು, ನಾಗರಿಕರಿಗೆ ಅಂತ್ಯಕ್ರಿಯೆ ನಡೆಸಲು ಸೂಕ್ತ ಸ್ಥಳವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆ, ಸರ್ಕಾರವು ಕನಿಷ್ಠ 12 ಎಕರೆ ಭೂಮಿಯನ್ನು ಖರೀದಿಸಿ ಆಧುನಿಕ ಸೌಲಭ್ಯಗಳೊಂದಿಗೆ ರುದ್ರಭೂಮಿ ನಿರ್ಮಿಸಿಕೊಡಬೇಕೆಂದು ಅವರು ಒತ್ತಾಯಿಸಿದರು.

3. ಧೂಳಿನ ಸಮಸ್ಯೆ ಮತ್ತು ರಸ್ತೆ ಅಭಿವೃದ್ಧಿ: ಸಮಿತಿಯ ಸಹ ಸಂಚಾಲಕರಾದ ಮಂಜುನಾಥ ನಾಡಗೌಡ್ರು ಅವರು ಅಂಬೇಡ್ಕರ್ ವೃತ್ತದಿಂದ ಗುರುಕುಲದವರೆಗಿನ ರಸ್ತೆಯಲ್ಲಿ ಉಂಟಾಗುತ್ತಿರುವ ಭಾರಿ ಧೂಳಿನ ಸಮಸ್ಯೆಯನ್ನು ವಿವರಿಸಿದರು. ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ತಕ್ಷಣವೇ ಈ ರಸ್ತೆಗೆ ಡಾಂಬರು ಹಾಸಿ ಧೂಳು ಮುಕ್ತಗೊಳಿಸಬೇಕೆಂದು ಆಗ್ರಹಿಸಿದರು.

ಸಮಿತಿಯ ಮನವಿಯನ್ನು ಆಲಿಸಿದ ಜಿಲ್ಲಾಧಿಕಾರಿಗಳು ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಮಿತಿಯ ಪದಾಧಿಕಾರಿಗಳಾದ ಕಳಕೇಶ್ ಹತ್ತಿಕಟಗಿ, ದೇವಪ್ಪ ರಾಟಿಮನಿ ಹಾಗೂ ಪಟ್ಟಣದ ಗಣ್ಯರು ಉಪಸ್ಥಿತರಿದ್ದರು.

# ಸ್ಟೇಷನ್ ಗಾಣಗಾಪುರ ಸರ್ಕಾರಿ ಐಟಿಐ ಪ್ರವೇಶಾತಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.05: ತಾಲ್ಲೂಕಿನ ಸ್ಟೇಷನ್ ಗಾಣಗಾಪುರದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಖಖಖ) ಯಲ್ಲಿ 2026-27 ನೇ ಸಾಲಿನ ಪ್ರವೇಶ ಆರಂಭವಾಗಿದ್ದು, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸಂಸ್ಥೆಯಲ್ಲಿ ಎರಡು ವರ್ಷದ ಅವಧಿಯ ಎಲೆಕ್ಟ್ರಿಷಿಯನ್ ಹಾಗೂ ಫಿಟ್ಟರ್ ವೃತ್ತಿಗಳಲ್ಲಿ ತರಬೇತಿ ನೀಡಲಾಗುವುದು. ಪ್ರತಿ ವೃತ್ತಿಯಲ್ಲಿ ಕೇವಲ 20 ಸೀಟುಗಳು ಮಾತ್ರ ಲಭ್ಯವಿದೆ. ಮೇ 08 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು. ಸಾಮಾನ್ಯ ಅಭ್ಯರ್ಥಿಗಳಿಗೆ ಕೇವಲ ರೂ. 1,200 ಬೋಧನಾ ಶುಲ್ಕ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಉಚಿತ ಪ್ರವೇಶ. ಅರ್ಹ ಅಭ್ಯರ್ಥಿಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ ತಿತಿತಿ.ಛಿಣಜ.ಇಚಿಡಿಟಿಚಿಣಚಿಞಚಿ.ರಂತಿ.ಟಿ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಅಥವಾ ಅಗತ್ಯ ದಾಖಲೆಗಳೊಂದಿಗೆ ಸ್ಟೇಷನ್ ಗಾಣಗಾಪುರದ ಕೊಗನೂರ ಕ್ರಾಸ್‌ನಲ್ಲಿರುವ ಸಂಸ್ಥೆಗೆ ಖುದ್ದಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬೇಕೆಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಸಂಸ್ಥೆಯನ್ನು ಸಂಪರ್ಕಿಸಬಹುದಾಗಿದೆ.

# ದೂರದೃಷ್ಟಿಯ ನಾಯಕ ಬಸವರಾಜ ರಾಯರಡ್ಡಿ : ಗವಿಸಿದ್ದೇಶ್ವರ ಸ್ವಾಮೀಜಿ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಪಟ್ಟಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ಜಿಲ್ಲಾ ಆಡಳಿತ ಕೊಪ್ಪಳ, ತಾಲೂಕು ಪಂಚಾಯಿತಿ ಕುಕನೂರು ಹಾಗೂ ಪಟ್ಟಣ ಪಂಚಾಯಿತಿ ಕುಕನೂರು ಆಶ್ರಯದಲ್ಲಿ ಸೋಮವಾರ ಕಾರ್ಯಕ್ರಮ ನಡೆಯಿತು.

ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಡಿ ಜಗಜ್ಯೋತಿ ಬಸವೇಶ್ವರ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಸಂಗೊಳ್ಳಿ ರಾಯಣ್ಣ ಮೂರ್ತಿಗಳ ಪ್ರತಿಷ್ಠಾಪನೆಗೆ ಭೂಮಿ ಪೂಜೆ ನೆರವೇರಿತು. ಯಲಬುರ್ಗಾ ಕ್ಷೇತ್ರದ ಶಾಸಕ ಹಾಗೂ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಮಾತನಾಡಿ, 2300 ಮೆಟ್ರಿಕ್ ಟನ್ ಸಾಮರ್ಥ್ಯದ ಶೀತಲ ಗೃಹ ರೈತರಿಗೆ ಸಹಕಾರಿಯಾಗಲಿದೆ ಎಂದರು. ಜಮೀನು ಕೊರತೆಯಿಂದ ಸರ್ಕಾರಿ ಕಚೇರಿ ಕಾಮಗಾರಿಗಳು ವಿಳಂಬವಾಗಿವೆ. ರುದ್ರಮುನೇಶ್ವರ ಜಾಗದಲ್ಲಿ ಕಚೇರಿಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ತಹಸೀಲ್ದಾರ್ ಕಚೇರಿಗೆ ?18 ಕೋಟಿ, 100 ಹಾಸಿಗೆಗಳ ಸರ್ಕಾರಿ ಆಸ್ಪತ್ರೆಗೆ ?40 ಕೋಟಿ ಮಂಜೂರಾಗಿದೆ. ಬುದ್ಧ-ಬಸವ-ಅಂಬೇಡ್ಕರ್ ಭವನಕ್ಕೆ ?18 ಕೋಟಿ, ಕ್ರೀಡಾಂಗಣಕ್ಕೆ ?8.5 ಕೋಟಿ ಅನುದಾನ



ನೀಡಲಾಗಿದೆ ಎಂದರು. ಜೂನ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಆಹ್ವಾನಿಸುವುದಾಗಿ ತಿಳಿಸಿದರು. ನಂತರ ಎಪಿಎಂಸಿ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಯಿತು.

ರಾಜ್ಯ ಸರ್ಕಾರದ ಕೃಷಿ ಮಾರುಕಟ್ಟೆ ಇಲಾಖೆ ಹಾಗೂ ನಬಾರ್ಡ್ ಖಖಆಈ-29 ಯೋಜನೆಯಡಿ ನಿರ್ಮಿಸಲಾದ ಶೀತಲ ಗೃಹವನ್ನು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಉದ್ಘಾಟಿಸಿದರು.

ಅವರು ಮಾತನಾಡಿ, ರಾಜ್ಯದಲ್ಲಿ 20 ಶೀತಲ ಗೃಹಗಳನ್ನು ನಿರ್ಮಿಸಲಾಗುತ್ತಿದೆ. ದವಸಧಾನ್ಯ, ಹಣ್ಣು ಹಾಗೂ ತರಕಾರಿ ಸಂಗ್ರಹಕ್ಕೆ ಇದರಿಂದ ರೈತರಿಗೆ ಅನುಕೂಲವಾಗಲಿದೆ ಎಂದರು. ಬೆಳೆಗಳಿಗೆ ಯೋಗ್ಯ ಬೆಲೆ ಸಿಗದ ಹಿನ್ನೆಲೆ ಶೀತಲ ಗೃಹಗಳ ಅವಶ್ಯಕತೆ ಹೆಚ್ಚಾಗಿದೆ ಎಂದು ಹೇಳಿದರು. ಎಪಿಎಂಸಿ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಪ್ರಯತ್ನಗಳಿಗೆ ರಾಜ್ಯ ಸರ್ಕಾರ ವಿರೋಧ ವ್ಯಕ್ತಪಡಿಸಿದೆ ಎಂದರು. ಶ್ರಮಿಕ ಭವನ ನಿರ್ಮಾಣ ಹಾಗೂ ಕುಕನೂರು ಎಪಿಎಂಸಿ ಆವರಣಕ್ಕೆ ಅನ್ನದಾನೀಶ್ವರ ಸ್ವಾಮೀಜಿ ಹೆಸರಿಡಲು ಪ್ರಯತ್ನಿಸಲಾಗುವುದು ಎಂದರು.

ಸಂಸ್ಥಾನ ಕೊಪ್ಪಳ ಗವಿಮಠದ ಗವಿಸಿದ್ದೇಶ್ವರ ಸ್ವಾಮೀಜಿ ಮಾತನಾಡುತ್ತಾ

ಮಹನೀಯರ ಮೂರ್ತಿಗಳನ್ನು ವೃತ್ತಗಳಲ್ಲಿ ನಿರ್ಮಿಸಿದರೆ ಅಷ್ಟೇ ಸಾಕಾಗುವುದಿಲ್ಲ; ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. "ಕಿಚ್ಚಿಲ್ಲದ ಬೇಗೆಯಲ್ಲಿ ಬೆಂದನವ್ವ" ಸ್ಮರಣ ಸಂಚಿಕೆ-ಯ ಮಹತ್ವವನ್ನು ವಿವರಿಸಿದರು. ಶಾಸಕ ರಾಯರಡ್ಡಿ ದೂರದೃಷ್ಟಿಯ ನಾಯಕರು ಎಂದು ಕೊಂಡಾಡಿದರು. ಹಾಗೂ ಮುಂಡರಗಿ ಅನ್ನದಾನೀಶ್ವರ ಮಠದ ನಾಡೋಜ ಅನ್ನದಾನೀಶ್ವರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದರು.

ಕೊಪ್ಪಳ ಸಂಸದ ರಾಜಶೇಖರ ಹಿಟ್ನಾಳ ಮಾತನಾಡಿ, ಶಾಸಕ ರಾಯರಡ್ಡಿ ಅವರ ಅಭಿವೃದ್ಧಿ ಕಾರ್ಯಗಳನ್ನು ಪ್ರಶಂಸಿಸಿದರು

ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಕುರಿತ ಸ್ಮರಣ ಸಂ-ಚಿಕೆ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ್ ಜಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ಎಲ್. ಅರಶಿದ್ದಿ, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಲೀಲಾವತಿ ಮುಧೋಳ್, ಉಪಾಧ್ಯಕ್ಷೆ ಮಂಜುಳಾ ಕಲ್ಮನಿ, ತಹಸೀಲ್ದಾರ್ ಬಸವರಾಜ್ ಬೆಣ್ಣೆಶಿರೂರ, ಡಿವೈಎಸ್ಪಿ ಮುತ್ತಣ್ಣ ಸವರಗೋಳ, ಯಲಬುರ್ಗಾ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ನೀಲಪ್ರಭಾ, ಕುಕನೂರ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ ಪಾಟೀಲ ಬಿರಾದಾರ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಾಗೇಶ್ ಹಾಗೂ ಕಾಂಗ್ರೆಸ್ ಮುಖಂಡರಾದ ಹನುಮಂತಗೌಡ ಚಂಡೂರ್, ಸತ್ಯನಾರಾಯಣಪ್ಪ ಹರಪನಹಳ್ಳಿ, ಯಂಕಣ್ಣ ಯರಾಶಿ, ಸಂಗಮೇಶ ಗುತ್ತಿ , ಸೇರಿದಂತೆ ಪಟ್ಟಣ ಪಂಚಾಯಿತಿ ಸರ್ವ ಸದಸ್ಯರು, ಜನಪ್ರತಿನಿಧಿಗಳು ಮತ್ತು ತಾಲೂಕ ಮಟ್ಟದ ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

# ಅಲೆಮಾರಿ / ಅರೆ ಅಲೆಮಾರಿ ಸಲಹಾ ಸಮಿತಿ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.05: ಸೇಡಂ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಅಲೆಮಾರಿ ಮತ್ತು ಅರೆ ಅಲೆಮಾರಿ ತಾಲ್ಲೂಕು ಮಟ್ಟದ ಸಲಹಾ ಸಮಿತಿಗೆ ಹೊಸ ಸದಸ್ಯರನ್ನು ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಹಿಂದೆ ಇದ್ದ ಸಮಿತಿಯ ಸದಸ್ಯರ ಅವಧಿಯು ಮುಕ್ತಾಯಗೊಂಡ ಹಿನ್ನೆಲೆಯಲ್ಲಿ, ಪುನಃ ಹೊಸ ಸದಸ್ಯರನ್ನು ಆಯ್ಕೆ ಮಾಡುವ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಅರ್ಜಿ ಸಲ್ಲಿಸಲು ಪ್ರಮುಖ ಷರತ್ತುಗಳು ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಅಭ್ಯರ್ಥಿಯು ರಾಜ್ಯದ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಅಲೆಮಾರಿ ಅಥವಾ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರುವುದು ಕಡ್ಡಾಯ. ನಿಗದಿತ ಅವಧಿ ಮುಗಿದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

# ಬಲ್ಡೋಟ ತೊಲಗಿಸಿ 187ನೇ ದಿನದ ಹೋರಾಟಕ್ಕೆ ರಾಜ್ಯ ರೈತ ಸಂಘ ಬೆಂಬಲ

# ಕೆರೆಯಲ್ಲ ಎನ್ನುವ ಕಥೆ ಕಟ್ಟಿದ ಅಧಿಕಾರಿಗಳ ಮೇಲೆ ತನಿಖೆ: ಶಾಸಕ ದರ್ಶನ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ನಾನು ಹಿರೇಬಗನಾಳ ಭೇಟಿ ಮಾಡಿ ಜನರನ್ನು ಮಾತನಾಡಿಸಿದಾಗ ಅವರು ತಮಗೆ ಬಂದ ಜೀವನದ ಅಂತ್ಯಕಾಲವಾಗಿದೆ ಎಂದು ಕಣ್ಣೀರು ಹಾಕಿ ಮಹಿಳೆಯರು ಗೋಳು ತೋಡಿಕೊಂಡಾಗ ನನಗೂ ಕಣ್ಣೀರು ಬಂದಿತು ಎಂದು ಬಲ್ಡೋಟ ವಿರೋಧಿ ಹೋರಾಟದ ವೇದಿಕೆಗೆ ಬೆಂಬಲ ನೀಡಲು ಆಗಮಿಸಿದ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣಯ್ಯ ಮನನೊಂದು ಮಾತನಾಡಿದರು. ಅವರು ಇಲ್ಲಿ ಬಂದಿರುವ ಕಾರ್ಖಾನೆಗಳು ಸಮಗ್ರ ಅಭಿವೃದ್ಧಿಗೆ ವಿರುದ್ಧವಾಗಿವೆ. ಇಷ್ಟೊಂದು ಗಂಭೀರ ಸ್ವರೂಪದ ಕಾಯಿಲೆಗಳು ಬಾಧಿಸುವಾಗಲೂ ಇಲ್ಲಿನ ಅಧಿಕಾರಿಗಳಿಗೆ, ರಾಜಕಾರಣಿಗಳಿಗೆ ಜನರ ಬಗ್ಗೆ ಅನುಕಂಪವಿಲ್ಲ. ಹೇಗಾದರೂ ಮಾಡಿ ತಮ್ಮ ಸೇವ ಅವಧಿ ಮುಗಿದರಷ್ಟೆ ಸಾಕು ಎನ್ನುವಂತೆ ನಡೆದುಕೊಳ್ಳುತ್ತಾರೆ. ಇಂತವರಿಂದ ಎಂಥ ಸೇವೆ ನಿರೀಕ್ಷೆ ಮಾಡಲು ಸಾಧ್ಯ.? ಬಸಾಪುರ ಕೆರೆ 44.35 ಎ. ವಿಸ್ತೀರ್ಣ ಇದ್ದು ಇದು ಕೆರೆಯೇ ಅಲ್ಲ ಎನ್ನವ ಕಥೆ ಕಟ್ಟಿದ ಅಧಿಕಾರಿಗಳ ಮೇಲೆ ತನಿಖೆ ಮಾಡಿ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಬೇಕು ಎಂದರು. ನಾನು ಪರಿಸರ ಇಲಾಖೆ ಅಧ್ಯಕ್ಷ ಎಂ.ಪಿ. ನರೇಂದ್ರಸ್ವಾಮಿ ಇವರಿಗೆ ಫೋನ್ ಮಾಡಿದ ಮಾತನಾಡಿದ ದರ್ಶನ್ ಹಿರೇಬಗನಾಳ ಸುತ್ತಲಿನ ಯಾವುದೇ ಮಾಲಿನ್ಯಕಾರಿ ಕಾರ್ಖಾನೆಗಳು ಇಲ್ಲಿ ನಡೆಸಬಾರದು. ಇಲ್ಲಿರುವ ಜನರ ಜೀವ,




ಆರೋಗ್ಯಕ್ಕಿಂತ ಯಾವುದೂ ದೊಡ್ಡದಲ್ಲ ಎಂದು ತಾಕೀತು ಮಾಡಿದ್ದೇನೆ ಎಂದರು.

ರಾಜ್ಯರೈತಸಂಘದರಾಜ್ಯಾಧ್ಯಕ್ಷಬಡಗಲಪುರ ನಾಗೇಂದ್ರಮಾತನಾಡಿ,ಕೆಲವುವಿವೇಕವಿಲ್ಲದ ರಾಜಕಾರಣಿಗಳು ಕಾರ್ಖಾನೆ ಬದಲಾಗಿ ಹಳ್ಳಿಗಳನ್ನು ಸ್ಥಳಾಂತರ ಮಾಡಬೇಕು ಎಂದು ಹೇಳುತ್ತಾರೆ. ಇವರಿಗೆ ಮೊದಲು ಅವರ ಮನೆಯನ್ನು ಬೇರೆಲ್ಲೊ ಹೋಗಿ ಜೀವನ ಕಟ್ಟಿಕೊಳ್ಳಲಿ ಆಗ ಗೊತ್ತಾಗುತ್ತದೆ. ಮೂಲನಿವಾಸ ಸ್ಥಾನ ಬಿಟ್ಟು ಹೋಗುವುದು ಅಷ್ಟೊಂದು ಸುಲಭದ ಕೆಲಸವೇ? ಈ ಹೋರಾಟ ಮತ್ತೊಂದು ದೇವನಹಳ್ಳಿ ಹೋರಾಟವಾಗಿ ಗೆಲ್ಲುತ್ತದೆ. ಹೋರಾಟದ ಗೆಲುವು ಅಂದರೆ ಜೀವದ ಉಳಿವು, ಬದುಕಿನ ಉಳಿವು ಎಂದರು. ಇನ್ನೊಬ್ಬ ರಾಜ್ಯ ಮುಖಂಡ ಚಾಮರಸ ಮಾಲಿ ಪಾಟೀಲ, ಮಲ್ಲಿಕಾರ್ಜುನ ಸತ್ಯಂಪೇಟೆ, ಎಂ.ಎಲ್.ಕೆ ನಾಯ್ಡು ಮಾತನಾಡಿ ಈ ಹೋರಾಟಕ್ಕೆ ಬೆಂಬಲಿಸುತ್ತೇವೆ ಎಂದರು. ಧರಣಿಯಲ್ಲಿ ಪ್ರಧಾನ ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ.ಗೊಂಡಬಾಳ, ನಿವೃತ್ತ ಪ್ರಾಚಾರ್ಯ ಬಿ.ಜಿ.ಕರಿಗಾರ, ಗಣೇಶರೆಡ್ಡಿ ಕನಕಗಿರಿ, ಶರಣಪ್ಪ ಕುರುಬರು, ವಜೀರಸಾಬ ತಳಕಲ್, ಈರಪ್ಪ ಗುಳಗಣ್ಣವರ, ಗಿರಿಯಪ್ಪ ಗುಳಗಣ್ಣವರ, ಬಸಪ್ಪ ಮಂಡಲಗೇರಿ, ಚನ್ನವೀರಯ್ಯ ಹಿರೇಮಠ, ರಮೇಶ ಡಂಬ್ರಳ್ಳಿ, ಮಂಜುನಾಥ ಮಾಲಿ ಪಾಟೀಲ, ಶಿವನಗೌಡ ವಿ.ಬಿ, ಬಸವರಾಜ ಹಳ್ಳಿಕೇರಿ, ಶಂಭುಲಿಂಗಪ್ಪ ಹರಗೇರಿ, ರಾಜಶೇಖರ ಏಳುಬಾವಿ, ಮೋಹನ್ ಅಣ್ಣಿಗೇರಿ, ಮಹಾದೇವಪ್ಪ ಮಾವಿನಮಡು, ವಿಜಯಮಹಾಂತೇಶ ಹಟ್ಟಿ, ಶಿವಪ್ಪ ಹಲಗೇರಿ ಇದ್ದರು.

## ಹುಣಸಗಿ-ಕೆಂಭಾವಿ ರಸ್ತೆ ಕಾಮಗಾರಿ ವಿಳಂಬ: ಅಪಘಾತ ಭೀತಿ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ



ಹುಣಸಗಿ ಇಂದ ಕೆಂಭಾವಿ ಮಾರ್ಗವಾಗಿ ನಡೆಯುತ್ತಿರುವ ರಸ್ತೆಕಾಮಗಾರಿ ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರು ದಿನನಿತ್ಯ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈಗಾಗಲೇ ಡಾಂಬರೀಕರಣ ಮಾಡಿರುವ ರಸ್ತೆ ಹಲವೆಡೆ ಕಿತ್ತಿಹೋಗಿ, ಧೂಳಿನ ನಡುವೆ ವಾಹನಗಳು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.



ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಹೆಚ್ಚು ಸಮಸ್ಯೆ ಎದುರಿಸುತ್ತಿದ್ದು, ದಿನನಿತ್ಯ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಿವೆ. ಇದರಿಂದ ಸಾರ್ವಜನಿಕರಲ್ಲಿ ಅಪಘಾತ ಭೀತಿಯೂ ಹೆಚ್ಚಾಗಿದೆ.

ರಸ್ತೆ ಕಾಮಗಾರಿ ಪೂರ್ಣಗೊಳ್ಳುವವರೆಗೆ ಧೂಳು ನಿಯಂತ್ರಣಕ್ಕಾಗಿ ನಿಯಮಿತವಾಗಿ ನೀರು ಸಿಂಪಡಿಸುವ ವ್ಯವಸ್ಥೆ ಮಾಡಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಕುರಿತು ಜಯ ಕರ್ನಾಟಕ ಜನಪರ ವೇದಿಕೆ ಹುಣಸಗಿ ತಾಲೂಕು ಅಧ್ಯಕ್ಷ ಪ್ರಭುಗೌಡ ಪೋತರಡ್ಡಿ ಅವರು ಪ್ರತಿಕ್ರಿಯಿಸಿ, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಗಮನಹರಿಸಿ ರಸ್ತೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

## ತೊಂಡಿಹಾಳ - 11ನೇ ಶತಮಾನದ ಶಾಸನ ಪತ್ತೆ

ಸುರೇಶ ಕೆ. ವಿ

• ಮಲ್ಲಮ್ಮ ನುಡಿ ವಾರ್ತೆಮುದಗಲ್

ತೊಂಡಿಹಾಳ ಗ್ರಾಮದಲ್ಲಿ ಕಲ್ಯಾಣ ಚಾಳುಕ್ಯರ ಕಾಲದ ಶಾಸನವನ್ನು ಅದೆ ಊರಿನ ಸಾಹಿತಿಗಳು ಮತ್ತು ಶ್ರೀ ಹುಲಿಗೆಮ್ಮ ದೇವಿ ದೇವಾಲಯದ ಟ್ರಸ್ಟ್ ಅಧ್ಯಕ್ಷ ಶರಣಪ್ಪ ಕರಡಿ ಮತ್ತು ಅವರ ಸ್ನೇಹಿತ ಅಮರಯ್ಯ ಮಠ ಶಿಕ್ಷಕರು ಗ್ಯಾನಪ್ಪ, ಹನುಮಂತ ವಾಲಿಕಾರ ಬಿಳೆಕುರಿ, ದೇವಪ್ಪ ಚೌಡಕೇರ, ಶಂಕರ್ ವಾಲಿಕಾರ ಹುಲ್ಲಪ್ಪ ವಾಲಿಕಾರ, ಹನುಮಂತ ವಾಲಿಕಾರ ಅವರು ಪತ್ತೆ ಮಾಡಿದ್ದಾರೆ.

1980ರಲ್ಲಿ ತೊಂಡಿಹಾಳ ಗ್ರಾಮವು ನಾರಾಯಣಪುರ ಜಲಾಶಯದ ಹಿನ್ನಿರೀನಲ್ಲಿ ಮುಳುಗಡೆ ಆದ ಕಾರಣ ಆ ಊರಿನ ರಾಷ್ಟ್ರಕೂಟರ ಕಾಲದ ಕರಿಬಂಟಪ್ಪನ ದೇವಾಲಯ ಮತ್ತು ಈ ಶಾಸನ ನೀರಿನಲ್ಲಿ ಮುಳುಗಡೆ ಆಗಿದ್ದವು. ಈಗ ಬೇಸಿಗೆ ಇದ್ದ ಕಾರಣ ಜಲಾಶಯದಲ್ಲಿ ನೀರು ಕಡಿಮೆ ಆದ ಕಾರಣ ದೇವಾಲಯ ಮತ್ತು ಶಾಸನ ಹೊರಗಡೆ ಬಿದ್ದಿದೆ. ಅದನ್ನು ನೋಡಿದ ತೋಂಡಿಹಾಳ ಸ್ನೇಹಿತರ ಬಳಗ ದೇವಾಲಯ ಹತ್ತಿರ ಹೋದಾಗ ಶಾಸನ ಅವರ ಕಣ್ಣಿಗೆ ಬಿದ್ದಿದೆ. ಅದರ ಮಾಹಿತಿಯನ್ನು ಲಿಂಗಸುಗೂರಿನ ಅಶೋಕ ನಾಯಕ ದಿದ್ದಿಗಿಯವರಿಗೆ ತಿಳಿಸಿದ್ದಾರೆ ಅವರು ಆ ಶಾಸನದ ಚಿತ್ರಗಳನ್ನು ಹಾಕಿಸಿಕೊಂಡು ಅದನ್ನು ಅವರು ಮತ್ತು ಅವರ ಸ್ನೇಹಿತರಾದ ಶಾಸನತಜ್ಞ ಶಶಿಕುಮಾರ ನಾಯಕ ತುಮಕೂರು ಅಧ್ಯಯನ ಮಾಡಿ ಈ ಶಾಸನದ ಮಾಹಿತಿ ನೀಡಿದ್ದಾರೆ ಸುಮಾರು ಹನ್ನೊಂದನೆಯ ಶತಮಾನಕ್ಕೆ



ಸೇರುವ ಈ ಶಾಸನವು ಕಲ್ಯಾಣ ಚಾಲುಕ್ಯರ ಕಾಲಕ್ಕೆ ಸೇರುತ್ತದೆ. ಇರುವ ಮಾಹಿತಿಯ ಆಧಾರದ ಮೇಲೆ ಇದೊಂದು ದಾನ ಶಾಸನವಾಗಿದೆ.

ಮೊದಲಿಗೆ ರಾಜನ ಬಿರುದಾವಳಿಗಳಿದ್ದು ಸತ್ಯಕಾಮ,

ಶಾಸನವು ಒಟ್ಟು 7 ಸಾಲಿನ ಶಾಸನವಾಗಿದೆ 20 ಫೀಟ್ ಉದ್ದ 8 ಫೀಟ್ ಅಗಲದ ನದಿಯ ಕರಿ ಬಂಡೆಯ ಮೇಲೆ ಈ ಶಾಸನವನ್ನು ಬರಿದಿದ್ದಾರೆ. ಈ ಶಾಸನದ ಪಾಠವು ಈ ರೀತಿಯಲ್ಲಿದೆ

ಸ್ವಸ್ತಿಮ–. ರತ್ನಾಕರ
ಸತ್ಯಕಾಮ . ತ್ಯಬಿಂರಾಮ –ನಮ
ಅಿ – ತ್ಸರ –ಕಾಮನೋಜಕೀರ್ತಿ
ಮಂ ಪ್ರಚ್ಚಣ್ಡ ಘಂಟೆಗೊನಿಟ್ಟಾರಿ ಗಜಕೇಸರಿರವಂ ಆರೋಹರಿ ಗನ್ಧವಾರಣಂ
ಕಲಿಯುಗ ಭಗದತ್ತಂ ದಣ್ಡಿಂಗೆ
ಆಳಿ – ಹರೀ –ಕಾರ
ವಾಸವಾದಿತ್ಯ ಕುಳತಿಳಕ – .ನಾಮಾ ಸಮಸ್ತ ಪ್ರಸಸ್ತಿ ಸಹಿತಂ
ಕಣ್ಡುಗ – ಕೊಟ್ಟರ್

ಗಜಕೇಸರಿ, ಕಲಿಯುಗ ಭಗದತ್ತ, ರತ್ನಾಕರ, ಗಂಧವಾರಣ, ವಾಸವಾದಿತ್ಯನ ಕುಲತಿಳಕ ಹಲವು ಪ್ರಶಸ್ತಿ ಸಹಿತನಾದಂತ ರಾಜನು ಆಳ್ವಿಕೆ ಮಾಡುವ ಸಮಯದಲ್ಲಿ ಖಂಡುಗ ಜಮೀನನ್ನು ದಾನ ನೀಡಲಾಗಿದೆ.

ಯಾರಿಗೆ ಹಾಗೂ ಯಾರು ದಾನವನ್ನು ನೀಡಿದ್ದಾ-ರೆ ಎಂಬುದು ಶಾಸನ ಸ್ಪಷ್ಟವಾಗಿಲ್ಲದಿರುವುದರಿಂದ ತಿಳಿದುಬರುವುದಿಲ್ಲ.

## ವಸತಿ ರಹಿತರ ಅರ್ಹ ಫಲಾನುಭವಿಗಳ ಪಟ್ಟಿ ಸೇರ್ಪಡೆಗೆ ಮೇ 15 ಕೊನೆಯ ದಿನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 05:2018ರ ವಸತಿ ರಹಿತ ಮತ್ತು ನಿವೇಶನ ರಹಿತ ಸಮೀಕ್ಷೆಯ ಪಟ್ಟಿಯಲ್ಲಿ ಬಿಟ್ಟುಹೋಗಿರುವ ಅರ್ಹ ಫಲಾನುಭವಿಗಳನ್ನು ಸೇರಿಸಲು ಹಾಗೂ ಪರಿಷ್ಕರಿಸಲು ಮೇ 15 ಕೊನೆಯ ದಿನವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

2018ರಲ್ಲಿ ನಡೆಸಲಾದ ಸಮೀಕ್ಷಾ ಪಟ್ಟಿಯನ್ನು ಪರಿಷ್ಕರಿಸಲು ಮತ್ತು ಅರ್ಹ ಕುಟುಂಬಗಳನ್ನು ಪಟ್ಟಿಗೆ ಸೇರಿಸಲು ಈಗ ಅವಕಾಶ ಕಲ್ಪಿಸಲಾಗಿದೆ. ಅರ್ಹ ಫಲಾನುಭವಿಗಳ ಹೆಸರನ್ನು ಸೇರಿಸಲು ಮೇ 15 ರವರೆಗೆ ಅಂತಿಮ ಕಾಲಾವಕಾಶ ನೀಡಲಾಗಿದೆ.

ಈ ನಿಗದಿತ ದಿನಾಂಕದ ನಂತರ ಯಾವುದೇ ಸೇರ್ಪಡೆಗೆ ಅ ವ ಕಾ ಶ ವಿ ರ್ಀ ವು ದಿ ಲ್ಲ ಮತ್ತು ಅಂದೇ ಪಟ್ಟಿಯನ್ನು



ಅಂತಿಮಗೊಳಿಸಲಾಗುವುದು. ಮೇ 15ರ ನಂತರ ಸಿದ್ಧವಾಗುವ ಪಟ್ಟಿಯನ್ನೇ ಅಂತಿಮ 'ವಸತಿ ಮತ್ತು ನಿವೇಶನ ರಹಿತರ ಪಟ್ಟಿ' ಎಂದು ಪರಿಗಣಿಸಲಾಗುವುದು.

ಅರ್ಹ ಫಲಾನುಭವಿಗಳು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಅಥವಾ ಹೆಸರು ಸೇರ್ಪಡೆಗಾಗಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿ ಸಿಬ್ಬಂದಿಯನ್ನು ಕೂಡಲೇ ಸಂಪರ್ಕಿಸಬಹುದಾಗಿದೆ. ವಸತಿ ಸೌಲಭ್ಯದಿಂದ ವಂಚಿತರಾದ ಅರ್ಹ ಕುಟುಂಬಗಳು ಈ ಕೂಡಲೇ ಸಂಬಂಧಪಟ್ಟ ದಾಖಲೆಗಳೊಂದಿಗೆ ಗ್ರಾಮ ಪಂಚಾಯತಿಯನ್ನು ಸಂಪರ್ಕಿಸಿ ತಮ್ಮ ಹೆಸರು ಪಟ್ಟಿಯಲ್ಲಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು.

ಅರ್ಹ ಫಲಾನುಭವಿಗಳನ್ನು ಕೈಬಿಟ್ಟಿದ್ದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ತವ್ಯನಿಷ್ಠೆಗೆ ಮನ್ನಣೆ: ನಾಗಪ್ಪಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಮೇ 5: ತಾಲೂಕಿನ ಯಲಗಲದಿನ್ನಿ ಗ್ರಾಮದ ನಾಗಪ್ಪ ಅವರಿಗೆ ಎಎಸ್ಐ ಹುದ್ದೆಗೆ ಬಡ್ತಿಯಾಗಿರುವ ಹಿನ್ನೆಲೆಯಲ್ಲಿ ಗೆಳೆಯರ ಬಳಗದಿಂದ ಅಭಿನಂದನಾ ಕಾರ್ಯಕ್ರಮ ಆಯೋಜಿಸಲಾಯಿತು. ಪೊಲೀಸ್ ಕಾನ್ಸ್ಟೇಬಲ್ ಆಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ ಅವರು ತೋರಿದ ಪ್ರಾಮಾಣಿಕತೆ, ಕರ್ತವ್ಯನಿಷ್ಠೆ ಹಾಗೂ ಸಾರ್ವಜನಿಕ ಸೇವಾ ಮನೋಭಾವ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿತ್ತು.

ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಪತ್ರಿಕೆ ಕಾರ್ಯಾಲಯದಲ್ಲಿ, ಪತ್ರಿಕೆಯ ಸಂಪಾದಕರಾದ ಲಕ್ಷ್ಮಣ್ ಬರಿಕೇರ್ ಅವರ ನೇತೃತ್ವದಲ್ಲಿ ನಾಗಪ್ಪ ಯಲಗಲದಿನ್ನಿಯವರಿಗೆ ಶಾಲು ಹೊದಿಸಿ, ಹಾರ ಹಾಕಿ ಸಿಹಿ ಹಂಚುವ ಮೂಲಕ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ವರದಿಗಾರರಾದ ಅಮರೇಶಸ್ವಾಮಿ ಬಲ್ಲಟಗಿ, ಅಮರೇಶ ಕಲ್ಲೂರು, ಶ್ರೀಕಾಂತ್ ಗುತೆ–ೀದಾರ, ಎಚ್.ಎನ್. ಹೂಗಾರ, ಬಸವರಾಜ ನಾಯಕ, ಅಮರೇಶ ಗೋಸ್ಲೆ, ರವಿಕುಮಾರ ಹೊಸಮನಿ, ಅಮರೇಶ ಹಾಗೂ ಶಶಿಕುಮಾರ ಉಪಸ್ಥಿತರಿದ್ದು ಶುಭಾಶಯಗಳನ್ನು ಕೋರಿದರು. ಎಎಸ್ಐ ನಾಗಪ್ಪ ಅವರಿಗೆ ಮುಂದಿನ ದಿನಗಳಲ್ಲಿ ಇನ್ನೂ ಉನ್ನತ ಹುದ್ದೆಗಳು ದೊರೆಯಲಿ ಎಂದು ಹಾರೈಸಿದರು.

## ಬಿಸಿಲಿನ ಬೇಗೆಯಿಂದ ಜಾಗ್ರತೆ: ಸಾರ್ವಜನಿಕರಿಗೆ ಜಿಲ್ಲಾ ಆರೋಗ್ಯ ಇಲಾಖೆಯ ಮಹತ್ವದ ಸಲಹೆಗಳು

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 05:ಜಿಲ್ಲೆಯಾದ್ಯಂತ ದಿನದಿಂದ ದಿನಕ್ಕೆ ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಏರುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ. ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ಧರು ಬಿಸಿಲಿನಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳಿಂದ ರಕ್ಷಿಸಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ.

*ಆರೋಗ್ಯ ರಕ್ಷಣೆಗೆ ಪ್ರಮುಖ ಕ್ರಮಗಳು:*

*ಸಾಕಷ್ಟು ನೀರು ಕುಡಿಯಿರಿ:* ಬಾಯಾರಿಕೆ ಇಲ್ಲದಿದ್ದರೂ ದಿನವಿಡೀ ಅತಿ ಹೆಚ್ಚು ನೀರನ್ನು ಕುಡಿಯುತ್ತಿರಬೇಕು. ನಿರ್ಜಲೀಕರಣ ತಡೆಯಲು ಇದು ಅತಿ ಮುಖ್ಯವಾಗಿದೆ.

*ನೈಸರ್ಗಿಕ ಪಾನೀಯಗಳ ಬಳಕೆ:* ಅಂಗಡಿಯ ಕೃತಕ ಪಾನೀಯಗಳ ಬದಲು ಮನೆಯಲ್ಲಿ ತಯಾರಿಸಿದ ನಿಂಬೆ ಹಣ್ಣಿನ ರಸ, ಮಜ್ಜಿಗೆ ಹಾಗೂ ನೈಸರ್ಗಿಕ ಎಳೆನೀರನ್ನು ಹೆಚ್ಚಾಗಿ ಸೇವಿಸಬೇಕು.



*ಆಹಾರ ಕ್ರಮ:* ಸೌತೆಕಾಯಿ, ಕಲ್ಲಂಗಡಿ, ಕಿತ್ತಳೆ ಹಾಗೂ ದ್ರಾಕ್ಷಿಯಂತಹ ನೀರಿನ ಅಂಶ ಹೆಚ್ಚಿರುವ ಹಣ್ಣು ಮತ್ತು ತರಕಾರಿಗಳನ್ನು ದಿನನಿತ್ಯದ ಆಹಾರದಲ್ಲಿ ಸೇರಿಸಿಕೊಳ್ಳಬೇಕು.

*ಉಡುಪು:* ಹಗುರವಾದ, ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸುವುದು ದೇಹವನ್ನು ತಂಪಾಗಿರಿಸಲು ಸಹಕಾರಿಯಾಗಲಿದೆ.

*ಹೊರಹೋಗುವಾಗ ವಹಿಸಬೇಕಾದ ಮುನ್ನೆಚ್ಚರಿಕೆ:*

ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಬಿಸಿಲಿನ ತೀವ್ರತೆ ಹೆಚ್ಚಿರುವುದರಿಂದ ಆ ಸಮಯದಲ್ಲಿ ಹೊರಗೆ ಹೋಗುವುದನ್ನು ಸಾಧ್ಯವಾದಷ್ಟು ತಪ್ಪಿಸಿ. ಅನಿವಾರ್ಯವಿದ್ದಲ್ಲಿ ಛತ್ರಿ, ಟೋಪಿ, ಕಪ್ಪು ಕನ್ನಡಕ ಹಾಗೂ ಚಪ್ಪಲಿಗಳನ್ನು ಕಡ್ಡಾಯವಾಗಿ ಬಳಸಿ. ಸಭೆ–ಸಮಾರಂಭಗಳನ್ನು ನಡೆಸುವವರು ಜನರಿಗೆ ನೆರಳು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. *ತುರ್ತು ಸಂದರ್ಭದಲ್ಲಿ ಏನು ಮಾಡಬೇಕು?* ಬಿಸಿಲಿನಿಂದ ಯಾರಾದರೂ ಪ್ರಜ್ಞೆ ತಪ್ಪಿ ಬಿದ್ದರೆ, ಕೂಡಲೇ ಅವರನ್ನು ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು. ಒದ್ದೆ ಬಟ್ಟೆಯಿಂದ ಮೈ ಒರೆಸಿ, ತಕ್ಷಣವೇ ವೈದ್ಯಕೀಯ ಚಿಕಿತ್ಸೆಗೆ ವ್ಯವಸ್ಥೆ ಮಾಡಬೇಕು.

*ಪ್ರಾಣಿಗಳ ಬಗ್ಗೆ ನಿಗಾ ಇರಲಿ:*

ಮನುಷ್ಯರಷ್ಟೇ ಅಲ್ಲದೆ ಸಾಕು ಪ್ರಾಣಿಗಳ ಬಗ್ಗೆಯೂ ಕಾಳಜಿ ವಹಿಸಬೇಕು. ಅವುಗಳನ್ನು ನೆರಳಿನಲ್ಲಿರಿಸಿ, ಕುಡಿಯಲು ಸಾಕಷ್ಟು ನೀರಿನ ವ್ಯವಸ್ಥೆ ಮಾಡಬೇಕು. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಒಂಟಿಯಾಗಿ ಬಿಟ್ಟು ಹೋಗಬಾರದು ಎಂದು ಅವರು ತಿಳಿಸಿದ್ದಾರೆ. ಆಲ್ಕೋಹಾಲ್, ಅತಿಯಾದ ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ (ತಂಪು ಪಾನೀಯ) ಪಾನೀಯಗಳು ದೇಹವನ್ನು ಶೀಘ್ರವಾಗಿ ನಿರ್ಜಲೀಕರಣಗೊಳಿಸುವುದರಿಂದ ಅವುಗಳ ಸೇವನೆಯನ್ನು ಆದಷ್ಟು ಕಡಿಮೆ ಮಾಡಬೇಕು. ವಿಶೇಷವಾಗಿ ಕೆರೆ, ಬಾವಿ ಅಥವಾ ಕಾಲುವೆಗಳ ಹತ್ತಿರ ಮಕ್ಕಳು ಹೋಗದಂತೆ ಪೋಷಕರು ಹೆಚ್ಚಿನ ನಿಗಾ ವಹಿಸಬೇಕು ಎಂದು ಡಿಹೆಚ್ಓ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಬಿಜೆಪಿ ಕಾರ್ಯಕರ್ತರಿಂದ ಗೆಲುವಿನ ಸಂಭ್ರಮಾಚರಣೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಶ್ಚಿಮ ಬಂಗಾಲ, ಆಸ್ಸಾಂ ವಿಧಾನ ಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲವು ಸಾಧಿ ಅಧಿಕಾರ ಪಡೆದಿರವದಕ್ಕೆ ಮುದಗಲ್ ಬಿಜೆಪಿ ಘಟಕದವತಿಯಿಂದ ಸೋಮವಾರ ಸಂಜೆ ಸಂಭ್ರಮಾಚರಣೆ ಮಾಡಿದರು.

ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಬಿಜೆಪಿ ಮುಖಂಡರು ಡಾ!! ಬಾಬಾ ಸಾಹೇಬ್ ಅಂಬೇಡ್ಕರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿದರು. ಪಕ್ಷದ ಪರವಾಗಿ ಕಾರ್ಯಕರ್ತರು ಪಕ್ಷದ ಪರ ಜೈಕಾರ ಹಾಕಿ, ಸಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಾಣೆ ಆಚರಿಸಿದರು.

ಮುದಗಲ್ ಘಟಕ ಅಧ್ಯಕ್ಷ ಕರಿಯಪ್ಪ ಯಾದವ್, ಸಂತೋಷ ಸುರುಪುರ, ಮಲ್ಲಪ್ಪ ಮಾಟೂರ, ರಫಿಕ್, ಚಂದಾವಲಿಸಾಬ್, ಗದ್ದೆಪ್ಪ ಜಕ್ಕೆರಮಡು, ರವಿಕುಮಾರ ಕಂಬಾರ, ವೆಂಕಟೇಶ ಹಿರೆಮನಿ, ನಾಗರಾಜ ತಳವಾರ ಸೇರಿದಂತೆ ಇತರರಿದ್ದರು.

## ಕುರುಗೋಡು: ಸರ್ಕಾರಿ ಐಟಿಐ ಕಾಲೇಜಿನಲ್ಲಿ ಪ್ರವೇಶಾತಿ ಆರಂಭ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 05:ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ (ಐಟಿಐ) 2026–27ನೇ ಸಾಲಿನ ಆಗಸ್ಟ್ ಬ್ಯಾಚ್‌ನ ವಿವಿಧ ವೃತ್ತಿ ವಿಭಾಗಗಳಿಗೆ ಪ್ರವೇಶಾತಿ ಪ್ರಕ್ರಿಯೆಯು ಆರಂಭವಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಮೇ 08 ರೊಳಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ ತಿತಿತಿ. ಛಿಣಜ.ಇಚಿಡಿಟಿಚಿಣಚಿಇಚಿ.ರಂತ. ಟಿ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಅಥವಾ ಅಗತ್ಯ ದಾಖಲಾತಿಗಳೊಂದಿಗೆ ನೇರವಾಗಿ ಕುರುಗೋಡು ಸರ್ಕಾರಿ ಐಟಿಐ ಕಾಲೇಜಿಗೆ ಭೇಟಿ ನೀಡಿ ದಾಖಲಾತಿ ಪರಿಶೀಲನೆ ಮಾಡಿಸಿಕೊಳ್ಳಬಹುದು.

*ಲಭ್ಯವಿರುವ ವೃತ್ತಿ ಕೋರ್ಸ್ಗಳು:*

ಎಲೆಕ್ಷಿ ??ೀಷಿಯನ್(2 ವರ್ಷ), ಫಿಟ-ೕರ್(2 ವರ್ಷ), ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್(2 ವರ್ಷ), ಸಿಎನ್‌ಸಿ ಮಷಿನಿಂಗ್ ಟೆಕ್ನಿಷಿಯನ್(2 ವರ್ಷ), ವರ್ಚುವಲ್ ಅನಾಲಿಸಿಸ್ ಅಂಡ್ ಡಿಸೈನರ್ (2 ವರ್ಷ), ಇಂಡಸ್ಟ್ರಿಯಲ್ ರೋಬೋಟಿಕ್ಸ್ ಅಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಷಿಯನ್ (1ವರ್ಷ), ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಅಂಡ್ ಆಟೋಮೇಷನ್ (1 ವರ್ಷ), ಇಂಜಿನಿಯರಿಂಗ್ ಡಿಸೈನ್ ಟೆಕ್ನಿಷಿಯನ್ (1 ವರ್ಷ).

ದಾಖಲಾತಿ ಹಾಗೂ ಇತರ ಮಾಹಿತಿಗಾಗಿ ವಿ.ತಿಮ್ಮರಾಜು(ಪ್ರಾಂಶುಪಾಲರು)–9980715718, ಸತೀಶ್ ಡಿ.ಜಿ–9481175925, ಮಹೇಶ್ ಟಿ–7892431265, ರಾಜಶೇಖರ್ ಪಿ.ಜೆ–7975845633 ಗೆ ಸಂಪರ್ಕಿಸಬಹುದಾಗಿದೆ ಎಂದು ಕುರುಗೋಡು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 05:ಕುರುಗೋಡು ಪಟ್ಟಣದ 17 ನೇ ವಾರ್ಡ್ ನ ಹರಿಕೃಪ ಕಾಲೋನಿಯ ನಿವಾಸಿಯಾದ ಜಗದೀಶ ಎನ್ನುವ 48 ವರ್ಷದ ವ್ಯಕ್ತಿಯು ವಾಹನ ಚಾಲಕ ಕೆಲಸ ಮಾಡಿಕೊಂಡಿದ್ದು, 2017 ರ ನ.24 ರಂದು ಮನೆಯಿಂದ ಹೊರಗಡೆ ಹೋಗಿಬರುತ್ತೇನೆ ಎಂದು ಹೇಳಿಹೋದವನು ಮರಳಿ ಬಾರದೇ ಕಾಣೆಯಾಗಿರುತ್ತಾನೆ. ಈ ಕುರಿತು ಕುರುಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ವ್ಯಕ್ತಿಯ ಚಹರೆ ಗುರುತು:ಎತ್ತರ 4.8 ಅಡಿ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆ-ಯಾದ ಸಂದರ್ಭದಲ್ಲಿ ಕ್ರಿಮ್ ಬಣ್ಣದ ಅಂಗಿ ಮತ್ತು ಗ್ರೇ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಭಾಷೆ ಮಾತನಾಡುತ್ತಾನೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಕುರುಗೋಡು ಪೊಲೀಸ್ ಠಾಣೆಯ ದೂ.08393–263433 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರ್ವಹಣೆಯಿಲ್ಲದೇ ಅವನತಿಯತ್ತ ಸಾಗುತ್ತಿರುವ ಪ್ರವಾಸಿ ಮಂದಿರ

ಎನ್.ಪರಶುರಾಮ್ ಹಗರಿಬೊಮ್ಮನಹಳ್ಳಿ

- ಮಲ್ಲಮ್ಮ ನುಡಿ ವಾರ್ತೆಹಗರಿಬೊಮ್ಮನಹಳ್ಳಿ

ಹೌದು ಅಧಿಕಾರಿಗಳಿಗೆ ಹಾಗು ಕೆಲ ವರ್ಗ ಮುಖಂಡರುಗಳಿಗೆ ತಂಗಲು ಹಾಗು ಸಭೆಗಳನ್ನ ಮಾಡಲು ಮಾಜಿ ಶಾಸಕ ಎಸ್. ಭೀಮಾನಾಯ್ಕ್ ರ ಅವಧಿಯಲ್ಲಿ ಪಟ್ಟಣದ ಕಾತ್ಯಾಯಿನಿ ಮರಡಿ ಗ್ರಾಮದ ರಸ್ತೆಯಲ್ಲಿ ಭವ್ಯವಾಗಿ ನಿರ್ಮಾಣ ಮಾಡಲಾಗಿದೆ ನಿರ್ಮಾಣವಾಗಿ ಕೇವಲ ಕೆಲವೇ ವರ್ಷದಲ್ಲಿ ನಿರ್ವಹಣೆ ಇಲ್ಲದೆ ಅವನತಿಯತ್ತ ಸಾಗುತ್ತಿರುವುದು ಅಧಿಕಾರಿಗಳ ನ್ಯೂನತೆ ಎದ್ದು ಕಾಣುತ್ತಿದೆ

ಆದರೆ ದಿನ ಕಳೆದಂತೆ ಪ್ರವಾಸಿ ಮಂದಿರ ಪುಂಡ ಪೋಕಿರಿಗಳ ಅಡ್ಡೆಯಾಗಿ ಬದಲಾಗಿದೆ , ಎಲ್ಲೆಂದರಲ್ಲಿ ಬಿದ್ದಿರುವ ಮದ್ಯದ ಬಾಟಲಿಗಳ ನ್ನೊಮ್ಮೆ ನೋಡಿದರೆ ಇದು ಪ್ರವಾಸಿ ಮಂದಿರವೋ ಅಥವಾ ಮದ್ಯದ ಅಂಗಡಿಯೊ ಎನ್ನುವಂತಾಗಿದೆ

ಪ್ರವಾಸಿ ಮಂದಿರದ ಸುತ್ತಲೂ ಹಾಗು ಹೊರಗೂ ಉಪಯೋಗಿಸಿದ ಕಾಂಡೋಮ್ ಗಳು ಎಲ್ಲೆಂದರಲ್ಲಿ ಬಿದ್ದಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ ಇದು ಪ್ರವಾಸಿ ಮಂದಿರವೋ ಅಥವಾ ಪುಂಡ ಪೋಕಿರಿಗಳ ಅಡ್ಡವೋ ಎನ್ನುವಂತಾಗಿದೆ.

ಕೊಠಡಿಗಳಲ್ಲಿ ಹಾಕಲಾದ ಮಂಚಗಳು ಮುರಿದು ಬಿದ್ದಿವೆ ಅಲ್ಲದೆ ಸರಿಯಾಗಿವೆ ಎಂದು ತೋರಿಸಲು ಮಂಚದ ಕೆಳಗಡೆ ಕಲ್ಲುಗಳನ್ನು ಇಟ್ಟು ಜೋಡಿಸಲಾಗಿದೆ , ದಿನದ 24 ಗಂಟೆಗಳ ಕಾಲ ಸಿಸಿ ಟಿವಿ ಕಣ್ಗಾವಲಿನಲ್ಲಿ ಇರಬೇಕಾದ ಪ್ರವಾಸಿ ಮಂದಿರ ಸಿಸಿ ಟಿವಿ ಇಲ್ಲದಿರುವುದು ಕಾಣುತ್ತಿದೆ

ಯಾರೋ ಕಿಡಿಗೇಡಿಗಳು ಕದ್ದೊಯ್ದಿದ್ದಾರೆ ಎಂದು ಇಲ್ಲಿನ ಸಿಬ್ಬಂಧಿಗಳು ಹೇಳುತ್ತಾರೆ ,

ಅಲ್ಲದೆ ಕೊಠಡಿಯ ಒಳಗೆ ಹಾಕಿದ ಎರ್ ಕೂಲರ್ ನ ಬಿಡಿ ಭಾಗಗಳನ್ನು ಕೂಡ ಕಿಡಿಗೇಡಿಗಳು ಕದ್ದೊಯ್ದಿದ್ದಾರೆ ಎನ್ನಲಾಗಿದೆ

ಜನಸಾಮಾನ್ಯರು ಕೂಡ ಪ್ರವಾಸಿ ಮಂದಿರದಲ್ಲಿ ಸಭೆ ಸಮಾರಂಭಗಳಿಗೆ ಬಳಸಲು 4ದಿನಗಳ ಮುಂಚಿತವಾಗಿ ನೋಂದಣೆ ಮಾಡಲು ಅವಕಾಶವಿದೆ , ಆದರೆ ಸಾಮಾನ್ಯರಿಗೆ ಸಿಗದೇ ಕೇವಲ ಕೆಲ ಮುಖಂಡರುಗಳು ಒಂದು ಫೋನ್ ಮಾಡಿದ್ರೆ ಸಾಕು ಪ್ರವಾಸಿ ಮಂದಿರ ಬುಕ್ ಆಗಿ ಬಿಡುತ್ತದೆ




ಇನ್ನು ನಿರ್ವಹಣೆ ವಿಷಯಕ್ಕೆ ಬಂದರೆ ಪ್ರವಾಸಿ ಮಂದಿರದ ನಿರ್ವಹಣೆಗಾಗಿ ಈ ಮೊದಲು ಇದ್ದಂತಹ ಶಾಸಕ ಎಸ್ ಭೀಮಾನಾಯ್ಕ ರ ಅವಧಿಯಲ್ಲಿ ಇದ್ದಂತಹ ನಿರ್ವಹಣೆ ಈಗ ಕಾಣುತ್ತಿಲ್ಲ , ಹೊರಗುತ್ತಿಗೆ ಆಧಾರದ ಮೇಲೆ 4ಜನರನ್ನ ನೇಮಿಸಿಲಾಗಿತ್ತು, ಎಲ್ಲವು ಸರಿ ಇತ್ತು ಆದರೆ ಕಾಲ ಬದಲಾದಂತೆ ಶಾಸಕರು ಬದಲಾದ್ರು , ನಿರ್ವಹಣೆ ಮಾಡುವ ಸಿಬ್ಬಂಧಿಗಳಿಗೆ ವೇತನ ನೀಡದಿದ್ದರಿಂದ ಸಿಬ್ಬಂಧಿಗಳ ಕುಟುಂಬಗಳು ಬೀದಿಗೆ ಬರುವಂತಾಗಿ ಇಬ್ಬರು ಸಿಬ್ಬಂಧಿಗಳು ಕೆಲಸ ನಿರ್ವಹಿಸದೇ ಬಿಟ್ಟಿದ್ದಾರೆ , ಆದರೆ ಉಳಿದ ಸಿಬ್ಬಂಧಿಗಳಿಗೆ ಸುಮಾರು ವರ್ಷವೇ ಕಳೆದರು ವೇತನವಿಲ್ಲದೆ , ಕುಟುಂಬ ನಿರ್ವಹಣೆ ಕಷ್ಟಕರವಾಗಿದೆ ಎಂದು ನಿರ್ವಹಣಾ ಸಿಬ್ಬಂಧಿ ತಮ್ಮ ಅಳಲನ್ನ ತೋಡಿಕೊಂಡಿದ್ದಾರೆ

ಲೋಕೋಪಯೋಗಿ ಇಲಾಖೆಯ ಸುಪರ್ಧಿಗೆ ಬರುವ ಪ್ರವಾಸಿ ಮಂದಿರ ಅಧಿಕಾರಿಗಳ ಗಮನಕ್ಕಿದ್ದರು ಇತ್ತ ಕಡೆ ಗಮನ ಹರಿಸದಿರುವುದು ದುರ್ದೈವೇ ಸರಿ

ಅಲ್ಲದೆ ನಮ್ಮ ಮಾಧ್ಯಮ ವರದಿಗಾರ ಎನ್. ಪರಶುರಾಮ್ ಲೋಕೋಪಯೋಗಿ ಇಲಾಖೆಯ ಅಧಿಕಾರಿ ಸತೀಶ್ ನಾಯ್ಕ ರನ್ನು ಪ್ರಶ್ನೆ ಮಾಡಿದ್ದಾರೆ , ಸತೀಶ್ ನಾಯ್ಕ್ ಹಾರಿಕೆಯ ಉತ್ತರವನ್ನು ನೀಡಿದ್ದಲ್ಲದೆ , ವರದಿಗಾರರು ಪ್ರವಾಸಿ ಮಂದಿರಕ್ಕೆ ಹೋಗುವ ಹಾಗಿಲ್ಲ ಒಂದು ವೇಳೆ ಹೋಗಿದ್ದೆ ಆದಲ್ಲಿ ನಮ್ಮ ಅನುಮತಿ ಪಡೆದು ಹೋಗಬೇಕು ಎಂದು ಉಡಾಫೆ ಉತ್ತರ ನೀಡಿದ್ದಾರೆ

ಒಟ್ಟಾರೆಯಾಗಿ ಹೇಳೋದಾದ್ರೆ ಯಾವುದೇ ನಿರ್ವಹಣೆ ಇಲ್ಲದೆ ಅಧಿಕಾರಿಗಳ ಬೇಜವಾಬ್ದಾರಿತನ ಎದ್ದುಕಾಣುತ್ತಿದೆ

ಇನ್ನಾದರೂ ಸಂಬಂಧ ಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ವಹಿಸಬೇಕಾಗಿದೆ



- ಅನೈತಿಕ ಚಟುವಕೆ ತಾಣವಾಗುತ್ತಿರುವ ಪ್ರವಾಸಿ ಮಂದಿರ
- ಪ್ರವಾಸಿ ಮಂದಿರದಲ್ಲಿ ನಿರ್ವಹಣೆ ಕೊರತೆ ಎದ್ದು ಕಾಣುತ್ತಿದೆ
- ಎಲ್ಲೆಂದರಲ್ಲಿ ಕುಡಿದು ಬಿಸಾಡಿದ ಮದ್ಯದ ಬಾಟಲಿಗಳು
- ಪುಂಡ ಪೋಕಿರಿಗಳ ಅಡ್ಡೆಯಾದ ತಾಲೂಕಿನ ಪ್ರವಾಸಿತಾಣ
- ಉಪಯೋಗ ಮಾಡಿ ಎಲ್ಲೆಂದರಲ್ಲಿ ಎಸೆದ ಕಾಂಡೋಮ್ ಗಳು
- ನಿರ್ವಹಣೆ ಇಲ್ಲದೆ ಹಾಳಾದ ಕಟ್ಟಡ









ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ವಹಿಸಬೇಕಾಗಿದೆ

## ಸಿ.ಹೆಚ್. ಕಲಬೆರಿಕೆ ಹೆಂಡ ಮಾರಾಟ: ರಾಯಚೂರು ವಿಭಾಗೀಯ ದಂಡಾಧಿಕಾರಿಗಳಿಂದ ಇಬ್ಬರು ಆರೋಪಿಗಳ ಗಡಿಪಾರಿಗೆ ಆದೇಶ

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05:ರಾಯಚೂರು ಉಪ ವಿಭಾಗದ ವ್ಯಾಪ್ತಿಯಲ್ಲಿ ಸಿ.ಹೆಚ್. ಕಲಬೆರಿಕೆ ಹೆಂಡ ಮಾರಾಟದಲ್ಲಿ ಭಾಗಿಯಾಗ ರೂಡಿಗತ ಆರೋಪಿಗಳಾದ ವಾಹೀದ್ @ಚುಮಟಿ ತಂದೆ ಬರ್ಷಿದ್ (56) ಹಾಗೂ ಹುಸೇನಿ @ರವಿ ತಂದೆ ಮಾರೆಪ್ಪ (32) ಇವರನ್ನು ಕರ್ನಾಟಕ ಪೊಲೀಸ್ ಕಾಯ್ದೆ 1963 ಕಲಂ 55(ಎ) (ಬಿ) ಅಡಿಯಲ್ಲಿ ರಾಯಚೂರುಉಪ ವಿಭಾಗೀಯ ದಂಡಾಧಿಕಾರಿಗಳಾದ ಡಾ.ಹಂಪಣ್ಣ ಸಜ್ಜನ್ ಅವರು ಮೇ.04ರಂದು ಗಡಿಪಾರು ಮಾಡಿ ಆದೇಶ ಹೊರಡಿಸಿದ್ದಾರೆ.ವಾಹೀದ್ @ಚುಮಟಿ ತಂದೆ ಬರ್ಷಿದ್ (56) ಆರೋಪಿಯನ್ನು ಬೀದರ್ ಜಿಲ್ಲೆಯ ಔರಾದ(ಬಿ) ತಾಲೂಕಿನ ಸಂತಪೂರು ಪೋಲಿಸ್ ಠಾಣೆಯ ವ್ಯಾಪ್ತಿಗೆ ಹಾಗೂ ಹುಸೇನಿ @ರವಿ ತಂದೆ ಮಾರೆಪ್ಪ(32) ಬೀದರ್ ಜಿಲ್ಲೆಯ ಔರಾದ(ಬಿ) ತಾಲೂಕಿನ ಚಿಂತಕಿ ಪೋಲಿಸ್ ಠಾಣೆಯ ವ್ಯಾಪ್ತಿಗೆ ದಿನಾಂಕ: 05-05-2026ರಿಂದ 05-08-2026ರವರೆಗೆ (ಮೂರು ತಿಂಗಳು)ಬೀದರ್ ಜಿಲ್ಲೆಗೆ ಗಡಿಪಾರು ಮಾಡಿಲಾಗಿದ್ದು, ಆರೋಪಿಗಳು ಆಯಾ ಪೋಲಿಸ್ ಠಾಣೆಯ ಠಾಣಾಧಿಕಾರಿಯವರ ಮುಂದೆ ಪ್ರತಿ ವಾರಕ್ಕೊಮ್ಮೆತಪ್ಪದೇಹಾಜರಾಗಬೇಕೆಂದು ರಾಯಚೂರು ಉಪ ವಿಭಾಗೀಯ ದಂಡಾಧಿಕಾರಿಗಳಾದ ಡಾ.ಹಂಪಣ್ಣ ಸಜ್ಜನ್ ಅವರು ಆದೇಶ ಹೊರಡಿಸಿದ್ದಾರೆ.



## ಕುಡಿಯುವ ನೀರಿನ ಕೊರತೆ ಇರುವ ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಿ: ಜಿಲ್ಲಾಧಿಕಾರಿ ನಿತೀಶ್ ಕೆ.

- ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮೇ.05 : ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿನ ಕೊರತೆಯಾಗದಂತೆ ಪರಿಸ್ಥಿತಿಯನ್ನು ಅವಲೋಕಿಸಲು ಜಿಲ್ಲೆಯ ಪ್ರತಿ ತಾಲೂಕಿಗೆ ಒಬ್ಬ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದು, ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿರುವ ಗ್ರಾಮಗಳ ಹಾಗೂ ಮುಂಬರುವ ದಿನಗಳಲ್ಲಿ ಸಮಸ್ಯೆ ಎದುರಿಸಬಹುದಾದ ಗ್ರಾಮಗಳ ವಿವರಗಳನ್ನು ಸಂಬಂಧಪಟ್ಟ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು, ಸದರಿ ತಮ್ಮ ತಮ್ಮ ತಾಲೂಕುಗಳ ಎಲ್ಲಾ ಸಮಸ್ಯಾತ್ಮಕ ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ.ಅವರು ಸೂಚಿಸಿದ್ದಾರೆ.

ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಹಾಗೂ ನೋಡಲ್ ಅಧಿಕಾರಿಗಳು ಭೇಟಿ ನೀಡಿದ ಸಮಯದಲ್ಲಿ ಜಿ.ಪಿ.ಎಸ್ ಭಾವಚಿತ್ರದೊಂದಿಗೆ ತೆಗೆದುಕೊಂಡ ಫೋಟೋಗಳೊಂದಿಗೆ ತಾವು ತೆ-ಗೆದುಕೊಂಡ ಕ್ರಮಗಳ ಕುರಿತು ವರದಿಯನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವಿನಗರದ ನಿವಾಸಿಯಾದ ಲಕ್ಷ್ಮೀ ಕಾಣೆ ಪತ್ತೆಗೆ ನೇತಾಜಿ ನಗರ ಪೊಲೀಸರ ಮನವಿ

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05 : ರಾಯಚೂರಿನ ನೇತಾಜಿ ಪೊಲೀಸ್ ಠಾಣೆಯ ವ್ಯಾಪ್ತಿಯ ದೇವಿನಗರದ ನಿವಾಸಿಯಾದ ಲಕ್ಷ್ಮೀ ಗಂಡ ತಿಮ್ಮಪ್ಪ (43) ಎಂಬ ಮಹಿಳೆಯು 2026ರ ಮಾರ್ಚ್ 27ರ ಬೆಳಿಗ್ಗೆ 11.30 ಗಂಟೆಯ ಸುಮಾರಿಗೆ ಕೆಲಸ ಮಾಡಿದ ಸಂಬಳವನ್ನು ತೆಗೆದುಕೊಂಡು ಬರುತ್ತೇನೆ ಅಂತಾ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 36/2026 ಕಲಂ ಅಡಿಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಕೊಳ್ಳಲಾಗಿದೆ. ಕಾಣೆಯಾದ ಮಹಿಳೆಗೆ ಪೂರ್ಣಿಮಾ, ತಾನು, ಶ್ರೀಧರ್, ಚರಣ ಕುಮಾರ್, ವಿನಯ ಕುಮಾರ್ ಎಂಬ ಮಕ್ಕಳಿದ್ದು, ಕಾಣೆಯಾದ ಮಹಿಳೆಯ ಗಂಡ ತಿಮ್ಮಪ್ಪ ಇವರು ಒಂದು ವರ್ಷದ ಹಿಂದೆ ಲಿವರ್ ವೈಫಲ್ಯವಾಗಿ ಮೃತಪಟ್ಟಿದ್ದಾರೆ.

ಕಾಣೆಯಾದ ಮಹಿಳೆಯ ಚಹರೆ ಪಟ್ಟಿ: ವಯಸ್ಸು 43 ವರ್ಷ, ಜಾತಿ ಎಸ್.ಸಿ (ಮಾದಿಗ), ಉದ್ಯೋಗ್ಯ ಸಿಲ್ವರ್ ಸ್ಪೂನ್ ಹೋಟೆಲ್‌ನಲ್ಲಿ ಕೆಲಸ ಮಾಡಲಾಗುತ್ತಿದ್ದು, ಕೋಲು ಮುಖ, ಕಪ್ಪು ಮೈಬಣ್ಣ, ಕಪ್ಪು ಕೂದಲು, ಬಲಗೈ ಮುಂಗೈ ಮೇಲೆ ಟಿಎಲ್ ಅಂತಾ ಅಚ್ಚೆ ಇರುತ್ತದೆ. ಬಂಗಾರದ ಬಣ್ಣದ ಸೀರೆ, ಕೆಂಪು ಬಣ್ಣದ ಕುಬುಸ ಉಡುಪು ಧರಿಸಲಾಗಿದೆ. ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ.

ಕಾಣೆಯಾದ ಮಹಿಳೆಯ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532-240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ: 08532-235635, 08532-235100, 9480803800 ಅಥವಾ ಪಿ.ಎಸ್.ಐ ಮೊಬೈಲ್: 9480803846, ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803831ಗೆ ಸಂಪರ್ಕ ಮಾಡಬಹುದಾಗಿದೆ ಎಂದು ನೇತಾಜಿ ನಗರ ಪೊಲೀಸ್ ಠಾಣೆಯು ಪ್ರಕಟಣೆಯಲ್ಲಿ ತಿಳಿಸಿದೆ.

## ಮೇ.12ರಂದು ಗಿಲ್ಲೇಸೂಗೂರು ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಗಿಲ್ಲೇಸೂಗೂರು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.12ರ ಬೆಳಿಗ್ಗೆ 8ರಿಂದ ಸಂಜೆ 05ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುದಗಲ್: ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05:ಜಿಲ್ಲೆಯಲಿಂಗಸುಗೂರು ತಾಲೂಕಿನ ಮುದಗಲ್ ಸರ್ಕಾರಿ ಐಟಿಟಿ ಕಾಲೇಜಿನಲ್ಲಿ 2026ನೇ ಸಾಲಿನಲ್ಲಿ ಪ್ರಥಮ ವರ್ಷದ ವಿವಿಧ ಕೋರ್ಸ್ಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಕಾಲೇಜಿನಲ್ಲಿ ವಿವಿಧ ವೃತ್ತಿಗಳಾದ ವಿದ್ಯುತ್ ಕರ್ಮಿ (Electrician)ಮತ್ತು ಜೋಡಣೆಗಾರ (Fitter) 2 ವರ್ಷಗಳ ಕೋರ್ಸುಗಳಿದ್ದು, ಸಂಸ್ಥೆಯು ಅತ್ಯಾಧುನಿಕ ಯಂತ್ರೋಪರಣಗಳು,ಸುಸಜ್ಜಿತವಾದ ಕಂಪ್ಯೂಟರ್ ಲ್ಯಾಬ್ ಹೊಂದಿದ್ದು, ಆಸಕ್ತರು ವೆಬ್‌ಸೈಟ್ ವಿಳಾಸ: www.cite.karnataka.gov.inನಲ್ಲಿ ಆನ್‌ಲೈನ್ ಅಥವಾ ನೇರವಾಗಿ ಸಂಸ್ಥೆಗೆ ಭೇಟಿ ನೀಡಿ, 2026ರ ಮೇ.08ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ತರಬೇತಿ ಅಧಿಕಾರಿಗಳಾದ ಮಹಾದೇವ ಕೆ. ಸರ್ಜಾಪುರ ಮೊಬೈಲ್ ಸಂ-ಖ್ಯೆ: 7892955100 ಅಥವಾ ಪ್ರಥಮ ದರ್ಜೆ ಸಹಾಯಕರ ಮೊಬೈಲ್ ಸಂಖ್ಯೆ:9742063355ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಸರ್ಕಾರಿ ಐಟಿಟಿ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**SALE DEED LOST**

**I SAMMAKKA W/o LAXMAN** would like to inform the general public that

**I have misplaced my original Sale Deed Document No 410_2004-05 registered at (SRO)**

**if any one finds it kindly contact me at 9686033261**

within 15 days from the date of issue of this ad

## ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಿ: ಡಾ.ಸುರೇಂದ್ರ ಬಾಬು

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05 : ಜಿಲ್ಲೆಯಾದ್ಯಂತ ಪ್ರಸ್ತುತ ದಿನಗಳಲ್ಲಿ ಬಿಸಿಲಿನ ಪ್ರಕರತೆ ಮತ್ತು ತೀವ್ರತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವ ಮೂಲಕ ಆರೋಗ್ಯದ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಅವರು ಹೇಳಿದರು.

ಮೇ.04ರ ಸೋಮವಾರ ದಂದು ಜಿಲ್ಲೆಯ ದೇವದುರ್ಗ ಪಟ್ಟಣದ ತಾಲೂಕಾ ಸಾರ್ವಜನಿಕ ಆಸ್ಪತ್ರೆಯಲ್ಲಿ ಬೇಸಿಗೆ ಶಾಖಾಘಾತ ನಿರ್ವಹಣೆಯ ವಾರ್ಡ್, ಹಾಗೂ ಇತರೆ ವಾರ್ಡ್ಗೆ ಭೇಟಿ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರತಿದಿನ ಮಧ್ಯಾಹ್ನದಲ್ಲಿ ಬಿಸಿಲು 40 ಡಿಗ್ರಿ ಮೇಲ್ಪಟ್ಟು ಹಾಗೂ ಪ್ರಖರವಾಗಿರುವ ಹಿನ್ನೆಲೆಯಲ್ಲಿ ಮನೆಯಿಂದ ಹೊರಗೆ ಹೋಗುವಾಗ ಆದಷ್ಟು ಹತ್ತಿ ಬಟ್ಟೆ ಉಡುಗೆ ಜೊತೆಯಲ್ಲಿ ಕುಡಿಯುವ ನೀರು, ಛತ್ರಿ ಬಳಸಲು ಆದ್ಯತೆ ನೀಡಿ, ಆದಷ್ಟು ದ್ರವ ಆಹಾರ ಸೇವನೆ ಮತ್ತು ಮನೆಯಲ್ಲಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ದೀರ್ಘಕಾಲಿನ ಚಿಕಿತ್ಸೆಗೆ ಒಳಪಟ್ಟವರು, ವಯೊವೃದ್ದರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆದ್ಯತೆ ನೀಡಬೇಕು.



ಪ್ರತಿಯೊಬ್ಬರೂ ಮನೆಯಲ್ಲಿ ಓಆರ್‌ಎಸ್ ಜೀವಜಲ ಬಳಕೆಗೆ ಆದ್ಯತೆ ನೀಡುವ ಮೂಲಕ ನಿರ್ಜಲೀಕರಣದಿಂದ ದೇಹದ ನೀರಿನ ಅಂಶದ ಜೊತೆಗೆ ಲವಣಾಂಶ ಕಡಿಮೆಯಾಗದಂತೆ ಓಆರ್‌ಎಸ್ ಜೀವ ಜಲ ಪ್ಯಾಕೆಟ್ ಸದಾ ಮನೆಯಲ್ಲಿರಲಿ ಅಲ್ಲದೆ ಒಂದು ಲೀಟರ್ ನೀರಿಗೆ ಪ್ಯಾಕೆಟ್‌ನಲ್ಲಿಯ ಸಂಪೂರ್ಣ ಪುಡಿ ಹಾಕಿ ದ್ರಾವಣ ಸಿದ್ದಪಡಿಸಿ 24 ಗಂಟೆಯೊಳಗೆ ಬಳಸಬೇಕು. ಇದಲ್ಲದೆ ಲಿಂಬೂ ಪಾನಕ, ಎಳೆನೀರು, ಮಜ್ಜಿಗೆ, ಗಂಜಿ, ಆಹಾರದಲ್ಲಿ ಬೇಳೆ ತಿಳಿ ಬಳಸಬೇಕು.

ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿಬೇಕು. ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕಿದೆ. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಇರಬೇಕು. ಅಧಿಕ ಬಿಸಿಲಿರುವ ಸಮಯದಲ್ಲಿ ಮನೆಯ ಹೊರಗೆ ಹೊಗದಿರಲು ಯೋಚಿಸಿ, ದೈನಂದಿನವಾಗಿ ತೆಗೆದುಕೊಳ್ಳುವ ಮಾತ್ರೆಗಳನ್ನು ಜೊತೆಯಲ್ಲಿರಿಸಿಕೊಳ್ಳಿ, ದ್ರವ ಆಹಾರ ಹೆಚ್ಚು ಸೇವಿಸಬೇಕು.

ಆಟವಾಡುವ ಮಕ್ಕಳು ಬಿಸಿಲಿನಲ್ಲಿ ನಿಲ್ಲಿಸಿರುವ ವಾಹನ ಮುಟ್ಟದಂತೆ ಜಾಗೃತಿ ವಹಿಸಬೇಕು. ಮಕ್ಕಳು ಅಸುರಕ್ಷಿತ ಆಹಾರ, ಪಾನೀಯ ಸೇವಿಸದಂತೆ ನಿಗಾವಹಿಸಿ.

ನವಜಾತ ಶಿಶುವಿನ ಬಗ್ಗೆ ಕಾಳಜಿ ಇರಲಿ: ಹೆರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುವುದು. ಯಾವುದೇ ಕಾರಣಕ್ಕೂ 6 ತಿಂಗಳೊಳಗಿನ ಮಗುವಿಗೆ ತಾಯಿ ಹಾಲು ಮಾತ್ರ ಕುಡಿಸಬೇಕು. ಅಲ್ಲದೆ ರೋಗ ನಿರೋಧಕ ಶಕ್ತಿ ವೃದ್ದಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಲು ಮರೆಯಬಾರದು.

ಜಿಲ್ಲಾ ಎನ್‌ಪೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜಿಲ್ಲಾ ವಿಪತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿಯನ್ವಯ ಆರೋಗ್ಯ ಇಲಾಖೆ ಸಿಬ್ಬಂದಿ ಎಲ್ಲ ಆಸ್ಪತ್ರೆಯ ಬರುವ ಜನತೆಗೆ ಗ್ರಾಮಗಳಲ್ಲಿ ಹತ್ತಿ ಉಡುಪು ಬಳಕೆ, ಛತ್ರಿ, ಜೊತೆಯಲ್ಲಿ ನೀರು ಇರುವಂತೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಎಂದರು.

ಜಿಲ್ಲೆಯ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಓಆರ್‌ಎಸ್ ಜೀವ ಜಲ ಪ್ಯಾಕೆಟ್ ಸೇರಿದಂತೆ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿವೆ. ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆಯಬಹುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ ಕೆ., ತಾಲೂಕಾ ಆರೋಗ್ಯಾಧಿಕಾರಿ ಡಾ.ಬನದೇಶ್ವರ, ಸಾರ್ವಜನಿಕ ಆಸ್ಪತ್ರೆಯ ವೈದ್ಯರಾದ ಡಾ.ಗಂಗಾಧರ್, ಡಾ.ಶಿವಕುಮಾರ್, ಡಾ.ನಾಗರಾಜ ಮಲ್ಕಾಪೂರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಪ್ಪ ಸೇರಿದಂತೆ ಸಿಬ್ಬಂದಿಯವರು ಹಾಗೂ ಸಾರ್ವಜನಿಕರು ಇದ್ದರು.

## ಗಣತಿದಾರರು ಬಿಸಿಗಾಳಿಯ ಕುರಿತು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ರಾಜ್ಯ ಜನಗಣತಿ ನೋಡಲ್ ಅಧಿಕಾರಿ ಮನೋಜ್ ಕುಮಾರ್ ಮೀನಾ ಸಲಹೆ

- ಮಲ್ಲಮ್ಮ ನುಡಿ ವಾರ್ತೆರಾಯಚೂರು

ಮೇ.05: ಭಾರತೀಯ ಹವಾಮಾನ ಇಲಾಖೆ ಬಿಡುಗಡೆ ಮಾಡಿದ 2026ರ ಬೇಸಿಗೆ ಕಾಲದ (ಏಪ್ರಿಲ್-ಜೂನ್ 2026) ಪರಿಷ್ಕೃತ ಋತು ಮುನ್ನೋಟದ ಪ್ರಕಾರ 2026ರ ಏಪ್ರಿಲ್-ಮೇ ತಿಂಗಳಲ್ಲಿ ಕರ್ನಾಟಕದ ಉತ್ತರ ಒಳನಾಡಿನ ಬಹುಭಾಗಗಳಲ್ಲಿ ಮತ್ತು ರಾಜ್ಯದ ಇತರ ಒಳನಾಡು ಪ್ರದೇಶಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚು ತಾಪಮಾನ ಮುಂದುವರಿಯುವ ಸಾಧ್ಯತೆಯಿದ್ದು, ಜನಗಣತಿ ಕಾರ್ಯಗಳಲ್ಲಿ ತೊಡಗಿರುವ ಗಣತಿದಾರರು ಬಿಸಿಗಾಳಿಯ ಕುರಿತು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕೆಂದು ಪರಿಹಾರ ಆಯುಕ್ತರು ಮತ್ತು ಕಂದಾಯ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ರಾಜ್ಯ ಜನಗಣತಿ ನೋಡಲ್ ಅಧಿಕಾರಿಗಳಾದ ಮನೋಜ್ ಕುಮಾರ್ ಮೀನಾ ಅವರು ಸಲಹೆ ನೀಡಿದ್ದಾರೆ.

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು 23ನೇ ಏಪ್ರಿಲ್ 2026ರ ಪತ್ರದ ಮೂಲಕ ಎಲ್ಲಾ ರಾಜ್ಯಗಳಿಗೆ ಬಿಸಿಗಾಳಿಯ ದುಷ್ಪರಿಣಾಮಗಳನ್ನು ಕಡಿಮೆಗೊಳಿಸಲು ಸೂಕ್ತ ಸಿದ್ಧತೆ ಮತ್ತು ಜಾಗೃತಿ ಕ್ರಮಗಳನ್ನು ಕೈಗೊಳ್ಳುವಂತೆ ಸಲಹೆ ನೀಡಿದೆ. ಇದರೊಂದಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು 28ನೇ ಏಪ್ರಿಲ್ 2026ರ ತನ್ನ ಪತ್ರದ ಮೂಲಕ ಬಿಸಿಗಾಳಿ ಸಿದ್ಧತೆ ಮತ್ತು ಪ್ರತಿಕ್ರಿಯೆಯನ್ನು ಬಲಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಿದೆ.ಪ್ರಸ್ತುತ ಜನಗಣತಿಯ ಮೊದಲ ಹಂತವಾಗಿ ಮನೆಪಟ್ಟಿ ಮತ್ತು ಮನೆ ಗಣತಿಯನ್ನು ರಾಜ್ಯದಾದ್ಯಂತ ಕ್ಷೇತ್ರ ಗಣಕರ ಮೂಲಕ ನಡೆಯುತ್ತಿದೆ. ಈ ಕಾರ್ಯಗಳು ಬೇಸಿಗೆಯ ತೀವ್ರ ಬಿಸಿಗಾಳಿ ಅವಧಿಯಲ್ಲಿ ನಡೆಯುತಿದ್ದು, ದೀರ್ಘಕಾಲ ಹೊರಾಂಗಣದಲ್ಲಿ ಕೆಲಸ ಮಾಡುವುದರಿಂದ ಮತ್ತು ಶಾರೀರಿಕ ಶ್ರಮದಿಂದ ಉಷ್ಣ ಸಂಬಂಧಿತ ಅನಾರೋಗ್ಯದ ಅಪಾಯ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಗಣತಿ-ದಾರರ ಆರೋಗ್ಯ ಕಾಪಾಡಿಕೊಳ್ಳುತ್ತಾ ಜನಗಣತಿ ಕಾರ್ಯವನ್ನು ಸುಗಮವಾಗಿ ನಡೆಸಲು ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸುವುದು ಅಗತ್ಯವಾಗಿದೆ. ಆದ್ದ-ರಿಂದ ಉಷ್ಣ ಸಂಬಂಧಿತ ಅಪಾಯಗಳನ್ನು ತಗ್ಗಿಸಲು ಮತ್ತು ಗಣತಿ ಕಾರ್ಯವನ್ನು ಸುಗಮವಾಗಿ ನಡೆಸಲು ಕೆಳಗಿನ ಮುನ್ನೆಚ್ಚರಿಕಾ ಕ್ರಮಗಳನ್ನು ಎಲ್ಲಾ ಗಣತಿದಾರರು ಕಟ್ಟುನಿಟ್ಟಾಗಿ ಪಾಲಿಸಬೇಕು.ಅತಿಯಾದ ಶ್ರಮ ತಪ್ಪಿಸಿ: ದಿನದ ತಂಪಾದ ಸಮಯಗಳಲ್ಲಿ (ಬೆಳಿಗ್ಗೆ ಬೇಗ ಮತ್ತು ಸಂಜೆ) ಕ್ಷೇತ್ರ ಭೇಟಿಗಳನ್ನು ಯೋಜಿಸಬೇಕು. ವಿಶೇಷವಾಗಿ ಮಧ್ಯಾಹ್ನ 12ರಿಂದ 3:30ರವರೆಗೆ ನೇರ ಸೂರ್ಯಕಿರಣಕ್ಕೆ ದೀರ್ಘಕಾಲ ಒಳಗಾಗುವುದನ್ನು ತಪ್ಪಿಸಬೇಕು. ನೆರಳು ಅಥವಾ ತಂಪಾದ ಸ್ಥಳಗಳಲ್ಲಿ ಕಾಲಕಾಲಕ್ಕೆ ವಿಶ್ರಾಂತಿ ತೆಗೆದುಕೊಳ್ಳಬೇಕು. ದೇಹದ ನೀರಿನ ಪ್ರಮಾಣ ಕಾಪಾಡಿಕೊಳ್ಳಿ: ಯಾವಾಗಲೂ ಸಮರ್ಪಕವಾಗಿ ನೀರಿನ ಸೇವನೆ ಮಾಡಬೇಕು. ದಾಹವಾಗದಿದ್ದರೂ ಪ್ರತಿ 20-30 ನಿಮಿಷಕ್ಕೊಮ್ಮೆ ನೀರು ಕುಡಿಯಬೇಕು. ಕ್ಷೇತ್ರಭೇಟಿಗಳ ಸಮಯದಲ್ಲಿ ಕುಡಿಯುವ ನೀರನ್ನು ಕೊಂಡೊಯ್ಯಬೇಕು. ಸಾಧ್ಯವಾದಲ್ಲಿ ಮಜ್ಜಿಗೆ, ನಿಂಬೆ ಷರಬತ್ತು. ಎಳ ನೀರು, ಮೌಖಿಕ ಪುನರ್ಜಲಿಕರಣ ದ್ರಾವಣ ಅಥವಾ ಇತರೆ ಎಲೆಕ್ಟ್ರೋಲೈಟ್ ಪಾನೀಯಗಳನ್ನು ಸೇವಿಸಬೇಕು. ದೇಹದ ನೀರಿನ ಕೊರತೆಯನ್ನು ಹೆಚ್ಚಿಸುವ ಕ್ಯಾಫಿನ್ ಮತ್ತು ಸಕ್ಕರೆ ಪಾನೀಯಗಳನ್ನು ತಪ್ಪಿಸಬೇಕು.

ರಕ್ಷಣಾತ್ಮಕ ಕ್ರಮಗಳು: ಸಡಿಲ ಮತ್ತು ಲಘು ಬಣ್ಣದ ಉಡುಪುಗಳನ್ನು ಧರಿಸಬೇಕು. ಟೋಪಿ, ಛತ್ರಿ ಮುಂತಾದ ರಕ್ಷಣಾತ್ಮಕ ಉಪಕರಣಗಳನ್ನು ಬಳಸಿಕೊಂಡು ನೇರ ಸೂರ್ಯಕಿರಣದಿಂದ ರಕ್ಷಿಸಿಕೊಳ್ಳಬೇಕು.

## ಹಿರೇಮಠದಲ್ಲಿ ಶಿವಾನುಭವ ಗೋಷ್ಠಿ



**ಕೆಂಭಾವಿ:** ಜಗದ ಜನರು ಜಗದ ಕರ್ತೃ ಜಗದೀಶನ ಜಪಿಸುವ ಮಹಾತ್ವಾಕಾಂಕ್ಷಿ ಇಟ್ಟುಕೊಂಡ, ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿ ಮುನ್ನಡೆಸುತ್ತಿರುವ ಷ ಬ್ರ ಶ್ರೀ ಚನ್ನಬಸವ ಶಿವಾಚಾರ್ಯರು ಕಾರ್ಯ ಸ್ತುತ್ಯಾರ್ಹ ಎಂದು ಯಾದಗಿರಿ ಮಲ್ಲಿಕಾರ್ಜುನ ಶಾಸ್ತ್ರಿಗಳು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀ ಗುರು ಕಾಂತೇಶ್ವರ ಜನ ಕಲ್ಯಾಣ ಸೇವಾ ಪ್ರತಿಷ್ಠಾನದ ಆಶ್ರಯದಲ್ಲಿ ಶುಕ್ರವಾರ ಸಂಜೆ ಜರುಗಿದ ಮಾಸಿಕ ಹುಣ್ಣಿಮೆಯ ಶಿವಾನುಭವ, ಸಂಗೀತ ಗೋಷ್ಠಿ ಉದ್ಘಾಟಿಸಿ ಉಪನ್ಯಾಸ ನೀಡಿದ ಅವರು ಬಡವರ ಸೇವೆಯಲ್ಲಿ, ರೋಗಿಯ ಹಾರೈಕೆಯಲ್ಲಿ, ಮಾತಾಪಿತರ ಸನ್ನಿಧಿಯಲ್ಲಿ, ಹೀಗೆ ಜಗದಗಲ, ಮುಗಿಲಗಲ, ಪ್ರತಿಯೊಂದು ವಸ್ತುವಿನಲ್ಲಿ ದೇವರಿದ್ದಾನೆ, ಭಗವಂತನ ಸಾಕ್ಷಾತ್ಕಾರಕ್ಕೆ ಬಡತನ ಅಡ್ಡಿಯಾಗದು ಎಂದವರು, ಹಿರೇಮಠ ಸಂಸ್ಥಾನದಲ್ಲಿ ಜರುಗುವ ಮಾಸಿಕ ಹುಣ್ಣಿಮೆಯ ಶಿವಾನುಭವ ಮತ್ತು ಸಂಗೀತ ಗೋಷ್ಠಿ ಸಂಸಾರದಿಂದ ಸದ್ಗತಿ ಹೊಂದಲು ಪ್ರೇರಣೆ ನೀಡುತ್ತದೆ. ಸದ್ಭಕ್ತರು ಹುಣ್ಣಿಮೆಯ ಸತ್ಸಂಗದ ಸದುಪಯೋಗ ಪಡಿಸಿಕೊಂಡು ಸನ್ಮಾರ್ಗದಲ್ಲಿ ನಡೆದು ಸದ್ಗುರುವಿನ ಕೃಪೆಗೆ ಪಾತ್ರರಾಗಿ ಎಂದರು. ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಷ ಬ್ರ ಶ್ರೀ ಚನ್ನಬಸವ ಶಿವಾಚಾರ್ಯರು ದಂಡ ವಿಧಿಸುವ ಅಧಿಕಾರ ಇದ್ದರೂ ದಂಡ ವಿಧಿಸದ ದಯಾಳು ಶ್ರೇಷ್ಠ ಗುರು ಎಂದವರು, ದೇವ ಸ್ವರೂಪರು, ಲಿಂಗಾಂಗ ಸಾಮರಸ್ಯದ ಸಾಧು ಸಂತರು ದಾಸ ಶ್ರೇಷ್ಠರು ಮಹಾತ್ಮರು, ಶಿವಶರಣರು ತೋರಿದ ಮಾರ್ಗದಲ್ಲಿ ಸಾಗಿದರೆ ಬದುಕು ಸಾರ್ಥಕ ಎಂದು ಆಶಿಸಿದರು.

ಸೋಮನಾಥ ಯಾಳಗಿ, ಯಮನೇಶ ಯಾಳಗಿ ಹಾಗೂ ಶಶಿಧರ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು, ಡಾ ಯಂಕನಗೌಡ ಎಸ್ ಪಾಟೀಲ್ ನಿರೂಪಿಸಿ ವಂದಿಸಿದರು, ನಿಂಗನಗೌಡ ದೇಸಾಯಿ, ನಿಜಗುಣ ವಿಶ್ವಕರ್ಮ ಸೇರಿದಂತೆ ಮಹಿಳೆಯರು, ಮಕ್ಕಳು, ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಉಪಸ್ಥಿತರಿದ್ದರು.

## ಬಿಜೆಪಿ ಕಚೇರಿ ಆವರಣದಲ್ಲಿ ಸಂಭ್ರಮಾಚರಣೆ



**ಚಿಕ್ಕಬಳ್ಳಾಪುರ:** ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಸಾಧಿಸಿದ ಅಭೂತಪೂರ್ವ ಗೆಲುವಿನ ಹಿನ್ನೆಲೆಯಲ್ಲಿ ಮಂಗಳವಾರ ಚಿಕ್ಕಬಳ್ಳಾಪುರದ ಜಿಲ್ಲಾ ಬಿಜೆಪಿ ಕಚೇರಿ ಆವರಣದಲ್ಲಿ ಸಂಭ್ರಮಾಚರಣೆ ನಡೆಯಿತು ಜಿಲ್ಲಾ ಅಧ್ಯಕ್ಷ ಸೀಕಲ್ ರಾಮಚಂದ್ರಗೌಡ ಅವರ ನೇತೃತ್ವದಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ,ಸಿಹಿ ಹಂಚಿ ಸಂತೋಷ ವ್ಯಕ್ತಪಡಿಸಿದರು.

ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸೀಕಲ್ ರಾಮಚಂದ್ರಗೌಡ ಮೂರು ರಾಜ್ಯಗಳಲ್ಲಿ ಬಿಜೆಪಿ ಸಾಧಿಸಿದ ಭರ್ಜರಿ ಗೆಲುವು ದೇಶದ ರಾಜಕೀಯದಲ್ಲಿ ಹೊಸ ದಿಕ್ಕನ್ನು ಸೂಚಿಸುತ್ತದೆ ವಿಶೇಷವಾಗಿ ಪಶ್ಚಿಮ ಬಂಗಾಳದಲ್ಲಿ ನಿರೀಕ್ಷೆಗೂ ಮೀರಿ ಪಕ್ಷ ಗೆಲುವು ಸಾಧಿಸಿರುವುದು ಗಮನಾರ್ಹವಾಗಿದೆ.ಬಂಗಾಳದ ಜನರು ಈ ಬಾರಿ ಧೈರ್ಯದಿಂದ ಮುಂದೆ ಬಂದು ಸ್ಪಷ್ಟ ನಿರ್ಧಾರ ಕೈಗೊಂಡಿದ್ದಾರೆ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲೆ ವಿಶ್ವಾಸವಿಟ್ಟು ಐತಿಹಾಸಿಕ ಜನಾದೇಶ ನೀಡಿದ್ದಾರೆ ಎಂದು ಹೇಳಿದರು.

ಇನ್ನೂ ಪಶ್ಚಿಮ ಬಂಗಾಳದಲ್ಲಿ ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು ಚುನಾವಣಾ ಆಯೋಗ ಉತ್ತಮ ಕೆಲಸ ಮಾಡಿದೆ. ಮತದಾರರ ಪಟ್ಟಿಯನ್ನು ಶುದ್ಧೀಕರಿಸಿದ ಹಿನ್ನೆಲೆಯಲ್ಲಿ ಮತದಾನದ ಹಕ್ಕುಹೊಂದಿದವರೇ ಮತ ಚಲಾಯಿಸಿದ್ದಾರೆ ಈ ಐತಿಹಾಸಿಕ ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸುತ್ತಾ,ದೇಶವನ್ನು ಅಭಿವೃದ್ಧಿಯ ಹಾದಿಯಲ್ಲಿ ಮತ್ತಷ್ಟು ಮುನ್ನಡೆಸುವಲ್ಲಿ ಈ ಜನಾದೇಶ ಮಹತ್ವದ ಹೆಜ್ಜೆಯಾಗಲಿದೆ ಈ ಅಭೂತಪೂರ್ವ ಜಯಕ್ಕೆ ದೇಶದ ಗೃಹ ಸಚಿವ ಅಮಿತ್ ಶಾ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ ಅವರು ಅವರ ಕಾರ್ಯತಂತ್ರ ಹಾಗೂ ಶ್ರಮವೇ ಈ ಸಾಧನೆಯ ಪ್ರಮುಖ ಕಾರಣವಾಗಿದೆ.ಅಮಿತ್ ಶಾ ಅವರ ನಾಯಕತ್ವದಲ್ಲಿ ದೇಶದ ಗಡಿಭದ್ರತೆ ಬಲಪಡಿಸಲಾಗಿದ್ದು,ಜಮ್ಮು-ಕಾಶ್ಮೀರದಲ್ಲಿ ಂಡಿಣುಛಿಟಜ 370 ರದ್ದುಪಡಿಸಿರುವುದು ದೇಶದ ಏಕತೆ ಮತ್ತು ಅಖಂಡತೆಗೆ ಪ್ರಮುಖ ಹೆಜ್ಜೆಯಾಗಿದೆ.

ಇದೆ ವೇಳೆ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರಿಗೂ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು.

ಇನ್ನೂ ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಸೋಲಿನ ಕುರಿತು ಪ್ರತಿಕ್ರಿಯಿಸಿದ ಅವರು,ಸಾಮಾನ್ಯವಾಗಿ ಅಧಿಕಾರದಲ್ಲಿರುವ ಪಕ್ಷದತ್ತ ಜನರ ಒಲವು ಹೆಚ್ಚು ಇರುತ್ತದೆ ಜೊತೆಗೆ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಶಾಮನೂರು ಶಿವಶಂಕರಪ್ಪ ಅವರ ವ್ಯಕ್ತಿತ್ವದ ಪ್ರಭಾವ ಹಾಗೂ ಅನುಕಂಪದ ಅಲೆಯ ಪರಿಣಾಮವಾಗಿ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ ಮುಂದಿನ 2028ರ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತ.ಶೀಘ್ರದಲ್ಲೇ ಕಾಂಗ್ರೆಸ್ ಮುಕ್ತ ಭಾರತ ಸಾಧ್ಯವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಅವರು ಮಾತನಾಡಿ,ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷಗಳ ಸುದೀರ್ಘ ಜನಸೇವೆ ರಾಜಕೀಯ ಜೀವನದ ಅಂಗವಾಗಿ ಇದೇ ತಿಂಗಳ 9ರಂದು ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ ಸಹಸ್ರಾರು ಸಂಖ್ಯೆಯಲ್ಲಿ ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಈ ಕಾರ್ಯಕ್ರಮಕ್ಕೆ ತೆರಳಲು ಪ್ರತಿಯೊಂದು ವಿಧಾನಸಭಾ ಕ್ಷೇತ್ರದಿಂದ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಜಿಲ್ಲೆಯಿಂದ ಕನಿಷ್ಠ 100 ಬಸ್ಸುಗಳ ವ್ಯವಸ್ಥೆ ಮಾಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಕಾರ್ಯದರ್ಶಿ ಮುನಿರಾಜು, ಚಿಂತಾಮಣಿ ವೇಣುಗೋಪಾಲ್,ಪ್ರಧಾನ ಕಾರ್ಯದರ್ಶಿ ಹೆಚ್.ಎಸ್. ಮುರಳಿದಾರ್,ಮಧು ಸೂರ್ಯನಾರಾಯಣ ರೆಡ್ಡಿ,ಜಿಲ್ಲಾ ಕಾರ್ಯದರ್ಶಿ ಅಶೋಕ್,ರಾಷ್ಟ್ರೀಯ ಪರಿಷತ್ ಸದಸ್ಯ ಲಕ್ಷ್ಮೀನಾರಾಯಣ ಗುಪ್ತ,ರಾಜ್ಯ ಪರಿಷತ್ ಸದಸ್ಯ ಬೈರೇಗೌಡ,ಜಿಲ್ಲಾ ಮಾಧ್ಯಮ ಸಂಚಾಲಕ ವಿ.ಮದು ಚಂದ್ರ ಮಂಡಲದ ಅಧ್ಯಕ್ಷ ಪ್ರಭಾಕರ್ ರೆಡ್ಡಿ,ತೇಜೇಂದ್ರ ಪಾಪು,ಸೀಕಲ್ ಆನಂದ್ ಗೌಡ,ಕೋಡಿರ್ಲಪ್ಪ,ವೇಣು ಮಾಧವ್,ನರಸಿಂಹರಾಜು, ಗೋವಿಂದರಾಜು,ದೇವರಾಜ್,ಚಿಕ್ಕಬಳ್ಳಾಪುರ ನಗರ ಉಪಾಧ್ಯಕ್ಷ ಶಶಿಧರ್,ಮಹಿಳಾ ಮೋರ್ಚ ಉಪಾಧ್ಯಕ್ಷರಾದ ಸುಮಿತ್ರ,ನರಸಪ್ಪ, ಕೊಂಡಪ್ಪ,ಅಜಯ್ ಪಾಲ್ ಸಿಂಗ್ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಮಂಡಲದ ಪದಾಧಿಕಾರಿಗಳು ಭಾಗವಹಿಸಿದ್ದರು.

# ಅತ್ಯಾಧುನಿಕ ಬಸ್ ನಿಲ್ದಾಣ ನಿರ್ಮಾಣಕ್ಕೆ ಭೂಮಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ನಗರದ ಕನಕಗಿರಿ ರಸ್ತೆಯಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಜಿಲ್ಲಾ ಮಟ್ಟದ ಕೆ.ಕೆ. ಆರ್.ಟಿ.ಸಿ (KKRTC) ಸ್ಯಾಟಲೈಟ್ ಬಸ್ ನಿಲ್ದಾಣದ ಕಾಮಗಾರಿಗೆ ಶಾಸಕರಾದ ಶ್ರೀ ಜಿ. ಜನಾರ್ದನ ರೆಡ್ಡಿ ಅವರು ಇಂದು ಅಧಿಕೃತವಾಗಿ ಶಂಕುಸ್ಥಾಪನೆ ನೆರವೇರಿಸಿದರು.

ಈ ಬೃಹತ್ ಯೋಜನೆಗೆ ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಶಾಸಕರಿಗೆ ಹಂಚಿಕೆಯಾಗುವ ಕೆಕೆಆರ್ಡಿಬಿ (KKRDB) ಅನುದಾನದಿಂದ ₹15 ಕೋಟಿ ಹಾಗೂ ಸಾರಿಗೆ ನಿಗಮದ ಆಂತರಿಕ ಸಂಪನ್ಮೂಲದಿಂದ ₹2.5 ಕೋಟಿ ಸೇರಿದಂತೆ ಒಟ್ಟು ₹17.5 ಕೋಟಿ ಅನುದಾನವನ್ನು ಬಳಸಲಾಗುತ್ತಿದೆ.

ತಾಲೂಕು ಮಟ್ಟದಲ್ಲಿ ರಾಜ್ಯದಲ್ಲೇ ಮೊದಲ ಇಂತಹ ಹೈಟೆಕ್ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣವಾಗುತ್ತಿರುವುದು ಗಂಗಾವತಿಯ ಅಭಿವೃದ್ಧಿಯ ದೃಷ್ಟಿಯಿಂದ ಒಂದು ಪ್ರಮುಖ ಮೈಲಿಗಲ್ಲಾಗಿದೆ ಎಂದು ಶಾಸಕರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕಲಬುರಗಿ ನಂತರ ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಲಿರುವ ಇಂತಹ ಬೃಹತ್ ನಿಲ್ದಾಣ ಗಂಗಾವತಿಯಲ್ಲಿ ಸ್ಥಾಪನೆಯಾಗುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ಮುಂದಿನ ದಿನಗಳಲ್ಲಿ ಈ ಭಾಗದ ಸಾರ್ವಜನಿಕರಿಗೆ ಮತ್ತು ಪ್ರಯಾಣಿಕರಿಗೆ ಅತ್ಯುತ್ತಮ ಸಾರಿಗೆ ಸೌಲಭ್ಯ ಲಭ್ಯವಾಗಲಿದೆ ಎಂದು ಶಾಸಕರು ವಿಶ್ವಾಸ ವ್ಯಕ್ತಪಡಿಸಿದರು. ಇದೇ ವೇಳೆ ಈ ನಿಲ್ದಾಣಕ್ಕೆ ಭೂಮಿ ನೀಡಿದ ಕೃಷಿ ಇಲಾಖೆಗೆ ಧನ್ಯವಾದಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಅರುಣ್ ಕುಮಾರ್ ಎಂ.ವೈ ಪಾಟೀಲ್, ಕೊಪ್ಪಳ ಕೆ.ಕೆ. ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ಜಿ. ಶೀನಯ್ಯ, ಆರ್.ಎಫ್.ಒ ಬಸವರಾಜ, ತಾಲೂಕು ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ರಾಮರೆಡ್ಡಿ, ಪೋಲಿಸ್ ವೃತ್ತ ಅಧಿಕಾರಿ ಪ್ರಕಾಶ್ ಮಾಳಿ, ಕೃಷಿ ಇಲಾಖೆಯ ಅಧಿಕಾರಿ ಮಹಾಂತೇಶ ಯೋಗಿ, ಸಾರಿಗೆ ಇಲಾಖೆಯ ಎಕ್ಸಿಕ್ಯೂಟಿವ್ ಇಂಜಿನಿಯರ್ ಶ್ರೀಮತಿ ಮಾಲತಿ, ಮಾಜಿ ಜಿಲ್ಲಾಧ್ಯಕ್ಷರಾದ ವಿರೂಪಾಕ್ಷಪ್ಪ ಸಿಂಗನಾಳ್ ಹಾಗೂ ಮಾಜಿ ಕಾಡಾ ಅಧ್ಯಕ್ಷರುಗಳಾದ ತಿಪ್ಪೇರುದ್ರಸ್ವಾಮಿ ಮತ್ತು ಗಿರೇಗೌಡ್ರು ಉಪಸ್ಥಿತರಿದ್ದರು.

ಇವರೊಂದಿಗೆ ಬಿಜೆಪಿಯ ನಗರ ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಹಿರೂರು, ಗ್ರಾಮೀಣ ಮಂಡಲ ಅಧ್ಯಕ್ಷರಾದ ಡಿ.ಕೆ.ಆಗೋಲಿ, ಮುಖಂಡರಾದ ಮನೋಹರಗೌಡ ಹೇರೂರು, ಅಮರಜ್ಯೋತಿ ನರಸಪ್ಪ, ರಾಮಕೃಷ್ಣ, ಯಮನೂರು ಚೌಡ್ಕಿ, ವೀರೇಶ್ ಬಲಕುಂದಿ, ಮೌಲಸಾಬ್, ಚೆನ್ನವೀರನಗೌಡ, ಚೆನ್ನಪ್ಪ ಮಳಗಿ, ಟಿ.ಜಿ.ಬಾಬು, ಕಾಶಿನಾಥ ಚಿತ್ರಗಾರ, ಶ್ರೀಧರ್ ಕೆಸರಹಟ್ಟಿ, ವೀರೇಶ್ ಸೂಳೆಕಲ್, ಮಹಾಂತಗೌಡ ಪಾಟೀಲ್, ಸಂಗಮೇಶ್ ಬಾದವಾಡಗಿ, ಶ್ರೀಮತಿ ಭಾರತಿ ಆಗಲೂರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಈ ಸಂದರ್ಭದಲ್ಲಿ ಭಾಗವಹಿಸಿದ್ದರು.

# ಪ್ರಜ್ವಲ ಯೋಗ ಕೇಂದ್ರದ ಕ್ರೀಡಾಪಟುಗಳ ಉತ್ತಮ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ಕೇಂದ್ರೀಯ ವಿದ್ಯಾಲಯ ಸಂಘಟನೆ ಬೆಂಗಳೂರು ಪ್ರಾದೇಶಿಕ ಕ್ರೀಡಾಕೂಟ 2026-27 ಯೋಗಾಸನ ಸ್ಪರ್ಧೆಯನ್ನು ಏಪ್ರಿಲ್-28, 29 ಮತ್ತು 30 ರಂದು ಬೆಂಗಳೂರಿನ ಮಲ್ಲೇಶ್ವರಂ ಕೇಂದ್ರೀಯ ವಿದ್ಯಾಲಯದಲ್ಲಿ ಆಯೋಜಿಸಿತ್ತು.

ಈ ಸ್ಪರ್ಧೆಯಲ್ಲಿ ಗಂಗಾವತಿ ಕೇಂದ್ರೀಯ ವಿದ್ಯಾಲಯ ಯೋಗ ಪಟುಗಳಾದ ಕೆ ಪ್ರಭಂಜನ್, ಎನ್. ಚೇತನ್ ಕೃಷ್ಣಾರೆಡ್ಡಿ, ಶ್ರೇಯ ಕುಲರ್ಣಿ, ನಿತಿಕಾ ಬಾಗುರ್ ಭಾಗವಹಿಸಿ ಉತ್ತಮ ಪ್ರತಿಭೆ ನೀಡಿದರು.

ಅಡರ್-14 ಬಾಲಕರ ವಿಭಾಗದಲ್ಲಿ ಎನ್. ಚೇತನ್ ಕೃಷ್ಣಾರೆಡ್ಡಿ ಭಾಗವಹಿಸಿ ಟ್ರೆಡಿಷನಲ್ ಯೋಗಾಸನ ಸ್ಪರ್ಧೆಯಲ್ಲಿ ತೃತೀಯ ಸ್ಥಾನವನ್ನು, ರ್ರಿಸ್ಟಿಕ್ಸ್ ಸಿಂಗಲ್ ಮತ್ತು ರಿಥಮಿಕ ಸಿಂಗಲ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದುಕೊಂಡನು.

ಅಂಡರ್-14 ಬಾಲಕಿಯರ ವಿಭಾಗದಲ್ಲಿ ಶ್ರೇಯಾ ಕೆ ಕುಲರ್ಣಿ ಟ್ರಡಿಷನಲ್ ವಿಭಾಗದಲ್ಲಿ ದ್ವಿತೀಯ ಸ್ಥಾನವನ್ನು ಪಡೆದುಕೊಂಡಳು. ಕುಮಾರಿ ಬಿ. ನಿತಿಕ್, ರಿಥಮಿಕ್ ಸಿಂಗಲ್ ಮತ್ತು ರ್ರಿಸ್ಟಿಕ್ಸ್ ಸಿಂಗಲ್ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದುಕೊಂಡಳು.

ಅಂಡರ್-17 ಬಾಲಕರ ವಿಭಾಗದಲ್ಲಿ ಕೆ. ಪ್ರಭಂಜನ್ ಟ್ರಡಿಷನಲ್ ರ್ರಿಸ್ಟಿಕ್ಸ್ ಸಿಂಗಲ್ ಮತ್ತು ರಿಥಮಿಕ್ ಸಿಂಗಲ್ ಮೂರು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಪಡೆದುಕೊಂಡನು.

ಈ ಯೋಗ ಪಟುಗಳನ್ನು ಪ್ರಗತಿ ಕ್ರೀಡಾ ಸಂಸ್ಥೆಯ ಅಧ್ಯಕ್ಷರಾದ ಅಬ್ದುಲ್ ರಜಾಕ್ ಟೈಲರ್, ನಿರ್ದೇಶಕರಾದ ಜಗನ್ನಾಥ ಆಲಂಪಲ್ಲಿ, ಪ್ರಜ್ವಲ ಯೋಗ ಕೇಂದ್ರದ ಅಧ್ಯಕ್ಷರು ಹಾಗೂ ತರಬೇತಿದಾರರಾದ ಭಾನುಪ್ರಸಾದ್ ಮತ್ತು ಪೋಷಕರು, ಸಹಕರಿಸಿದ ಎಲ್ಲರಿಗೂ ಅಭಿನಂದನೆಗಳು ಸಲ್ಲಿಸಿದರು.

## ಶಾಲಾ ಭೂಮಿ ಉಳಿವಿಗಾಗಿ ಕಂದಾಯ ಸಚಿವರು, ಅಪರ ಮುಖ್ಯಕಾರ್ಯದರ್ಶಿಗಳಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ




ಕೊಪ್ಪಳ ಜಿಲ್ಲೆ ಗಂಗಾವತಿ ತಾಲೂಕಿನ ಹೊಸಳ್ಳಿ ಗ್ರಾಮದಲ್ಲಿರುವ ಸರ್ಕಾರ ಶಾಲೆಯ 5 ಎಕ-ರೆ ಭೂಮಿ (ಸರ್ವೆ ನಂ. 16/2/4) ಕಬಳಿಕೆ ಮಾಡುವ ಪ್ರಯತ್ನ ನಡೆಯುತ್ತಿದೆ ಎಂಬ ಗಂಭೀರ ಆರೋಪದ ಹಿನ್ನೆಲೆಯಲ್ಲಿ, ದಲಿತ ಮುಖಂಡ ಮಹೇಶ್ ಡಿ ಅವರ ನೇತೃತ್ವದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮಮಾರ್ಗ) ವತಿಯಿಂದ ಕಂದಾಯ ಸಚಿವರಾದ ಶ್ರೀ ಕೃಷ್ಣ ಬೈರೇಗೌಡ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಗಂಗಾವತಿಯ ಕೊಟ್ಟೂರೇಶ್ವರ ಸ್ವಾಮಿಗಳವರಿಂದ ಶಾಲೆಯ ಭೂಮಿಯನ್ನು ತಮ್ಮ ಹೆಸರಿಗೆ ಮಾಡಿಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂಬ ವಿಷಯವನ್ನು ಸಚಿವರ ಗಮನಕ್ಕೆ ತರಲಾಯಿತು. ವಿಷಯದ ಗಂಭೀರತೆಯನ್ನು ಅರಿತ ಸಚಿವರು ತಕ್ಷಣ ತಹಶೀಲ್ದಾರ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಪ್ರಕರಣವನ್ನು ಪರಿಶೀಲಿಸಿ ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಇದರ ಜೊತೆಗೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸರಕಾರದ ಅಪರ ಮುಖ್ಯಕಾರ್ಯದರ್ಶಿಗಳಾದ ವಿ.ರಶ್ಮಿ ಮಹೇಶ್ ಅವರಿಗೆ ಸಹ ಪ್ರತ್ಯೇಕವಾಗಿ ಮನವಿ ಪತ್ರ ಸಲ್ಲಿಸಲಾಯಿತು. ಸರ್ಕಾರ ಶಾಲೆಯ ಭೂಮಿಯನ್ನು ಯಾವುದೇ ರೀತಿಯ ಕಬಳಿಕೆಯಿಂದ ರಕ್ಷಿಸಲು ತಕ್ಷಣ ಕ್ರಮ ಕೈಗೊಳ್ಳುವಂತೆ ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಮನವಿ ಪತ್ರವನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮಮಾರ್ಗ) ರಾಜ್ಯಾಧ್ಯಕ್ಷರಾದ ನಾರಾಯಣ ಎಂ., ಕಲಬುರಗಿ ವಿಭಾಗದ ಅಧ್ಯಕ್ಷರಾದ ಮಂಜುನಾಥ ಸಾಸಲಮರಿ ಹಾಗೂ ಕೊಪ್ಪಳ ಜಿಲ್ಲಾ ಅಧ್ಯಕ್ಷರಾದ ಮಹೇಶ್ ಡಿ ಅವರ ನೇತೃತ್ವದಲ್ಲಿ ಸಲ್ಲಿಸಲಾಯಿತು.

ಗ್ರಾಮದ ಮಕ್ಕಳ ಶಿಕ್ಷಣದ ಹಿತದೃಷ್ಟಿಯಿಂದ ಸರ್ಕಾರ ಶಾಲೆಯ ಭೂಮಿಯನ್ನು ಉಳಿಸುವುದು ಅತ್ಯಂತ ಅವಶ್ಯಕವಾಗಿದ್ದು, ಯಾವುದೇ ರೀತಿಯ ಅನಧಿಕೃತ ಕಬಳಿಕೆಯನ್ನು ಸಹಿಸಲಾಗುವುದಿಲ್ಲ ಎಂದು ಸಂಘಟನೆ ಸ್ಪಷ್ಟಪಡಿಸಿದೆ.ಈ ಸಂಬಂಧ ತಕ್ಷಣ ಸೂಕ್ತ ಕ್ರಮ ಕೈಗೊಂಡು ಶಾಲೆಯ ಭೂಮಿಯನ್ನು ರಕ್ಷಿಸಬೇಕೆಂದು ಸರ್ಕಾರವನ್ನು ಆಗ್ರಹಿಸಲಾಗುತ್ತದೆ.

# ದಕ್ಷಿಣ ಭಾರತದ ಬಿಜೆಪಿ ಪಕ್ಷದ ನಿರ್ಮಾತೃ ಬಿಎಸ್‌ವೈ

• ಮಲ್ಲಮ್ಮ ನುಡಿ ವಾರ್ತೆ ದೇವನಹಳ್ಳಿ



ದಕ್ಷಿಣ ಭಾರತದ ರಾಜ್ಯಗಳಲ್ಲಿ ಭದ್ರಕೋಟೆಯನ್ನು ನಿರ್ಮಿಸುವುದರ ಮೂಲಕ ಬಿಜೆಪಿ ಪಕ್ಷಕ್ಕೆ ಬಲಪಡಿಸಿದ ನಿರ್ಮಾತೃ ಯಡಿಯೂರಪ್ಪ ಅವರು ಆದ್ದ-ರಿಂದ ಅವರ ಸುದೀರ್ಘ 50 ವರ್ಷಗಳ ಆಡಳಿತ ಸೇವೆಯನ್ನು ಅಭಿನಂದಿಸುವ ಸಲುವಾಗಿ ಮೇ.9 ರಂದು ಚಿತ್ರದುರ್ಗದ ಬಳಿ ಮಾಜಿ ಮುಖ್ಯ ಮಂತ್ರಿ ಬಿಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದ್ದು ಪಕ್ಷದ ಸಾವಿರಾರು ಕಾರ್ಯಕರ್ತರು ಪಾಲ್ಗೊಳ್ಳಲು ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ದೇವನಹಳ್ಳಿ ತಾಲೂಕು ಮಂಡಲ ಅಧ್ಯಕ್ಷ ಅಂಬರೀಶ್ ಗೌಡ ಹೇಳಿದರು.

ಬೆಂಗಳೂರು ಗ್ರಾಮಾಂತರ ದೇವನಹಳ್ಳಿ ಪಟ್ಟಣದಲ್ಲಿರುವ ಭಾರತೀಯ ಜನತಾ ಪಾರ್ಟಿ ಕಚೇರಿಯಲ್ಲಿ ನಡೆದ ಮೇ.9 ರಂದು ಚಿತ್ರದುರ್ಗದ ಬಳಿ ಮಾಜಿ ಮುಖ್ಯಮಂತ್ರಿ ಬಿಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ಅಂಗವಾಗಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಜಿಲ್ಲೆಯಾದ್ಯಂತ ಬಿಜೆಪಿ ಪಕ್ಷದ ಕಾರ್ಯಕರ್ತರು ಮತ್ತು ಬಿ ಎಸ್ ವೈ ಅಭಿಮಾನಿಗಳು ಸಾವಿರಾರು ಸಂಖ್ಯೆಯಲ್ಲಿ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ತೆರಳುತ್ತಿದ್ದಾರೆ. ಅದಕ್ಕಾಗಿ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಪಕ್ಷದ ಗೆಲುವಿನ ಪತಾಕೆಯು ಮುಂಬರುವ ಚುನಾವಣೆಗಳಲ್ಲಿ ನಮ್ಮ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲು ಒಂದು ದೊಡ್ಡ ಸ್ಫೂರ್ತಿಯಾಗಲಿದೆ. ಎಲ್ಲರೂ ಒಗ್ಗೂಡಿ ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರವನ್ನು ತೊಲಗಿಸಬೇಕು ,ಪಶ್ಚಿಮ ಬಂಗಾಳ ಗೆಲುವು ಅಲ್ಲಿ ಪ್ರತಿಯೊಬ್ಬನ ಕಾರ್ಯಕರ್ತನ ಶ್ರಮ ಹಾಗೆಯೇ ನಮ್ಮ ತಾಲೂಕಿನ ಕ್ಷೇತ್ರದಲ್ಲೂ ಸಹ ಅಷ್ಟೇ ಶ್ರಮವಹಿಸಿ ಗೆಲುವು ಸಾಧಿಸಬೇಕು ಅದಕ್ಕಾಗಿ ಅವಿರತವಾಗಿ ಕಾರ್ಯೋನ್ಮುಕನಾಗಬೇಕು ಎಂದರು.

ಪಕ್ಷದ ಕಾರ್ಯಕರ್ತರು ಪ್ರತಿ ತಿಂಗಳ ಸಭೆ ಮತ್ತು ಯಾವುದೇ ಕಾರ್ಯಕ್ರಮ ನಿಮ್ಮ ಚಿತ್ರದ ಸಮೇತ ವಿವರಗಳನ್ನು ಸ್ವತ ನೀವು ನಮೂದಿಸಬಹುದು, ರಾಜ್ಯದಲ್ಲಿಯೇ ಪ್ರಶಿಕ್ಷಣ ವರ್ಗ ಎರಡನೇ ಸ್ಥಾನ ಬಂದಿರುವುದು ಶ್ಲಾಘನೀಯ ಹಾಗೂ ಭಾರತ ಇನ್ನಷ್ಟು ಅಭಿವೃದ್ಧಿ ಹೊಂದಲು ಬಿಜೆಪಿಪಕ್ಷವು ಪ್ರತಿ ಕ್ಷೇತ್ರದಲ್ಲೂ ಭದ್ರವಾಗಿ ಉಳಿಯುವಂತೆ ಗೆಲುವು ಸಾಧಿಸಬೇಕು ಎಂದು ಹೇಳಿದರು.

ಮಾಜಿ ಶಾಸಕ ಜಿ.ಚಂದ್ರಣ್ಣ ಮಾತನಾಡಿ, ದೇವನಹಳ್ಳಿ ವಿಧಾನಸಭಾ ಕ್ಷೇತ್ರದಿಂದ ಪ್ರತಿಯೊಂದು ಮಹಾಶಕ್ತಿ ಕೇಂದ್ರಗಳು ಒಳಗೊಂಡಂತೆ 1000 ಕ್ಕೂ ಹೆಚ್ಚು ಸಂಖ್ಯೆಯಲ್ಲಿ ಕಾರ್ಯಕರ್ತರು ತೆರಳಬೇಕು. ಅಗತ್ಯ ಬಸ್ ಸೌಕರ್ಯ ಇದೆ. ಗೃಹಮಂತ್ರಿ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಹಾಗೂ ಪಶ್ಚಿಮ ಬಂಗಾಳದ ಈ ಗೆಲುವು ಮುಂದಿನ ಚುನಾವಣೆಗಳಲ್ಲಿ ಬಿಜೆಪಿ ಪಕ್ಷವು ಇನ್ನಷ್ಟು ಸುಭದ್ರವಾಗಿ ಉಳಿಯುವಂತೆ ಗೆಲುವು ಸಾಧಿಸಲು ಎಲ್ಲರೂ ಒಗ್ಗೂಡಿ ಶ್ರಮವಹಿಸಲು ಪ್ರೇರಣೆಯಾಗಲಿದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ ಮಾತನಾಡಿ ದಕ್ಷಿಣಭಾರತದಲ್ಲಿ ಬಿಜೆಪಿ ಅಧಿಕಾರಕ್ಕೆ ತರಲು ಬಿ.ಎಸ್ .ಯಡಿಯೂರಪ್ಪ ಅವರು ಪಂಚಾಯತಿಯಿಂದ ವಿಧಾನಸಭೆವರೆಗೂ ಅವರ ಸುಧೀರ್ಘ 50 ವರ್ಷಗಳ ರಾಜಕೀಯ ಆಡಳಿತ ವೈಖರಿ ಒಂದು ದೊಡ್ಡ ಇತಿಹಾಸ. ಅವರ ಹೆಣ್ಣುಮಕ್ಕಳ ಸಂರಕ್ಷಣೆಯ ಉದ್ದೇಶದಿಂದ ಬಾಂಡ್ ವಿತರಣೆ ,ಸೈಕಲ್ ವಿತರಣೆ ,ರೈತರಿಗಾಗಿ ಬಜೆಟ್ ಮಂಡನೆ,ರೈತರು ಕಾರ್ಮಿಕರ ಪರವಾಗಿ ಸತತ ಹೋರಾಟಗಳನ್ನು ಮಾಡುತ್ತಾ ಬಂದಿದ್ದಾರೆ ಹಾಗಾಗಿ ಕಾರ್ಯಕರ್ತರೆಲ್ಲಾ ಸೇರಿ ಮಾಡುತ್ತಿರುವ ಅಭಿನಂದನಾ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರೂ ಭಾಗಿಯಾಗಬೇಕು ಎಂದರು.

ತಾಲೂಕಿನ ಹಲವು ಮುಖಂಡರು ಇತರ ಪಕ್ಷ ತೊರೆದು ಬಿಜೆಪಿ ಪಕ್ಷದ ತತ್ವ ಸಿದ್ಧಾಂತಗಳನ್ನು ಒಪ್ಪಿ ಪಕ್ಷಕ್ಕೆ ಸೇರ್ಪಡೆಯಾದರು ನಂತರ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಪಕ್ಷದ ಗೆಲುವಿನ ಹಿನ್ನಲೆ ಕಚೇರಿಯ ಮುಂಭಾಗದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಚಂದ್ರಣ್ಣ, ಬಿಜೆಪಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗವೇಣಿ, ದೇವನಹಳ್ಳಿ ತಾಲೂಕು ಮಂಡಲ ಅಧ್ಯಕ್ಷ ಗೌಡ, ಕುಂದಾಣ ಹೋಬಳಿಯ ಯುವ ಮೋರ್ಚಾ ಮತ್ತು ಮನ್ ಕಿ ಬಾತ್ ಕಾರ್ಯಕ್ರಮದ ಸಂಚಾಲಕ ಅಧ್ಯಕ್ಷ ಅರುವನಳ್ಳಿ ವೆಂಕಟೇಗೌಡ, ಮುಖಂಡರುಗಳಾದ ಬುಳ್ಳಹಳ್ಳಿ ರಾಜಪ್ಪ, ಅಶ್ವಥ್ ನಾರಾಯಣ್, ಬಿಕೆ. ನಾರಾಯಣಸ್ವಾಮಿ, ಅನೀಲ್, ಕದಿರಪ್ಪ, ಅಮರ ನಾರಾಯಣ್, ವಿಜಯಕುಮಾರ್, ವೆಂಕಟೇಗೌಡ, ವಿಜಯಪುರ ವೆಂಕಟೇಶ್, ಯಶೋಧ, ತಾಯಮ್ಮ, ಪ್ರೇಮ ಸೇರಿದಂತೆ ಮತ್ತಿತರರು ಭಾಗಿಯಾಗಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)



**ಡಾ. ಬಿ.ಆರ್. ಅಂಬೇಡ್ಕರ್ ಮಣಿಪಾಲ್ ಆಸ್ಪತ್ರೆ ಸಂಘ (ರಿ) ಸಂಸ್ಥೆಯ ಜೆ. ಬಾಬು, ಡಿಎಸ್‌ಎಸ್ – ರಾಜ್ಯಾಧ್ಯಕ್ಷರು, ಕರ್ನಾಟಕ ಅವರ ಹುಟ್ಟು ಹಬ್ಬದ ಆಚರಣೆಯನ್ನು ಸಂಘ ಸಂಸ್ಥೆಯ ಸದಸ್ಯರು ಹಾಗೂ ಸ್ನೇಹಿತರು ಸೇರಿ ಅದ್ದೂರಿಯಾಗಿ ಆಚರಿಸಿ ಅವರಿಗೆ ಶುಭಾಶಯವನ್ನು ಹೇಳಿದರು.**

## ಸಂವಿಧಾನ ಪ್ರತಿಯೊಬ್ಬ ವ್ಯಕ್ತಿಗೂ ರಕ್ಷಣೆ



**ಹುಣಸೂರು:** ಡಾ.ಬಿ.ಆರ್. ಅಂಬೇಡ್ಕರ್ ರವರ ಸಂವಿಧಾನ ಪ್ರತಿಯೊಂದು ಜಾತಿ, ಧರ್ಮ, ಸೇರಿದಂತೆ ಪ್ರತಿಯೊಬ್ಬ ವ್ಯಕ್ತಿಗೂ ರಕ್ಷಣೆಯಾಗಿದೆ ಎಂದು ಅಂಬೇಡ್ಕರ್ ರಾಜ್ಯ ಪ್ರಶಸ್ತಿ ಪುರಸ್ಕೃತ ಹರಿಹರಾನಂದಸ್ವಾಮಿ ತಿಳಿಸಿದರು.

ತಾಲ್ಲೂಕಿನ ರತ್ನಪುರಿ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಯುವಕರ ಸಂಘ, ಮಹಿಳಾ ಒಕ್ಕೂಟ, ಸ್ವಸಹಾಯ ಸಂಘಗಳು ಹಾಗೂ ಗ್ರಾಮಸ್ಥರು ಸೇರಿ ಏರ್ಪಡಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ರವರ 135 ನೇ ಜನ್ಮ ದಿನದ ಕಾರ್ಯಕ್ರಮವನ್ನು ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಇಂದಿನ ಯುವಕ– ಯುವತಿಯರು ಅಂಬೇಡ್ಕರ್ ರವರ ತತ್ವಾದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ನಮ್ಮ ದೇಶದ ಸಂಮಿದಾನ ಪ್ರೀತಿ, ಶಾಂತಿ, ಕರುಣೆ ಎಲ್ಲವನ್ನೂ ಒಳಗೊಂಡಿದೆ. ಎಲ್ಲದಕ್ಕೂ ಕಾನೂನುಗಳಿವೆ, ಆದರೆ ಇಂದಿನ ದಿನಗಳಲ್ಲಿ ಅಂಬೇಡ್ಕರ್ ಕೊಟ್ಟ ಮೀಸಲಾತಿ, ಸಂಮಿದಾನದಿಂದ ಅಧಿಕಾರಕ್ಕೆ ಬಂದು ಉತ್ತಮ ಸ್ಥಾನವನ್ನು ಪಡೆದು ವೇದಿಕೆಯಲ್ಲಿ ನಿಂತು ಅದರ ವಿರುದ್ಧ ಮಾತನಾಡುವುದು ಸರಿಯಲ್ಲ, ಮನುಷ್ಯನಿಗೆ ಬದುಕಲು ಆಸರೆ ಕೊಟ್ಟ ಸಂವಿಧಾನವನ್ನು ಜಾತಿ ಧರ್ಮಗಳ ಹೆಸರಿನಲ್ಲಿ ವಿರೋಧಿಸುವುದಕ್ಕು ಮೊದಲು ನಮ್ಮ ದೇಶದ ಪ್ರಧಾನಿ ಮೋದಿಯವರಿಂದ ಹಿಡಿದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತನಕ ಆಡಳಿತ ನಡೆಸುತ್ತಿರುವುದು ಸಂವಿಧಾನದ ಅಡಿಯಲ್ಲಿ ಎಂಬುದನ್ನು ಎಲ್ಲಾ ವರ್ಗದ ಜನರು ತಿಳಿದುಕೊಳ್ಳಬೇಕಾಗಿದೆ ಎಂದರು.

ಮಾಜಿ ಜಿಲ್ಲಾ ಪರಿಷತ್ತು ಸದಸ್ಯ ನಾಗರಾಜ್ ಮಲ್ಲಾಡಿ ಮಾತನಾಡಿ, ಮಹಿಳೆಯರಿಗೆ ಸಂಮಿದಾನದ ಮೂಲಕ ರಕ್ಷಣೆ ನೀಡಿದವರು ಅಂಬೇಡ್ಕರ್, ಮಹಿಳಾ ಹಕ್ಕುಗಳನ್ನು ಸಂರಕ್ಷಿಸಿದರು. ಮಹಿಳಾ ಹಕ್ಕುಗಳಿಗಾಗಿ ಹೋರಾಡಿದರು. ಅದಕ್ಕಾಗಿ ನೀವು– ನಾವು ಬದಲಾದರೆ ಮಾತ್ರ ಸಮಾಜ ಸುಧಾರಣೆ ಆಗುತ್ತದೆ ಎಂದರು.

ದಸಂಸ ಹಿರಿಯ ಹೋರಾಟಗಾರ ರತ್ನಪುರಿ ಪುಟ್ಟಸ್ವಾಮಿ ಮಾತನಾಡಿ, ನಮ್ಮ ಗ್ರಾಮದಲ್ಲಿ ಎಲ್ಲಾ ಜಾತಿ ಧರ್ಮಗಳು ಸೇರಿ ಅಂಬೇಡ್ಕರ್ ಜಯಂತಿ ಆಚರಣೆ ಮಾಡುತ್ತಿರುವುದು ನಾವು ಅಂಬೇಡ್ಕರ್ ರಿಗೆ ಕೊಟ್ಟ ಗೌರವವಾಗಿದೆ ಜೊತೆಗೆ ಪ್ರತಿಯೊಬ್ಬ ಮಹನೀಯರ ಜಯಂತಿಗಳನ್ನು ನಮ್ಮ ಗ್ರಾಮದಲ್ಲಿ ಆಚರಣೆ ಮಾಡುವುದು ಪ್ರತಿಯೊಂದು ಹಳ್ಳಿ ನಗರಗಳಿಗೂ ಮಾದರಿಯಾಗಿದೆ.

ಮುಖ್ಯಭಾಷಣಕಾರರಾಗಿ ಆಗಮಿಸಿ ಮಾತನಾಡಿದ ರಾಜ್ಯಮಟ್ಟದ ಪ್ರೇರಣಾತ್ಮಕ ಭಾಷಣಕಾರ ನಾಗರಾಜ್ ಮಾತನಾಡಿ, ಇಂದಿನ ಯುವಕ –ಯುವತಿಯರಲ್ಲಿ ದೇಶ, ಸಮುದಾಯ, ಗ್ರಾಮಗಳ ಪ್ರಗತಿ, ಹಾಗೂ ಸಮಸ್ಯೆಗಳ ಬಗ್ಗೆ ಅರಿವು ಇಲ್ಲದಂತಾಗಿದೆ. ಸಮಸ ದೇವಸ್ಥಾನಗಳ ಗಂಟೆಗಳಿಗಿಂತ ಶಾಲೆಯಲ್ಲಿನ ಗಂಟೆಗಳ ಬಗ್ಗೆ ಆಸಕ್ತಿ ಹೆಚ್ಚಾಗಬೇಕು. ಕೋಮುವಾದಿಗಳು ಅಂಬೇಡ್ಕರ್ ವಿಚಾರಗಳನ್ನು ವಿರೋಧಿಸುತ್ತಾರೆ. ಅಂಬೇಡ್ಕರ್, ಬುದ್ಧ, ಬಸವಣ್ಣ ರವರ ವಿಚಾರಗಳನ್ನು ಯಾರಿದಂಲೂ ನಾಶ ಮಾಡಲು ಸಾದ್ಯವಿಲ್ಲ ಅದರಿಂದ ಇವರ ವಿಚಾರಗಳನ್ನು ಇಂದಿನ ಪೀಳಿಗೆ ಹಾಗೂ ಜನರು ಅರ್ಥಮಾಡಿಕೊಳ್ಳಲಬೇಕೆಂದರು.

ಗ್ರಾ.ಪಂ, ಅಧ್ಯಕ್ಷ ನಾಗೇಶರಾವ್ ಮೇಗಾಣಿ, .ಸದಸ್ಯ, ಹಾಗೂ ಅಂಬೇಡ್ಕರ್ ಯುವಕರ ಸಂಘದ ಅಧ್ಯಕ್ಷ ವಿಜೇಂದ್ರಕುಮಾರ್, ಮಾಜಿ ಸದಸ್ಯ ಡೇವಿಡ್, ಸತ್ಕಾರ ಅಭಿವೃದ್ಧಿ ಸಂಸ್ಥೆ ಅಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಮಾತನಾಡಿದರು.

ಕಾರ್ಯಕ್ರಮದಲ್ಲಿ ದಸಂಸ ಮುಖಂಡ ಬಿ.ವೈ. ಪ್ರಸನ್ನ, ಗ್ರಾ.ಪಂ. ಸದಸ್ಯರಾದ ಮನುಕುಮಾರ್, ರಾಮಭೋವಿ, ರತ್ನಮ್ಮ, ಅಕ್ರಮ–ಸಕ್ರಮ ಸದಸ್ಯ ಕುಮಾರ್, ಬಿಳಿಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜು, ಗ್ಯಾರಂಟಿ ಅನುಷ್ಠಾನಬಸಮಿತಿ ಸದಸ್ಯ ಸುದರ್ಶನ್ ಸಿಂಗ್, ಮುಖಂಡರಾದ ರಾಮಸ್ವಾಮಿ, ಮುರುಗೇಶ್, ಎಸ್.ಪಿ.ಚಾಂದ್, ಪಿ.ಡಿ.ಓ ಶ್ರೀಧರ್ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

## ಹನುಮಂತ ಹಳ್ಳಿಕೇರಿಗೆ 4ಲಕ್ಷ ಪರಿಹಾರ

**ಬೆಂಗಳೂರು:** ಕೊಪ್ಪಳ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಹನುಮಂತಪ್ಪ ಹಳ್ಳಿಕೇರಿ ಅವರಿಗೆ ಆಸ್ಪತ್ರೆ ಚಿಕಿತ್ಸೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4ಲಕ್ಷ ರೂ ಪರಿಹಾರ ಮಂಜೂರು ಮಾಡಿದ್ದಾರೆ.

ಹನುಮಂತಪ್ಪ ಹಳ್ಳಿಕೇರಿ ಅವರು ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿದ್ದು, ಅದರ ಚಿಕಿತ್ಸೆಗಾಗಿ ಹೆಚ್ಚಿನ ಹಣಕಾಸು ನೆರವು ಅಗತ್ಯವಿತ್ತು.

ಈ ಬಗ್ಗೆ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿ ಗಮನಕ್ಕೆ ತಂದಿದ್ದು ನೆರವು ಕೋರಿದ್ದರು.


ಶಾಸಕರು&ಕೆಯುಡಬ್ಲ್ಯೂಜೆ ಮನವಿ ಮೇರೆಗೆ ಪರಿಹಾರ ಮಂಜೂರು ಮಾಡಿದ ಸಿಎಂ ಸಿದ್ದರಾಮಯ್ಯ ಅವರಿಗೆ, ಈ ನಿಟ್ಟಿನಲ್ಲಿ ಸಹಕಾರ ನೀಡಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಧನ್ಯವಾದ ಸಲ್ಲಿಸಿದೆ.

# ಕಾರ್ಮಿಕರ ಸಂಘದಿಂದ ಅಧಿಕಾರಿಗಳಿಗೆ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ವತಿಯಿಂದ ಕಾರ್ಮಿಕ ನ್ಯಾಯಾಲಯ, ಕಾರ್ಮಿಕ ಇಲಾಖೆ ಹಾಗೂ ಸರ್ಕಾರದ ನಿರ್ದೇಶನಗಳನ್ನು ತಕ್ಷಣ ಜಾರಿಗೊಳಿಸಿ ಕಾರ್ಮಿಕರ ಬಾಕಿ ವೇತನ ಪಾವತಿಸಬೇಕು. ಇಲ್ಲದಿದ್ದರೆ ಸಂಬಂಧಿಸಿದ ಅಧಿಕಾರಿಗಳು ಲಿಖಿತವಾಗಿ ಸ್ಪಷ್ಟ ಉತ್ತರ ನೀಡಬೇಕು ಎಂದು ಆಗ್ರಹಿಸಲಾಗಿದೆ.

ಇಂದು ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ವಡ್ಡರಹಟ್ಟಿ ಮತ್ತು ಕಾರಟಗಿ ಉಪ ವಿಭಾಗದ ಕಾರ್ಮಿಕರಿಂದ ಕಾರ್ಯಪಾಲಕ ಅಭಿಯಂತರರ ಕಚೇರಿ ಎದುರು ನಡೆದ ಪ್ರತಿಭಟನಾ ಹೋರಾಟವನ್ನು ಉದ್ದೇಶಿಸಿ ಮಾತನಾಡಿದ ಸಂಘದ ಕೇಂದ್ರ ಸಮಿತಿಯ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ ಕಳೆದ ಹಲವು ತಿಂಗಳುಗಳಿಂದ ತುಂಗಭದ್ರಾ ನೀರಾವರಿ ಯೋಜನೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಜನವರಿ, ಫೆಬ್ರವರಿ, ಮಾರ್ಚ್ ಹಾಗೂ ಏಪ್ರಿಲ್ ತಿಂಗಳ ವೇತನ ಪಾವತಿಸದೇ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಆರೋಪಿಸಲಾಗಿದೆ. ಸಂಧಾನ ಸಭೆಗಳಲ್ಲಿ ಹಾಗೂ ಕಾರ್ಮಿಕ ಇಲಾಖೆಯ ಮುಂದಾಳತ್ವದಲ್ಲಿ ತೆಗೆದುಕೊಳ್ಳಲಾದ ನಿರ್ಧಾರಗಳನ್ನೂ ಜಾರಿಗೊಳಿಸದೇ ಇರುವುದರಿಂದ ಕಾರ್ಮಿಕರು ತೀವ್ರ ಆರ್ಥಿಕ



ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ತಿಳಿಸಲಾಗಿದೆ.

ಕಾರ್ಮಿಕರಿಗೆ ಉದ್ಯೋಗ ಭದ್ರತೆ, ಕನಿಷ್ಠ ವೇತನ, ಇಎಸ್‌ಐ, ಪಿಎಫ್ ಸೇರಿದಂತೆ ಕಾನೂನುಬದ್ಧ ಸೌಲಭ್ಯಗಳನ್ನು ನೀಡಬೇಕಾದ ಸರ್ಕಾರದ ಸಂಸ್ಥೆಯೇ ಕಾರ್ಮಿಕ ಕಾಯ್ದೆಗಳನ್ನು ಉಲ್ಲಂಘಿಸುತ್ತಿರುವುದು ಖಂಡನೀಯ ಎಂದು ಸಂಘ ಹೇಳಿದೆ.

ಟೆಂಡರ್ ಪ್ರಕ್ರಿಯೆಯ ವಿಳಂಬದ ಹೆಸರಿನಲ್ಲಿ ಕಾರ್ಮಿಕರನ್ನು ಕೆಲಸದಿಂದ ದೂರ ಇಡುವುದು ಹಾಗೂ ಗುತ್ತಿಗೆದಾರರ ಮೂಲಕ ಕೆಲಸ ಮಾಡಿಸುವುದು ಕಾರ್ಮಿಕ ವಿರೋಧಿ ಕ್ರಮವಾಗಿದೆ ಎಂದು ಸಂಘ ಆರೋಪಿಸಿದೆ. ಸಂಘದ ಪ್ರಮುಖ ಬೇಡಿಕೆಗಳು: ಬಾಕಿ ಇರುವ ಎಲ್ಲಾ ವೇತನವನ್ನು ತಕ್ಷಣ ಪಾವತಿಸಬೇಕು, ಕಾರ್ಮಿಕ ನ್ಯಾಯಾಲಯ ಮತ್ತು ಸರ್ಕಾರದ ನಿರ್ದೇಶನಗಳನ್ನು ಜಾರಿಗೊಳಿಸಬೇಕು, ಕಾರ್ಮಿಕ ಕಾಯ್ದೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ವೇತನ ವ್ಯತ್ಯಾಸದ ಮೊತ್ತವನ್ನು ಕಾರ್ಮಿಕರ ಖಾತೆಗೆ ಜಮಾ ಮಾಡಬೇಕು, ಕಾರ್ಮಿಕರಿಗೆ ನಿರಂತರ ಕೆಲಸ ಹಾಗೂ ಉದ್ಯೋಗ ಭದ್ರತೆ ನೀಡಬೇಕು, ಈ ಎಲ್ಲಾ ಬೇಡಿಕೆಗಳನ್ನು ತಕ್ಷಣ ಈಡೇರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಎಚ್ಚರಿಸಿದೆ.

ಪ್ರತಿಭಟನಾ ಹೋರಾಟದ ನೇತೃತ್ವವನ್ನು ವಡ್ಡರಹಟ್ಟಿ ಉಪ ವಿಭಾಗದ ಅಧ್ಯಕ್ಷರಾದ ಶರಣಬಸವ ಹೇರೂರು, ಕಾರಟಗಿ ಉಪ ವಿಭಾಗದ ಅಧ್ಯಕ್ಷ ಹುಚ್ಚಯ್ಯ ಸ್ವಾಮಿ ವಹಿಸಿದ್ದರು. ಪ್ರತಿಭಟನೆಯಲ್ಲಿ ಎಐಸಿಸಿಟಿಯು ಜಿಲ್ಲಾಧ್ಯಕ್ಷ ವಿಜಯ್ ದೊರೆರಾಜು ಕಾರ್ಮಿಕರನ್ನುದೇಶಿಸಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಲಕ್ಷ್ಮಣ ಸಿಂಗನಾಳ, ಚಾಂದ್ ಪಾಷಾ, ಶಿವುಕುಮಾರ ತಿಪ್ಪನಾಳ, ಸೈಯದ್ ಸಾಬ್, ಗುಂಡಪ್ಪ, ವೀರಯ್ಯ ಸ್ವಾಮಿ, ಶೇಖರ್ ಕಾರಟಗಿ, ಹನುಮಂತಪ್ಪ ಹೂಗಾರ್, ಯಮನಪ್ಪ ಕುಂಟೋಜಿ, ಶರಣಪ್ಪ ಹಣಬಳ ಕ್ಯಾಂಪ್, ಖಾಜಾಸಾಬ್, ಲಕ್ಷ್ಮೀ, ಲಕ್ಷ್ಮಮ್ಮ, ನಾಗಮ್ಮ, ಮೆಹಬೂಬ್ ಸಾಬ್, ನಬಿಸಾಬ್, ವೆಂಕಟೇಶ್ ಸೇರಿದಂತೆ ವಡ್ಡರಹಟ್ಟಿ ಮತ್ತು ಕಾರಟಗಿ ಉಪ ವಿಭಾಗದ ಕಾರ್ಮಿಕರು ಪಾಲ್ಗೊಂಡಿದ್ದರು.

ಮನವಿ ಪತ್ರವನ್ನು ಕಾರ್ಯಪಾಲಕ ಅಭಿಯಂತರರಾದ ಎಂ.ಎಸ್ ಗೋಡೆಕರ್ ಅವರಿಗೆ ಸಲ್ಲಿಸಿ ಏಪ್ರಿಲ್ 10 ರೊಳಗೆ ಲಿಖಿತ ಪತ್ರ ನೀಡುವಂತೆ ಒತ್ತಾಯಿಸಲಾಯಿತು.

# ಶ್ರೀ ಸಿದ್ದಗಂಗಾ ಪ್ರೌಢಶಾಲೆಯಲ್ಲಿ 2026-27ನೇ ಸಾಲಿನ ದಾಖಲಾತಿಗಳು ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಶೇಕಡ 96.29 ರಷ್ಟು ಪಡೆಯುವುದರ ಮೂಲಕ ನಮ್ಮ ಶಾಲೆಯು ಉತ್ತಮ ಸಾಧನೆಯನ್ನು ಮಾಡಿದೆ. ವಿದ್ಯಾರ್ಥಿಗಳಿಗೆ ಕಠಿಣವೆನಿಸುವ ಗಣಿತ ಮತ್ತು ವಿಜ್ಞಾನ ವಿಷಯದಲ್ಲಿ ಶೇಕಡ 100 ರಷ್ಟು ಫಲಿತಾಂಶ ಪಡೆದಿರುವುದು ಈ ಶಾಲೆಯ ಗಮನಾರ್ಹ ಸಾಧನೆಯಾಗಿದೆ', ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಪುರುಷನಹಳ್ಳಿಯ ಶ್ರೀ ಸಿದ್ದಗಂಗಾ ಗ್ರಾಮಾಂತರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ನಾಗರಾಜ್ ಹೇಳಿದರು.

2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶ್ರೀ ಸಿದ್ದಗಂಗಾ ಗ್ರಾಮಾಂತರ ಪ್ರೌಢಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಶ್ರೀ ಸಿದ್ದಗಂಗಾ ವಿದ್ಯಾ ಸಂಸ್ಥೆಯ ಪರಮಪೂಜ್ಯ ಡಾ. ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿಗಳ ಆಶೀರ್ವಾದಗಳಿಂದ ಪರಮಪೂಜ್ಯ ಶ್ರೀ ಶ್ರೀ ಸಿದ್ದಲಿಂಗ ಸ್ವಾಮೀಜಿಗಳ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಶ್ರೀ ಸಿದ್ದಗಂಗಾ ಗ್ರಾಮಾಂತರ ಪ್ರೌಢಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿನ ದಾಖಲಾತಿಗಳು ಪ್ರಾರಂಭವಾಗಿವೆ. ನಿಮ್ಮ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ನಮ್ಮ ಶಾಲೆಗೆ ಇಂದೇ ದಾಖಲಿಸಿ', ಎಂದು ಮನವಿ




ಮಾಡಿದರು. ಶಾಲೆಯ ವಿಶೇಷತೆಗಳ ಬಗ್ಗೆ ವಿವರಿಸಿದ ಅವರು, '8ನೇ ತರಗತಿಯಿಂದ 10ನೇ ತರಗತಿವರೆಗೆ ಬಾಲಕರಿಗೆ ವಸತಿ ರಹಿತ ಉಚಿತ ಶಿಕ್ಷಣ ನೀಡಲಾಗುತ್ತಿದೆ, ಕಲಿಕೆಗೆ ಪೂರಕವಾದ ವಾತಾವರಣವಿದ್ದು ಅನುಭವಿ ಮತ್ತು ನುರಿತ ಶಿಕ್ಷಕರ ತಂಡ ವಿದ್ಯಾರ್ಥಿಗಳ ಏಳಿಗೆಗಾಗಿ ಶ್ರಮಿಸುತ್ತಿದೆ. ಶ್ರೀ ಮಠದ ಆಶಯದಂತೆ ಶಿಸ್ತು, ಸಂಸ್ಕೃತಿ, ಮೌಲ್ಯಗಳ ಬೆಳವಣಿಗೆಗೆ ಒತ್ತು ನೀಡಲಾಗುವುದು', ಎಂದು ತಿಳಿಸಿದರು.

ಶ್ರೀ ಸಿದ್ದಗಂಗಾ ಗ್ರಾಮಾಂತರ ಪ್ರೌಢಶಾಲೆಯ ಶಾಲೆಗೆ ನಿಮ್ಮ ಮಕ್ಕಳನ್ನು ಸೇರಿಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕೆಂದು ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು ಮನವಿ ಮಾಡಿದರು.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ**

**ನಾಗರಾಜ್ ಮುಖ್ಯೋಪಾಧ್ಯಾಯರು : 9110251488**

**ಕೆ.ಆರ್ ರಮೇಶಾಚಾರ್, ಶಿಕ್ಷಕರು : 9845397055**

**ಸಾಗರ್ ಬಿ. ಎಲ್, ಶಿಕ್ಷಕರು : 9844997372 ಪದ್ಮನಾಭ್, ದ್ವಿತೀಯ ದರ್ಜೆ ಸಹಾಯಕರು : 9741651520**

# ಸೂರ್ಯನಾಯಕ ತಾಂಡಾವನ್ನು ಗ್ರಾಮವನ್ನಾಗಿಸಲು ಶಾಸಕರಿಗೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ತಾಲೂಕಿನ ವೆಂಕಟಗಿರಿ ಹೋಬಳಿಯ ಬಸಾಪಟ್ಟಣ ಗ್ರಾಮ ಪಂಚಾಯತಿಯ ಸೂರ್ಯನಾಯಕ ಲಂಬಾಣಿ ತಾಂಡವನ್ನು ಕಂದಾಯ ಗ್ರಾಮವನ್ನಾಗಿ ಘೋಷಿಸಲು ಅಖಿಲ ಕರ್ನಾಟಕ ಬಂಜಾರ್ ಲಂಬಾಣಿ ಸೇವಾಲಾಲ್ ಸಮಾಜ ಸೂರ್ಯನಾಯಕ ತಾಂಡದ ಕಾರ್ಯಾಧ್ಯಕ್ಷರಾದ ಬಾಲಾಜಿ ಚವ್ಹಾಣ್ ಇವರು ಗಂಗಾವತಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಗಾಲಿ ಜನಾರ್ಧನರೆಡ್ಡಿಯವರಿಗೆ ಮೇ–2 ರಂದು ಕನಕಗಿರಿ ರಸ್ತೆಯಲ್ಲಿ ನೂತನ ಸ್ಯಾಟ್ ಲೈಟ್ ಬಸ್ ನಿಲ್ದಾಣದ ಅಡಿಗಲ್ಲು ಸಮಾರಂಭದ ವೇದಿಕೆಯಲ್ಲಿ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಅವರು, ಬಸಾಪಟ್ಟಣ ಗ್ರಾಮ ಪಂಚಾಯತಿ ವ್ಯಾಪ್ತಿಯ ಸೂರ್ಯನಾಯಕನತಾಂಡ ಪ್ರದೇಶವು ಸುಮಾರು 60 ವರ್ಷಗಳಿಂದ 85 ಕುಟುಂಬಗಳು ವಾಸವಿದ್ದು, ಸುಮಾರು 1200 ಕ್ಕಿಂತಲೂ ಹೆಚ್ಚು ಜನಸಂಖ್ಯೆಯನ್ನು



ಹೊಂದಿದ್ದು, ಆದರೆ ಯಾವುದೇ ಸರ್ಕಾರಿ ದಾಖಲೆಗಳಲ್ಲಿ ಸೂರ್ಯನಾಯಕನ ತಾಂಡ ಎಂದು ನಮೂದು ಆಗಿರುವುದಿಲ್ಲ. ನಮ್ಮ ಸೂರ್ಯನಾಯಕನ ತಾಂಡಾದಲ್ಲಿ 5ನೇ ತರಗತಿವರೆಗೆ ಸರ್ಕಾರಿ ಶಾಲೆ ಇದ್ದು, ಗ್ರಾಮ ಎಂದು ಘೋಷಿಸಲು ಹೊಂದಿರಬೇಕಾದ ಎಲ್ಲಾ ಅರ್ಹತೆಗಳನ್ನು ಹೊಂದಿರುತ್ತದೆ. ಈ ಪ್ರದೇಶವು ಗುಡ್ಡಗಾಡು ಮತ್ತು ದಟ್ಟವಾದ ಜಾಲಿಯ ಕುಂಟಿಗಳಿಂದ ಆವೃತವಾಗಿದ್ದು, ಇಲ್ಲಿನ ನಿವಾಸಿಗಳು ಶಾಲಾ ಶಿಕ್ಷಣ, ಆರೋಗ್ಯ ಕೇಂದ್ರ, ಪಶು ವೈದ್ಯಶಾಲೆ, ಕುಡಿಯುವ ನೀರು ಮತ್ತು ಸರಿಯಾದ ಸಾರಿಗೆ ಸಂಪರ್ಕದಂತಹ ಕನಿಷ್ಠ ಸೌಲಭ್ಯಗಳಿಲ್ಲದೇ ಜೀವನ ನಡೆಸುತ್ತಿದ್ದಾರೆ. ಕಂದಾಯ ಇಲಾಖೆಯ ವಿಶೇಷ ಕೋಶದಿಂದ ಈ ಹಿಂದೆ ಸರ್ವೆ ನಡೆದಿದ್ದರೂ ಸಹ ಈವರೆಗೂ ಅಧಿಕೃತವಾಗಿ ಈ ಪ್ರದೇಶವನ್ನು ಕಂದಾಯ ಗ್ರಾಮವೆಂದು ಘೋಷಣೆ ಮಾಡಿಲ್ಲ. ಇದರಿಂದಾಗಿ ಸರ್ಕಾರದ ವಿವಿಧ ಸೌಲಭ್ಯಗಳು ಮತ್ತು ಅಭಿವೃದ್ಧಿ ಯೋಜನೆಗಳು ಇಲ್ಲಿನ ಜನರಿಗೆ ತಲುಪಲು ತಾಂತ್ರಿಕ ತೊಂದರೆಯಾಗುತ್ತಿದೆ. ಕಾರಣ ನಮ್ಮ ಸೂರ್ಯನಾಯಕನತಾಂಡ ಗ್ರಾಮವನ್ನು ಕಂದಾಯ ಗ್ರಾಮವನ್ನಾಗಿ ಘೋಷಿಸಲು ಗ್ರಾಮದ ನಿವಾಸಿಗಳ ಪರವಾಗಿ ಜಿಲ್ಲಾ ಉಸ್ತುವಾರಿ ಮಂತ್ರಿಗಳಿಗೆ ಮನವಿ ಮೂಲಕ ಒತ್ತಾಯಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ರಮೇಶ ನಾಯಕ, ವಲ್ಲಭ ವೇಣುಗೋಪಾಲಕೃಷ್ಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಗುಣಾತ್ಮ ಶಿಕ್ಷಣಕ್ಕೆ ಮತ್ತೊಂದು ಹೆಸರೇ ಡೈಮಂಡ್ ಪಿಯು ಕಾಲೇಜ್



**ಬದುಕು–ಬೆಳಗು**

**• ಪರಶುರಾಮ ಕರಣಂ**

**ಭಾಲ್ಕಿ**

ಡೈಮಂಡ್ ಗ್ರೂಪ್ ಆಫ್ ಇನ್ಸಿಟ್ಯೂಷನ್ ಸಂಸ್ಥೆಯಿಂದ ಗಡಿಭಾಗದಲ್ಲಿ ಶೈಕ್ಷಣಿಕ ಕ್ರಾಂತಿ ನಡೆದಿದೆ. ಗ್ರಾಮೀಣ ಹಾಗೂ ರೈತಾಪಿ ವರ್ಗದ ಬಡ ಮಕ್ಕಳು ಮತ್ತು ನಿರಾಶ್ರಿತರ ಮಕ್ಕಳನ್ನು ಗುರುತಿಸಿ ಅಂತವರಿಗೆ ಕಡಿಮೆ ಖರ್ಚಿನಲ್ಲಿ ಗುಣಾತ್ಮಕ ಶಿಕ್ಷಣ ನೀಡುವ ಮೂಲಕ ಜಿಲ್ಲೆಯಲ್ಲಿ ಈ ಶಿಕ್ಷಣ ಸಂಸ್ಥೆ ವಿಶಿಷ್ಟ ಛಾಪು ಮೂಡಿಸಿದೆ.

ಪದವಿ ಪೂರ್ವ ಶಿಕ್ಷಣದ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಅಂಬೆಗಾಲು ಇಟ್ಟಿದ್ದ ಈ ಶಿಕ್ಷಣ ಸಂಸ್ಥೆ ಇದೀಗ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಜೊತೆಗೆ ಬಸವಕಲ್ಯಾಣದಲ್ಲಿ ವಾಣಿಜ್ಯ, ವಿಜ್ಞಾನ ಕಾಲೇಜು ಮತ್ತು ನೌಬಾದ್ ( ಬೀದರ್) ಪದವಿ ಪೂರ್ವ ವಿಜ್ಞಾನ ವಸತಿ ಸಹಿತ ಕಾಲೇಜು ಆರಂಭಿಸಿ ಸಾಧನೆಯ ದಿಟ್ಟ ಹೆಜ್ಜೆ ಇರಿಸಿದೆ. ಐದು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಈ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, 300ಕ್ಕೂ ಅಧಿಕ ಬೋಧಕ ಬೋಧಕೇತರ ಸಿಬ್ಬಂದಿ ವರ್ಗ ಹೊಂದಿದೆ. ಹಿಂದುಳಿದ ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ದೇಶದ ಉತ್ತಮ ನಾಗರಿಕನಾಗಿಸುವ ಉದ್ದೇಶದೊಂದಿಗೆ 2009ರಲ್ಲಿ ಶೇಕ್ ಮಸ್ತಾನ್ ವಲಿ ಹಾಗೂ ವೈ. ಮಾಧವ ರಾವ್ ಸೇರಿ ಭಾಲ್ಕಿ ಪಟ್ಟಣದ ಸಣ್ಣ ಕಟ್ಟಡ ಒಂದರಲ್ಲಿ ಹುಟ್ಟು ಹಾಕಿದ ಶಿಕ್ಷಣ ಸಂಸ್ಥೆ ಇಂದು ಸುಸಜ್ಜಿತ ಕಟ್ಟಡ, ನುರಿತ ಬೋಧಕರ ವರ್ಗ, ಪ್ರಯೋಗಾಲಯ ಸೇರಿ ಇತ್ಯಾದಿ ಸೌಲಭ್ಯಗಳನ್ನು ಹೊಂದಿದ್ದು, ಪಿಯುಸಿಯಲ್ಲಿ ಉತ್ತಮ ಶಿಕ್ಷಣ ಒದಗಿಸುವ ಮೂಲಕ ಜಿಲ್ಲೆಯ ಶೈಕ್ಷಣಿಕ ಕ್ಷೇತ್ರದಲ್ಲಿ ಆರೋಗ್ಯಕರ ಪೈಪೋಟಿ ನೀಡುತ್ತಿದೆ.

1). ಪ್ರತಿ ವರ್ಷ 50ಕ್ಕೂ ಅಧಿಕ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಸ್ಥೆ ಉಚಿತ ಶಿಕ್ಷಣ ನೀಡುವ ಮೂಲಕ ಮಾನವೀಯತೆ ಮೆರೆದಿದೆ ತಾಲೂಕು ಸೇರಿ ಜಿಲ್ಲೆಯ ನಾನಾ ಭಾಗ ಹಾಗೂ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಉಚಿತ ಶಿಕ್ಷಣ ಪಡೆದುಕೊಂಡು ತಮ್ಮ ಭವಿಷ್ಯ ರೂಪಿಸಿಕೊಂಡಿದ್ದಾರೆ.

**2). ನೂರಾರು ವಿದ್ಯಾರ್ಥಿಗಳಿಗೆ ಮೆಡಿಕಲ್ ಸೀಟು** ಇಲ್ಲಿನ ಶಿಕ್ಷಣ ಸಂಸ್ಥೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಮತ್ತು ಕಾಲೇಜು ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡುವುದರ ಜೊತೆಗೆ ನೀಟ್, ಜೆ ಇ ಇ (ಮೇನ್ಸ್), ಎ ಐ ಐ, ಎಂ ಎಸ್, ಕೆ ಸೆಟ್ ತರಬೇತಿ ನೀಡುವ ಮೂಲಕ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕೆಲಸ ಮಾಡಲಾಗುತ್ತಿದೆ. ಇಲ್ಲಿ ಅಭ್ಯಾಸ ಮಾಡಿದ ನೂರಾರು ವಿದ್ಯಾರ್ಥಿಗಳು ಮೆಡಿಕಲ್, ಎಂಜಿನಿಯರಿಂಗ್ ಸೇರಿ ನಾನಾ ಕೋರ್ಸ್ ಗಳಲ್ಲಿ ಉತ್ತಮ ಅಗ್ರ ಶ್ರೇಣಿ ಪಡೆದು ರಾಜ್ಯದ ಪ್ರತಿಶತ ಕಾಲೇಜುಗಳಲ್ಲಿ ಸೀಟುಗಳನ್ನು ಗಿಟ್ಟಿಸಿಕೊಂಡಿದ್ದಾರೆ.

**3) ಮಧ್ಯ ಪ್ರದೇಶದ ಇಂದೋರ ನ ಐಐಟಿ ಗೆ ಪ್ರವೇಶ:** ರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಜೆ ಇ ಇ ಪರೀಕ್ಷೆಯಲ್ಲಿ ಭಾಲ್ಕಿ ತಾಲೂಕಿನಲ್ಲಿ ಪ್ರಥಮ ಬಾರಿಗೆ ಕನ್ನಡ ಮಾಧ್ಯಮದ ವಿದ್ಯಾರ್ಥಿ ರಾಹುಲ್ ಬಸವರಾಜ್ ಆಲ್ ಇಂಡಿಯಾ 6ನೇ ಅಗ್ರ ಶ್ರೇಣಿ ಪಡೆಯುವ ಮೂಲಕ ರಾಜ್ಯದ ಗಮನ ಸೆಳೆದಿದ್ದಾನೆ.

**4) 2018 19 ನೇ ಸಾಲಿನಲ್ಲಿ ಡಾ. ಎಪಿಜಿ ಅಬ್ದುಲ್ ಕಲಾಂ ರಾಷ್ಟ್ರೀಯ ಪ್ರಶಸ್ತಿ:** ಜಿಲ್ಲೆಯಲ್ಲಿನ ಗುಣಮಟ್ಟದ ಶಿಕ್ಷಣಕ್ಕಾಗಿ ಡಾ. ಎಪಿಜೆ ಅಬ್ದುಲ್ ಕಲಾಂ ಟ್ರಸ್ಟ್ ನಿಂದ ನೀಡಲಾಗುವ ಈ ರಾಷ್ಟ್ರೀಯ ಪ್ರಶಸ್ತಿಯನ್ನು ಡೈಮಂಡ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಶೇಕ್ ಮಸ್ತಾನ್ ವಲಿ ಹಾಗೂ ವೈ. ಮಾಧವ ರಾವ್ ಅವರಿಗೆ ನೀಡಿ ಗೌರವಿಸಿದೆ.

**ಸಾಂಸ್ಕೃತಿಕ ಹಾಗೂ ಕ್ರೀಡೆಯಲ್ಲಿ ವಿದ್ಯಾರ್ಥಿಗಳ ಅದ್ಭುತ ಸಾಧನೆ:** 44ನೇ ಶರಣ ಕಮಟ ಮತ್ತು ಅನುಭವ ಮಂಟಪ ಉತ್ಸವ 2023ರಲ್ಲಿ ಹಮ್ಮಿಕೊಂಡಿದ್ದ ವಚನ ಭಾಷಣ ಸ್ಪರ್ಧೆಯಲ್ಲಿ ಪ್ರಜ್ವಲ್ ಶಂಕರ್ ಪತಂಗೆ ರಾಜ್ಯಕ್ಕೆ ಪ್ರಥಮ ಹಾಗೂ ವಚನ ವಿಶ್ಲೇಷಣೆ ಲೇಖನ ಸ್ಪರ್ಧೆಯಲ್ಲಿ ಶ್ರೀ ಗೌರಿ ಶ್ರೀಕಾಂತಯ್ಯ ಸ್ವಾಮಿ ತೃತೀಯ ಸ್ಥಾನ ಪಡೆದಿದ್ದಾರೆ. ಜಾವೆಲಿನ್ ಥ್ರೋ ಕ್ರೀಡೆಯಲ್ಲಿ ರಾಷ್ಟ್ರೀಯ ಮಟ್ಟಕ್ಕೆ ದಿಶಾ ಸಂತೋಷ್ ನೆಲವಾಡೆ ಆಯ್ಕೆ ಆಗಿರುವುದು ಅತ್ಯಂತ ಹೆಮ್ಮೆಯ ಸಂತೋಷದ ವಿಷಯವಾಗಿದೆ.



**ಗ್ರಾಮೀಣ ಭಾಗದಲ್ಲಿ ನಮ್ಮ ಡೈಮಂಡ್ ಶಿಕ್ಷಣ ಸಂಸ್ಥೆ ಕಡಿಮೆ ಖರ್ಚಿನಲ್ಲಿ ಗುಣಾತ್ಮಕ ಶಿಕ್ಷಣವನ್ನು ನೀಡುತ್ತಿದೆ. ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳು ಅಭೂತ ಪೂರ್ವ ಸಾಧನೆ ಮಾಡುತ್ತಿರುವುದು ಶ್ಲಾಘನೀಯ ಸಂಗತಿಯಾಗಿದೆ.**

**–ಶೇಕ್ ಮಸ್ತಾನ್ ವಲಿ, ಅಧ್ಯಕ್ಷರು ಎಸ್ ಎಸ್ ಶಿಕ್ಷಣ ಸಂಸ್ಥೆ, ಭಾಲ್ಕಿ**



**ವಿದ್ಯಾರ್ಥಿಗಳಲ್ಲಿ ಶಿಸ್ತು ,ಸಮಯ ಪಾಲನೆ, ಪರಿಶ್ರಮ ಮತ್ತು ತಾಳ್ಮೆ ರೂಡಿಸಿದ ಪ್ರತಿಫಲವಾಗಿ ಅವರ ಉನ್ನತ ಭವಿಷ್ಯ ರೂಪಗೊಳ್ಳುತ್ತಿದೆ. ಬೋಧಕರ ಸಮರ್ಪಣಾ ಮನೋ ಭಾವನೆಯಿಂದ ಗುಣಮಟ್ಟ ಶಿಕ್ಷಣ ನೀಡುತ್ತಿದ್ದರಿಂದ ಈ ಸಾಧನೆ ಸಾಧ್ಯವಾಗಿದೆ.**

**–ಯೆರ್ರಾಬೆಲ್ಲಿ ಮಾಧವ ರಾವ್, ಅಧ್ಯಕ್ಷರು ಡೈಮಂಡ್ ಗ್ರೂಪ್ ಆಫ್ ಇನ್ಸಿಟ್ಯೂಶನ್ಸ್**



**ಈ ಶಿಕ್ಷಣ ಸಂಸ್ಥೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅತ್ಯಂತ ಕಡಿಮೆ ಶುಲ್ಕದಲ್ಲಿ ಗುಣಾತ್ಮಕ ಶಿಕ್ಷಣವನ್ನು ಹಾಗೂ ಎಲ್ಲಾ ಹಳ್ಳಿಗಳಲ್ಲಿ ವಾಹನದ ವ್ಯವಸ್ಥೆ ನೀಡಿ ಅವರ ಸರ್ವಾಂಗೀಣ ವಿಕಾಸಗೋಸ್ಕರ ಶ್ರಮಿಸುತ್ತಿದೆ.**

**–ಅಶ್ವಿನ್ ಭೋಸ್ಲೆ, ಮುಖ್ಯ ಆಡಳಿತ ಅಧಿಕಾರಿಗಳು ಡೈಮಂಡ್ ಗ್ರೂಪ್ ಆಫ್ ಇನ್ಸಿಟ್ಯೂಷನ್**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)